ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 58

15-8-2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 58


# ಅಪೂರ್ಣ ಕಾಮಗಾರಿಯಿಂದ ನಿತ್ಯ ನರಕಯಾತನೆ

## ರಸ್ತೆ ಪೂರ್ಣಗೊಳಿಸದಿದ್ದರೆ ಗುಂಡಿಯಲ್ಲಿ ಕೂತು ಹೋರಾಟ

**ದಾವಣಗೆರೆ:** ನಗರದ ಹಳೇ ಕುಂದುವಾಡ ಮುಖ್ಯರಸ್ತೆ ಕಾಮಗಾರಿ ಅರ್ಧಕ್ಕೆ ನಿಂತ ಪರಿಣಾಮ ದಿನ ನಿತ್ಯ ನರಕಯಾತನೆ ಅನುಭವಿಸುವಂತೆ ಆಗಿದ್ದು ಅನೇಕ ಅವಘಡಗಳು ಸಂಭವಿಸುತ್ತಲೇ ಇವೆ, ದಯಮಾಡಿ ರಸ್ತೆ ಕಾಮಗಾರಿ ಪೂರ್ಣ ಮಾಡಿ ಜನರ ಜೀವ ಉಳಿಸುವಂತೆ ಹಳೇ ಕುಂದುವಾಡ ಗ್ರಾಮಸ್ಥರು ಮಹಾನಗರ ಪಾಲಿಕೆ ಕಚೇರಿಗೆ ಇಂದು ಆಗಮಿಸಿ ಪಾಲಿಕೆ ಆಯುಕ್ತರಾದ ರೇಣುಕಾ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರತಿಭಟನಾಕಾರರು, 44ನೇ ವಾರ್ಡ್ ವ್ಯಾಪ್ತಿಯ ಹಳೇ ಕುಂದುವಾಡದವರು, ಈ ಹಿಂದೆ ಕುಂದುವಾಡ ಕೆರೆಯನ್ನ ದಾವಣಗೆರೆಗೆ ಕುಡಿಯುವ ನೀರಿಗಾಗಿ ಬಿಟ್ಟುಕೊಡುವಾಗ ಕುಂದುವಾಡಕ್ಕೆ ಹೆಚ್ಚಿನ ಅಭಿವೃದ್ಧಿ ಕೆಲಸ ಮಾಡುತ್ತೇವೆ ಎಂದು ಅಧಿಕಾರಿಗಳು, ಜನಪ್ರತಿನಿಧಿಗಳು ಮಾತು ಕೊಟ್ಟಿದ್ದರು, ಆದರೆ ದಾವಣಗೆರೆ ಸಿಟಿಯಿಂದ ಕುಂದುವಾಡಕ್ಕೆ ಹೋಗುವ ಮುಖ್ಯ ರಸ್ತೆಯೇ ಇದುವರೆಗೆ ಅಭಿವೃದ್ಧಿ ಮಾಡಿಕೊಡಲು ಆಗಿಲ್ಲ, ತಾತ್ಕಾಲಿಕವಾಗಿ ಡಾಂಬರ್ ಹಾಕಿದ್ದು ಮೂರೇ ದಿನಕ್ಕೆ ಕಿತ್ತೋಗಿದೆ, ಹಲವು ವರ್ಷಗಳಿಂದ ರಸ್ತೆ ಮಾಡಿಕೊಡಿ ಮಾಡಿಕೊಡಿ ಎಂದು ಬೇಡುವ ಪರಿಸ್ಥಿತಿ ತಪ್ಪಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕುಂದುವಾಡ ಕೆರೆ ಸಮೀಪ ಶಿವಗಂಗಾ ಕಲ್ಯಾಣ ಮಂಟಪ ಹಾಗೂ ಬಿಂದಾಸ್ ಬಾರ್ ಮುಂಭಾಗದ ಮುಖ್ಯ ರಸ್ತೆ ವಿವಾದಗಳಿಂದ ನಲುಗಿ ಹೋಗಿದೆ,



ಈ ಹಿಂದೆ ರಸ್ತೆಗೆ ಅಡ್ಡವಾಗಿ ತಂತಿ ಬೇಲಿ ನಿರ್ಮಿಸಿ ಸಂಚಾರವನ್ನೆ ಬಂದ್ ಮಾಡಲಾಗಿತ್ತು, ಇದರ ಪರಿಣಾಮ ರಸ್ತೆ ಕಾಮಗಾರಿ ಅರ್ಧಕ್ಕೆ ನಿಂತು ಆ ಜಾಗದಲ್ಲಿ ಮಳೆ ಬಂದರೆ ಎರಡ್ಮೂರು ಅಡಿಗಿಂತ ಹೆಚ್ಚು ನೀರು ಹರಿಯುತ್ತದೆ, ಇಲ್ಲಿ ಬೈಕ್ ಸವಾರರು ಪ್ರಯಾಣಿಕರು ಬಿದ್ದು ಗಾಯಗೊಂಡಿದ್ದಾರೆ, ಇದೇ ರಸ್ತೆಯಲ್ಲಿ ಶಾಲಾ ಮಕ್ಕಳು, ವಿದ್ಯಾರ್ಥಿಗಳು ಸಂಚರಿಸುವುದರಿಂದ ನೀರಿನಲ್ಲಿ, ಚರಂಡಿಯಲ್ಲಿ ಕೊಚ್ಚಿ ಹೋಗುವ ಸಾಧ್ಯತೆ ಇರುತ್ತದೆ, ಈ ವಿಚಾರವಾಗಿ ಮಹಾನಗರ ಪಾಲಿಕೆಗೆ ಪದೇ ಪದೇ ಮನವಿ ಮಾಡಿದ್ದರು, ಈ ಬಗ್ಗೆ ಕ್ರಮ ವಹಿಸಿಲ್ಲ, ವಿದ್ಯಾರ್ಥಿಗಳು, ಜನರು ಜೀವ ಕೈಯಲ್ಲಿ ಹಿಡಿದು ಪ್ರಯಾಣಿಸುವ ಪರಿಸ್ಥಿತಿ ಎದುರಾಗಿದೆ, ಈ ಹಿನ್ನಲೆ ಅವಘಡ ಆಗುವ ಮುನ್ನ ಎಚ್ಚೆತ್ತುಕೊಳ್ಳುವಂತೆ ವಿನಂತಿ ಮಾಡುತ್ತಿದ್ದೇವೆ, ಜೊತೆಗೆ ಕುಂದುವಾಡ ಕೆರೆ ಮೇಲ್ಭಾಗದ ರಸ್ತೆಯಲ್ಲಿ ದೊಡ್ಡ ದೊಡ್ಡ ಗುಂಡಿಗಳು ಬಿದ್ದು ಸಂಚಾರ ಮಾಡಲು ಅನಾನುಕೂಲವಾಗಿದೆ, ಮಳೆ ಬಂದರೆ ದೇವರೇ ಕಾಪಾಡಬೇಕಾದ ಸ್ಥಿತಿ ಎದುರಾಗಿದೆ, ಬಿಂದಾಸ್ ಬಾರ್ ಮುಂಭಾಗದಿಂದ ಕುಂದುವಾಡ ಕೆರೆ ಎರಡನೇ ಗೇಟ್ ವರೆಗೆ ಸುಸಜ್ಜಿತ ಸಿಸಿ ರಸ್ತೆ ನಿರ್ಮಿಸಿ ಬೀದಿ ದೀಪ ಅಳವಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕಾಗಿ ವಿನಂತಿ. ತಾತ್ಕಾಲಿಕವಾಗಿ ಕೆರೆ ರಸ್ತೆಯ ಗುಂಡಿಗಳನ್ನು ಮುಚ್ಚಿ ಜೊತೆಗೆ ಕೆರೆಯ ಒಳಭಾಗದಲ್ಲಿ ಬೀದಿ ದೀಪಗಳಿದ್ದು ಕೆಲವೆಡೆ ಕುಂದುವಾಡ ಕೆರೆ ರಸ್ತೆ ಕಡೇ ತಿರುಗಿಸಿದರೇ ರಾತ್ರಿ ಸಮಯದಲ್ಲಿ ಅನುಕೂಲವಾಗುತ್ತದೆ, ಈ ಕೆಲಸವನ್ನು ಮಾಡಿಕೊಡಬೇಕಾಗಿ ವಿನಂತಿ. 15ದಿನಗಳ ಒಳಗಾಗಿ ಕುಂದುವಾಡ ಮುಖ್ಯ ರಸ್ತೆ ಅಭಿವೃದ್ಧಿಗೆ ಕ್ರಮ ವಹಿಸದಿದ್ದಲ್ಲಿ ರಸ್ತೆಯ ಮಧ್ಯೆಯೇ ಗುಂಡಿಯಲ್ಲಿ ಕೂತು ರಸ್ತೆ ಬಂದ್ ಮಾಡಿ ಬೃಹತ್ ಹೋರಾಟ ಮಾಡಲಾಗುವುದು ಹಾಗೂ ಮಹಾನಗರ ಪಾಲಿಕೆಗೆ ಮುತ್ತಿಗೆ ಹಾಕಿ ಹೋರಾಟ ಮಾಡಲಾಗುವುದು ಎಂದು ಗ್ರಾಮಸ್ಥರು ಎಚ್ಚರಿಕೆ ನೀಡಿದರು.



ಈ ಸಂದರ್ಭದಲ್ಲಿ ಪಾಲಿಕೆ ಇಂಜಿನಿಯರ್ ಆದ ಜಯಲಕ್ಷ್ಮಿ, ಮಾಜಿ ಮೇಯರ್ ಹೆಚ್ ಎನ್ ಗುರುನಾಥ್, ಎಪಿಎಂಸಿ ಮಾಜಿ ಅಧ್ಯಕ್ಷ ಹೆಚ್ ಜಿ ಗಣೇಶಪ್ಪ, ಮುಖಂಡರಾದ ಜಿಮ್ಮಿ ಹನುಮಂತಪ್ಪ, ಡಿಎಸ್ ಎಸ್ ಮಂಜುನಾಥ್, ಮಾರುತಿ, ಯರಿಯಪ್ಪರ ಸಂಪತ್ ಕುಮಾರ್, ಮಧುನಾಗರಾಜ್, ನಬಿ, ಅಣ್ಣೇಶ್, ಚಂದ್ರಪ್ಪ, ಮಹಾಂತೇಶ್, ರಾಜೂ, ಸೇರಿದಂತೆ ಮತ್ತಿತರರಿದ್ದರು.

# ತಪ್ಪು ಮಾಡಿದವರಿಗೆ ಶಿಕ್ಷೆಯಾಗಲಿ:ಸಹನಾ



**ಚಿತ್ರದುರ್ಗ,ಆ.14:**ಯಾರು ತಪ್ಪು ಮಾಡಿದ್ದಾರೆ ಅವರಿಗೆ ಶಿಕ್ಷೆಯಾಗಬೇಕು.ಕಾನೂನಿನ ಪ್ರಕಾರ ಶಿಕ್ಷೆಯಾಗಲಿ ಎಂದು ಹತ್ಯೆಗೀಡಾದ ರೇಣುಕಾಸ್ವಾಮಿ ಪತ್ನಿ ಸಹನಾ ಹೇಳಿದರು.

ನಟ ದರ್ಶನ್ ಸೇರಿದಂತೆ 7 ಆರೋಪಿಗಳ ಜಾಮೀನನ್ನು ಸುಪ್ರೀಂಕೋರ್ಟ್ ರದ್ದುಪಡಿಸಿದ ಬೆನ್ನಲ್ಲೆ ಚಿತ್ರದುರ್ಗದಲ್ಲಿ ಪ್ರತಿಕ್ರಿಯೆ ನೀಡಿರುವ ಆದೇಶವನ್ನು ಅವರು ಸ್ವಾಗತಿಸಿದ್ದಾರೆ.

ರೇಣುಕಾಸ್ವಾಮಿ ಚಿಕ್ಕಪ್ಪ ಷಡಾಕ್ಷರಿ ಮಾತನಾಡಿ ಸರ್ಕಾರ ಮುಂದೆ ಹೋಗದಿದ್ದರೆ ತಪ್ಪಾಗುತ್ತಿತ್ತು, ತ್ವರಿತ ವಿಚಾರಣೆಗೆ ಸುಪ್ರೀಂಕೋರ್ಟ್ ಆದೇಶ ನೀಡಿದೆ ಎಂದರು.

ದರ್ಶನ್ ಸೇರಿದಂತೆ 7 ಮಂದಿ ಆರೋಪಿಗಳಿಗೆ ಜಾಮೀನು ರದ್ದುಪಡಿಸಿರುವ ಕ್ರಮ ಸ್ವಾಗತಾರ್ಹ.ತಮ್ಮ ಪುತ್ರನ ಸಾವಿಗೆ ನ್ಯಾಯ ಸಿಕ್ಕಿದೆ. ಕಾನೂನಿನ ಬಗ್ಗೆ ನಂಬಿಕೆ ಇದೆ ಎಂದು ರೇಣುಕಾಸ್ವಾಮಿ ತಾಯಿ ರತ್ನಮಲಾ ಪ್ರತಿಕ್ರಿಯಿಸಿದ್ದಾರೆ.

ಮನೆ ದೇವರಿಗೆ ಇಂದು ಅಭಿಷೇಕ ಸಲ್ಲಿಸಲು ಹೊರಟಿದ್ದೆವು. ಇಂದು ತೀರ್ಪು ಬರುವ ಬಗ್ಗೆ ಮಾಹಿತಿ ಇರಲಿಲ್ಲ. ಒಳ್ಳೆಯ ತೀರ್ಪು ಬಂದಿದೆ.ಮಗನ ಆತ್ಮಕ್ಕೆ ಶಾಂತಿ ಸಿಕ್ಕಿತು ಎಂದು ಹೇಳಿದ್ದಾರೆ.

# ಷೇರುದಾರರ ಮಕ್ಕಳಿಗೆ ಪ್ರತಿಭಾಪುರಸ್ಕಾರಕ್ಕೆ ಆಹ್ವಾನ

**ದಾವಣಗೆರೆ:** ಶ್ರೀ ಕಲ್ಪತರು ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಲಿ., ವತಿಯಿಂದ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 85ಕ್ಕಿಂತ ಹೆಚ್ಚು ಅಂಕ ಗಳಿಸಿದ ಷೇರುದಾರರ ಮಕ್ಕಳಿಗೆ ಹಾಗೂ ಮೊಮ್ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ.

ಅರ್ಹ ವಿದ್ಯಾರ್ಥಿಗಳು ಅಂಕಪಟ್ಟಿಯ ನಕಲು ಪ್ರತಿ, ಭಾವಚಿತ್ರ ಹಾಗೂ ಪೋಷಕರ ಹೆಸರು, ಷೇರು ಸದಸ್ಯತ್ವ ದೃಢೀಕರಣಕ್ಕಾಗಿ ಗುರುತಿನ ಚೀಟಿ,ನಕಲು ಪ್ರತಿಯೊಂದಿಗೆ ಆ.30ರೊಳಗಾಗಿ ಸೊಸೈಟಿಗೆ ಅರ್ಜಿ ಸಲ್ಲಿಸಬಹುದು. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ನೀಡಲಾಗುವುದು ಎಂದು ಅಧ್ಯಕ್ಷರಾದ ಡಿ. ಎನ್. ಜಗದೀಶ್ ಮತ್ತು ಮುಖ್ಯಕಾರ್ಯನಿರ್ವಾಹಕರಾದ ಡಿ.ಆರ್.ಶ್ರೀನಿವಾಸ್ ತಿಳಿಸಿದ್ದು, ಹೆಚ್ಚಿನ ಮಾಹಿತಿಗೆ ಮೊ: 9845784338 ಸಂಪರ್ಕಿಸಬಹುದಾಗಿದೆ.

# ಇಂದು ದವನ್, ನೂತನ ಕಾಲೇಜು ಶೈಕ್ಷಣಿಕ ವರ್ಷದ ಉದ್ಘಾಟನೆ

**ದಾವಣಗೆರೆ:** ದವನ್ ಮತ್ತು ನೂತನ ಪದವಿ ಪೂರ್ವ ಕಾಲೇಜಿನ 2025 – 26 ನೇ ಸಾಲಿನ ಶೈಕ್ಷಣಿಕ ವರ್ಷದ ಉದ್ಘಾಟನೆ ಮತ್ತು 2024-25 ನೇ ಸಾಲಿನ ಪ್ರತಿಭಾ ಪುರಸ್ಕಾರ ಸಮಾರಂಭವು ಆ.15ರಂದು ಮಧ್ಯಾಹ್ನ 3ಕ್ಕೆ ನಗರದ ಬಾಪೂಜಿ ಬ್ಯಾಂಕ್ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ

ಬಿ. ತಹಶೀಲ್ದಾರ್ ಡಾ. ಎಂ.ಬಿ. ಡಾ. ಅಶ್ವತ್ಥ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪ-ನಿರ್ದೇಶಕ ಡಿ. ಪಳನಿವೇಲು ಪಾಲ್ಗೊಳ್ಳಲಿದ್ದಾರೆ. ನೂತನ ಕಾಲೇಜು ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರೊ ಎಸ್ ಹಾಲಪ್ಪ, ದವನ್ ಕಾಲೇಜು ಜಂಟಿ ಕಾರ್ಯದರ್ಶಿ ಡಾ. ಅಂಜು, ನಿರ್ದೇಶಕ ಹರ್ಷರಾಜ್ ಎ ಗುಜ್ಜರ್ ಭಾಗವಹಿಸಲಿದ್ದು, ನೂತನ ವಿದ್ಯಾಸಂಸ್ಥೆ ಅಧ್ಯಕ್ಷ ಎಸ್. ಪರಶುರಾಮನಗೌಡ ಅಧ್ಯಕ್ಷತೆ ವಹಿಸುವರು.

# "ಹರ್ ಘರ್ ತಿರಂಗಾ, ಹರ್ ಘರ್ ಸ್ವಚ್ಛತಾ, ಸ್ವಚ್ಛತೆಯೊಂದಿಗೆ ಸ್ವಾತಂತ್ರ್ಯದ ಉತ್ಸವ"



**ದಾವಣಗೆರೆ:** 79ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಗುರುವಾರ ಹರ್‌ಘರ್ ತಿರಂಗಾ, ಹರ್‌ಘರ್ ಸ್ವಚ್ಛತಾ ಅಭಿಯಾನದಡಿ ನೀರು ಮತ್ತು ನೈರ್ಮಲ್ಯ ಕುರಿತು ಅರಿವು ಮೂಡಿಸಲಾಯಿತು.

ಈ ಅಭಿಯಾನದಡಿ ದೇಶದಾದ್ಯಂತ ಗ್ರಾಮೀಣ ಜನರಲ್ಲಿ ನೀರು ಮತ್ತು ನೈರ್ಮಲ್ಯ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಉದ್ದೇಶದೊಂದಿಗೆ ಕೇಂದ್ರ ಸಂಸ್ಕೃತಿ ಸಚಿವಾಲಯ ಹಾಗೂ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯಗಳ ಜಂಟಿ ಸಹಯೋಗದಲ್ಲಿ "ಹರ್‌ಘರ್ ತಿರಂಗಾ, ಹರ್ ಘರ್ ಸ್ವಚ್ಛತಾ, ಸ್ವಚ್ಛತೆಯೊಂದಿಗೆ ಸ್ವಾತಂತ್ರ್ಯದ ಉತ್ಸವ" ಆಚರಣೆ ಎಂಬ ಘೋಷವಾಕ್ಯದೊಂದಿಗೆ ಇದೇ ಆಗಸ್ಟ್ 8 ರಿಂದ 15 ರವರೆಗೆ ಒಂದು ವಾರದ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠ್ಠಲರಾವ್ ತಿಳಿಸಿದರು.

ನಾಗರಿಕರಲ್ಲಿ ಒಗ್ಗಟ್ಟಿನ ಮನೋಭಾವ ಬೆಳೆಸುವುದು, ಸ್ವಾತಂತ್ರ್ಯದ ಸಾರ, ಸ್ವಚ್ಛತೆ ಮತ್ತು ಸುಜಲತೆ ಗುರಿಗಳೊಂದಿಗೆ ಸಂಯೋಜಿಸುವುದು. ನೀರು. ನೈರ್ಮಲ್ಯ ಮತ್ತು ಶುಚಿತ್ವ ವ್ಯವಸ್ಥೆಯನ್ನು ಬಲಪಡಿಸುವುದು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸುರಕ್ಷಿತ ಕುಡಿಯುವ ನೀರು, ಸುಸ್ಥಿರ ನೈರ್ಮಲ್ಯ ಮತ್ತು ಸುಧಾರಿತ ಶುಚಿತ್ವವನ್ನು ಖಚಿತಪಡಿಸುವುದು ಇದರ ಪ್ರಮುಖ ಉದ್ದೇಶವಾಗಿದೆ.

ಈ ಹಿನ್ನೆಲೆಯಲ್ಲಿ 'ಹರ್ ಘರ್ ತಿರಂಗಾ, ಹರ್ ಘರ್ ಸ್ವಚ್ಛತಾ, ಸ್ವಚ್ಛತೆಯೊಂದಿಗೆ ಸ್ವಾತಂತ್ರ್ಯದ ಉತ್ಸವ" ಅಭಿಯಾನದಲ್ಲಿ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದು ಹಾಗೂ ಸ್ಥಳೀಯ ಸಂಸ್ಥೆಗಳು, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳು ಸ್ವ-ಸಹಾಯ ಸಂಘದ ಗುಂಪುಗಳು ಪಂಚಾಯತ್ ರಾಜ್ ಸಂಸ್ಥೆಗಳು, ಶಾಲಾ ಮಕ್ಕಳು, ಸ್ವಯಂ ಸೇವಕರು ಮತ್ತು ಮುಂಚೂಣಿ ಕಾರ್ಯಕರ್ತೆಯರು ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದರು.

ಇದೆ ವೇಳೆ ಜಿಲ್ಲಾ ಪಂಚಾಯತ್ ಮುಂಭಾಗದ ಆವರಣ, ಆವರಣದಲ್ಲಿನ ಉದ್ಯಾನವನ ಸೇರಿದಂತೆ ಹಲವೆಡೆ ಸ್ವಚ್ಚತಾ ಕಾರ್ಯ ಅಭಿಯಾನದಲ್ಲಿ ಭಾಗವಹಿಸಿ ಕಸ, ನೀರಿನ ಬಾಟಲ್, ವಿವಿಧ ರೀತಿಯ ತ್ಯಾಜ್ಯ ಸಂಗ್ರಹಿಸುವ ಮೂಲಕ ಸ್ವತಃ ಸಿಇಓ ಗಿತ್ತೆ ಮಾಧವ ವಿಠಲ ರಾವ್ ರವರು ಸ್ವಚ್ಚತಾ ಕಾರ್ಯದಲ್ಲಿ ತೊಡಗಿದ್ದರು. ಈ ವೇಳೆ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಮತಾ ಹೊಸಗೌಡರ್, ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ್, ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್ ಸೇರಿದಂತೆ ಜಿಲ್ಲಾ ಪಂಚಾಯತ್ ಸಿಬ್ಬಂದಿ ಇದ್ದರು.

# ದರ್ಶನ್ ಮತ್ತೆ ಜೈಲು

## ಪವಿತ್ರಾಗೌಡ ಸೇರಿದಂತೆ 7 ಆರೋಪಿಗಳ ಜಾಮೀನು ರದ್ದು:ಸುಪ್ರೀಂ ಮಹತ್ವದ ಆದೇಶ



**ನವದೆಹಲಿ,ಆ.14:**ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್, ಪವಿತ್ರಾಗೌಡ ಸೇರಿದಂತೆ ಎಲ್ಲ 7 ಮಂದಿ ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಜಾಮೀನನ್ನು ಸುಪ್ರೀಂಕೋರ್ಟ್ ರದ್ದುಪಡಿಸಿದೆ. ಹೀಗಾಗಿ ಕಾನೂನು ಸಮರದಲ್ಲಿ ದರ್ಶನ್ ಹಾಗೂ ಇತರ 7 ಮಂದಿ ಆರೋಪಿಗಳಿಗೆ ಭಾರಿ ಹಿನ್ನಡೆಯಾಗಿದೆ. ಈ ಹಿನ್ನೆಲೆಯಲ್ಲಿ ದರ್ಶನ್ ಹಾಗೂ ಇತರರು ಜೈಲುಪಾಲಾಗಲಿದ್ದಾರೆ.

ಆರೋಪಿಯಾಗಿರುವ ನಟ ದರ್ಶನ್, ಪವಿತ್ರಾಗೌಡ ಹಾಗೂ ಇತರ ಆರೋಪಿಗಳನ್ನು ತಕ್ಷಣ ವಶಕ್ಕೆ ಪಡೆಯುವಂತೆ ಅಧಿಕಾರಿಗಳಿಗೆ ಸುಪ್ರೀಂಕೋರ್ಟ್ ಸೂಚಿಸಿದ್ದು, ಈ ಪ್ರಕರಣದ ವಿಚಾರಣೆಯನ್ನು ತ್ವರಿತವಾಗಿ ನಡೆಸುವಂತೆ ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಗಳಾದ ಜೆ.ಬಿ ಪಾರ್ದಿವಾಲಾ ಹಾಗೂ ಆರ್. ಮಹದೇವನ್ ಅವರಿದ್ದ ದ್ವಿಸದಸ್ಯ ನ್ಯಾಯಪೀಠ ನಿರ್ದೇಶನ ನೀಡಿದೆ.

ದರ್ಶನ್ ಪ್ರಕರಣದಲ್ಲಿ ಕರ್ನಾಟಕ ಹೈಕೋರ್ಟ್ ನೀಡಿರುವ ಆದೇಶದಲ್ಲಿ ಹಲವು ನ್ಯೂನ್ಯತೆಗಳಿವೆ ಎಂದು ಹೇಳಿರುವ ನ್ಯಾಯಪೀಠ, ಎಲ್ಲ 7 ಮಂದಿ ಆರೋಪಿಗಳಿಗೆ ನೀಡಿರುವ ಜಾಮೀನು ರದ್ದುಗೊಳಿಸಿರುವುದಾಗಿ ತಿಳಿಸಿದೆ.

ನಾವು ಎಲ್ಲ ವಿಚಾರಗಳನ್ನು ಗಂಭೀರವಾಗಿ ಪರಿಗಣಿಸಿದ್ದೇವೆ. ಹೈಕೋರ್ಟ್ ಆದೇಶವು ಗಂಭೀರ ದೌರ್ಬಲ್ಯಗಳಿಂದ ಕೂಡಿರುವುದು ಸ್ಪಷ್ಟವಾಗಿದೆ ಎಂದು ನ್ಯಾಯಪೀಠ ಹೇಳಿದೆ.

ದರ್ಶನ್ ಜತೆ ಪವಿತ್ರಾಗೌಡ, ಎ-6 ಜಗದೀಶ್ ಅಲಿಯಾಸ್ ಜಗ್ಗ, ಎ-7 ಅನುಕುಮಾರ್ ಅಲಿಯಾಸ್ ಅನು, ಎ-14 ಪ್ರದೂಷ್, 1-11 ನಾಗರಾಜ್ ಅಲಿಯಾಸ್ ನಾಗ, ಎ-12 ಲಕ್ಷ್ಮಣ್ ಜಾಮೀನು ಕೂಡ ಸುಪ್ರೀಂಕೋರ್ಟ್ ರದ್ದುಪಡಿಸಿದೆ.

ಆರೋಪಿ ಎಷ್ಟೇ ದೊಡ್ಡವರಿದ್ದರೂ ಕಾನೂನಿಗಿಂತ ದೊಡ್ಡವರಲ್ಲ ಎಂದಿರುವ ಸುಪ್ರೀಂಕೋರ್ಟ್, ಜೈಲಿನಲ್ಲಿ ಆರೋಪಿಗಳಿಗೆ ಐಷಾರಾಮಿ ಸೇವೆ ಒದಗಿಸಿರುವ ಬಗ್ಗೆಯೂ ಗರಂ ಆಗಿರುವ ನ್ಯಾಯಪೀಠ, ಈ ವಿಚಾರದಲ್ಲಿ ಜೈಲು ಸೂಪರಿಂಟೆಂಡೆಂಟ್ ಅವರನ್ನು ಅಮಾನತು ಮಾಡಬೇಕಾಗಿತ್ತು ಎಂದು ನ್ಯಾಯಪೀಠ ಹೇಳಿದೆ.

ಜೈಲಿನಲ್ಲಿ ನಟ ದರ್ಶನ್‌ಗೆ ಐಷಾರಾಮಿ ಸೌಲಭ್ಯ ಕಲ್ಪಿಸಿರುವ ವಿಚಾರವನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂಕೋರ್ಟ್, ಇಂತಹ ಫೋಟೋ, ವೀಡಿಯೊಗಳು ಕಂಡುಬಂದರೆ ಗೃಹ ಇಲಾಖೆ ಸುಪ್ರೀಂಕೋರ್ಟ್‌ಗೆ ಕರೆಸಬೇಕಾಗುತ್ತದೆ ಎಂದು ನ್ಯಾಯಪೀಠ ಖಡಕ್ ಎಚ್ಚರಿಕೆ ನೀಡಿದೆ.

ಇನ್ನು ಮುಂದೆ ಜೈಲಿನೊಳಗೆ ಐಷಾರಾಮಿ ಸೌಲಭ್ಯ ನೀಡುವುದು ಕಂಡು ಬಂದರೆ ಜೈಲು ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವುದಾಗಿ ಸುಪ್ರೀಂಕೋರ್ಟ್ ತಾಕೀತು ಮಾಡಿದೆ.

ತೀರ್ಪಿನ ಬಗ್ಗೆ ಪ್ರತಿಕ್ರಿಯೆ ನೀಡಿರುವ ಸರ್ಕಾರದ ಪರ ವಕೀಲರು ನಾವು ಕಲೆ ಹಾಕಿದ ಸಾಕ್ಷ್ಯವನ್ನು ಸುಪ್ರೀಂಕೋರ್ಟ್ ಒಪ್ಪಿದ್ದು, ಇದು ಮಹತ್ವದ ತೀರ್ಪಾಗಿದೆ. ನಟ ದರ್ಶನ್ ಜೈಲಿನಲ್ಲಿ ನಡೆಸಿದ ಐಷಾರಾಮಿ ಜೀವನ ಹೊರಬಂದ ಬಳಿಕ ನಡೆದುಕೊಂಡ ರೀತಿಯನ್ನು ನಾವು ಸುಪ್ರೀಂಕೋರ್ಟ್‌ಗೆ ಮನವರಿಕೆ ಮಾಡಿಕೊಟ್ಟಿದ್ದೆವು ಎಂದು ಹೇಳಿದರು.

ಕಳೆದ ವರ್ಷ ಜೂ. 11 ರಂದು ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ದರ್ಶನ್ ಅವರನ್ನು ಬಂಧಿಸಲಾಗಿತ್ತು. 4 ತಿಂಗಳಿಗೂ ಅಧಿಕ ಕಾಲ ಅವರು ಸೆರೆ ವಾಸದಲ್ಲಿರಬೇಕಾಗಿತ್ತು. ಬೆನ್ನು ನೋವಿನ ಕಾರಣ ನೀಡಿ ಜೈಲಿನಿಂದ ಹೊರಬಂದಿದ್ದರು.

ಡಿಸೆಂಬರ್‌ನಲ್ಲಿ ಅವರಿಗೆ ಜಾಮೀನು ಲಭಿಸಿತ್ತು. ಈ ತೀರ್ಪನ್ನು ಪ್ರಶ್ನಿಸಿ ರಾಜ್ಯಸರ್ಕಾರ ಸುಪ್ರೀಂಕೋರ್ಟ್‌ಗೆ ಮೊರೆ ಹೋಗಿತ್ತು.ಹಲವು ದಿನಗಳ ಕಾಲ ಸುಪ್ರೀಂಕೋರ್ಟ್‌ನಲ್ಲಿ ವಾದ-ಪ್ರತಿವಾದ್ದಾ ಆಲಿಸಿದ ನ್ಯಾಯಪೀಠ ತೀರ್ಪನ್ನು ಕಾಯ್ದಿರಿಸಿತ್ತು.

ಕರ್ನಾಟಕ ಹೈ ಕೋರ್ಟ್ ಜಾಮೀನು ನೀಡಿದ ಕಾರಣಗಳ ಬಗ್ಗೆ ಸುಪ್ರೀಂಕೋರ್ಟ್ ಅಸಮಾಧಾನ ಹೊರ ಹಾಕಿತ್ತು. ಈಗ ಸುಪ್ರೀಂಕೋರ್ಟ್ ತೀರ್ಪು ನೀಡಿದ್ದು, ದರ್ಶನ್ ಅವರಿಗೆ ಜಾಮೀನು ಮಂಜೂರು ಮಾಡಿದ್ದರ ಬಗ್ಗೆ ಈ ಹಿಂದೆ ಸುಪ್ರೀಂಕೋರ್ಟ್ ರಾಜ್ಯಹೈಕೋರ್ಟ್‌ಗೆ ಛೀಮಾರಿ ಹಾಕಿತ್ತು.

**ಸತ್ಯ ಎಲ್ಲಕ್ಕಿಂತ ಶಕ್ತಿಶಾಲಿ: ಪವಿತ್ರಾ–** ರೇಣುಕಾಸ್ವಾಮಿ ಕೊಲೆ ಆರೋಪದಲ್ಲಿ ಆರೋಪಿಯಾಗಿರುವ ಪವಿತ್ರಾಗೌಡ ತೀರ್ಪು ಹೊರ ಬರುವ ಮುನ್ನ ಸತ್ಯ ಎಲ್ಲಕ್ಕಿಂತ ಶಕ್ತಿಶಾಲಿ. ಅದು ನ್ಯಾಯ ಕೊಡುತ್ತೆಎಂದು ಪವಿತ್ರಾಗೌಡ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದರು.

ಈ ಪೋಸ್ಟ್‌ನಲ್ಲಿ ಯಾವಾಗಲು ನ್ಯಾಯವನ್ನು ಕೊಡುತ್ತವೆ.

# ಪತ್ರಕರ್ತರ ಬದುಕಿಗೆ ಶಾಶ್ವತ ಭದ್ರತೆ ಅಗತ್ಯ: ಡಿ.ಜಿ. ಶಾಂತನಗೌಡ

**ಹೊನ್ನಾಳಿ:** ದೀಪದ ಕೆಳಗೆ ಕತ್ತಲು ಎನ್ನುವಂತೆ ಪತ್ರಕರ್ತ ಇಡೀ ಸಮಾಜವನ್ನು ಸರಿ ಮಾಡಲು ಪ್ರಯತ್ನ ಮಾಡುತ್ತಾನೆ. ಆದರೆ ಆತನ ಬದುಕು ಬಹಳ ದುಸ್ತಿರವಾಗಿರುತ್ತದೆ ಎಂದು ಶಾಸಕ ಡಿ.ಜಿ. ಶಾಂತನಗೌಡ ಪತ್ರಕರ್ತರ ಬದುಕಿನ ಬಗ್ಗೆ ಕಳವಳ ವ್ಯಕ್ತಪಡಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಘಟಕದ ವತಿಯಿಂದ ಪಟ್ಟಣದ ತಾಲ್ಲೂಕು ಪಂಚಾಯಿತಿ ಸಾಮರ್ಥ್ಯ ಸೌಧದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ, ಪ್ರತಿಭಾ ಪುರಸ್ಕಾರ, ಗಣ್ಯರಿಗೆ ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆಗೊಳಿಸಿ, ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಪತ್ರಿಕೋದ್ಯಮದಲ್ಲಿ



ಪತ್ರಕರ್ತರ ಬದುಕು ಜೀವನ ಭದ್ರತೆ ಇಲ್ಲದೆ ಅತಂತ್ರ ಸ್ಥಿತಿಯತ್ತ ಸಾಗುತ್ತಿದೆ ಎಂದು ಅವರು ಅಭಿಪ್ರಾಯ ಪಟ್ಟರು. ಬರುವ ಗೌರವ ಧನವನ್ನೇ ನಂಬಿಕೊಂಡು ಸಮಾಜದ ಅಂಕು ಡೊಂಕುಗಳನ್ನು ತಿದ್ದಿ ನೊಂದವರಿಗೆ ನ್ಯಾಯ ಕೊಡಿಸುವ ಪತ್ರಕರ್ತರ ಬಗ್ಗೆ ನಮ್ಮ ಸಾಮಾಜಿಕ ಮತ್ತು ಆಡಳಿತ ವ್ಯವಸ್ಥೆಗಳು ಚಿಂತನೆ ಮಾಡಬೇಕಾದ ಅಗತ್ಯವಿದೆ ಎಂದರು. ಪ್ರಸ್ತುತ ದಿನಗಳಲ್ಲಿ ಟಿ.ವಿ. ಮೊಬೈಲ್, ಯೂಟ್ಯೂಬ್ ಚಾಲನ್‌ಗಳಿಂದಾಗಿ ದಿನ ಪತ್ರಿಕೆಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವಂತಾಗಿದ್ದು, ಇದನ್ನು ಮೀರಿ ಇನ್ನೂ ಕೂಡ ಪತ್ರಿಕೆಗಳು ತಮ್ಮತನವನ್ನು ಉಳಿಸಿಕೊಂಡು ಹೋಗುತ್ತಿವೆ ಎಂದು ಶ್ಲಾಘಿಸಿದರು.

ಯುವ ಸಾಹಿತಿ, ಪತ್ರಕರ್ತ ದರ್ಶನ್ ಬಳ್ಳೇಶ್ವರ ಉಪನ್ಯಾಸ ನೀಡಿ, ಪತ್ರಿಕೆಗಳ ಪರಿಕಲ್ಪನೆ 12ನೇ ಶತಮಾನ ಬಸವಣ್ಣನವರ ಕಾಲದಿಂದಲೇ ಆರಂಭಗೊಂಡು ಇಂದಿನವರೆಗೆ ಮುಂದುವರೆದು ಕೊಂಡು ಬರುತ್ತಿದೆ, ಮನುಷ್ಯನ ನೋವು, ನಲಿವುಗಳನ್ನು ದಿನದ ಬದುಕಿನ ಚಟುವಟಿಕೆಗಳ ಬಗ್ಗೆ ವಚನಗಳಲ್ಲಿ ಹೇಳುವ ಮೂಲಕ ವಚನ ಸಾಹಿತ್ಯ ಪತ್ರಿಕೆಗಳ ಕೆಲಸ ಮಾಡಿದೆ ಎಂದರು.

ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷ ಕೋರಿ ಯೋಗೀಶ್ ಕುಳಗಟ್ಟೆ ಅಧ್ಯಕ್ಷತೆ ವಹಿಸಿದ್ದರು.

ಪತ್ರಕರ್ತರ ಸಂಘದ ಜಿಲ್ಲಾ ಪ್ರತಿನಿಧಿ ಎನ್. ಕೆ.ಆಂಜನೇಯ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಸಕ ಡಿ.ಜಿ. ಶಾಂತನಗೌಡ ಅವರಿಗೆ ಶಾಂತಿದೂತ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್ ಎಚ್. ಸುನಿಲ್ ಕುಮಾರ್ ಅವರಿಗೆ ಜನ ಸ್ನೇಹಿ ಪೊಲೀಸ್ ಅಧಿಕಾರಿ ಎಂಬ ಬಿರುದು ನೀಡಿ ಸನ್ಮಾನಿಸಲಾಯಿತು. ತಾಲ್ಲೂಕಿನ ಹಿರಿಯ ಪತ್ರಕರ್ತ ಎಂ.ಪಿ.ಎಂ. ವಿಜಯಾನಂದ, ಕುಮಾರ ಸ್ವಾಮಿ ಹಾಗೂ ರಾಜು ಜಿ.ಎಚ್. ಅವರುಗಳನ್ನು ಗೌರವಿಸಲಾಯಿತು.

ಪುರಸಭೆ ಅಧ್ಯಕ್ಷ ಮೈಲಪ್ಪ, ಪತ್ರಕರ್ತರಾದ ಎಚ್.ಸಿ. ಮೃತ್ಯುಂಜಯ ಪಾಟೀಲ್, ಟಿ. ಶ್ರೀನಿವಾಸ, ಯು.ಬಿ.ಜಯಪ್ಪ, ಎಚ್.ಕೆ. ಮಲ್ಲೇಶ್, ಎನ್. ಎಂ. ಗಿರೀಶ್ ನಾಡಿಗ್, ಹರೀಶ್ ಸಾಗೋನಿ, ರಾಂಪುರ ಹಾಲೇಶ್, ಎಲ್.ಸಿ. ರಾಘವೇಂದ್ರ, ಕುಳಗಟ್ಟೆ ಸತೀಶ್ ಸೇರಿದಂತೆ ರೈತ ಮುಖಂಡರುಗಳು, ಕಸಾಪ ಪದಾಧಿಕಾರಿಗಳು ಹಾಗೂ ಇತರೆ ಗಣ್ಯರು ಉಪಸ್ಥಿತರಿದ್ದರು.

# ನಶೆ ಮುಕ್ತ ಸಮಾಜ ನಿರ್ಮಾಣಕ್ಕೆ ಯುವಕರ ಸಹಕಾರ ಅಗತ್ಯ : ದಿನೇಶ್ ಕೆ.ಶೆಟ್ಟಿ ಕರೆ

**ದಾವಣಗೆರೆ :** ನಶೆ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಯುವ ಜನಾಂಗ ಸರ್ಕಾರದ ಪ್ರಯತ್ನಗಳಿಗೆ ಕೈ ಜೋಡಿಸಬೇಕು ಎಂದು ದಾವಣಗೆರೆ – ಹರಿಹರ ನಗರಾಭಿವೃದ್ಧಿ ಪ್ರಾಧಿ ಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಕರೆ ನೀಡಿದ್ದಾರೆ.

ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ 'ಯುವ ಸೌರಭ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡ್ರಗ್ಸ್ ಸೇರಿದಂತೆ ಯಾವುದೇ ಮಾದಕ ವಸ್ತುಗಳ ಸೇವನೆ ಅಥವಾ ಮಾರಾಟ ಕಂಡುಬಂದರೆ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿ ಆರೋಗ್ಯಪೂರ್ಣ




ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಹಿರಿಯ ಪತ್ರಕರ್ತ ಬಿ.ಎನ್. ಮಲ್ಲೇಶ್ ಮಾತನಾಡಿ, ವಿದ್ಯಾರ್ಥಿಗಳಿಗೆ ನಶೆ ಇರಬೇಕು, ಆದರೆ ಅದು ಓದು, ಕಲೆ, ಸಾಹಿತ್ಯ, ಸಂಗೀತ ಅಥವಾ ನಾಟಕದಂತಹ ಸೃಜನಾತ್ಮಕ ಚಟುವಟಿಕೆಗಳ ಮೇಲಿರಬೇಕು. ಇಂತಹ ನಶೆಗಳು ಬೌದ್ಧಿಕವಾಗಿ ಸದೃಢರನ್ನಾಗಿ ಮಾಡಿ ಸರ್ವಾಂಗೀಣ ಪ್ರಗತಿಗೆ ಸಹಾಯ ಮಾಡುತ್ತವೆ ಎಂದರು. ಡ್ರಗ್ಸ್ ವ್ಯಸನವು ಜೀವನವನ್ನು ನಾಶ ಮಾಡುತ್ತದೆ. ಯುವಕರು ಆದರ್ಶ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು. ದೇಶೀಯ ಜನಪದ ಕಲೆಗಳನ್ನು ಉಳಿಸಿ ಬೆಳೆಸುವ ಮೂಲಕ ಸಾಂಸ್ಕೃತಿಕ ಪರಂಪರೆಯನ್ನು ಮುಂದುವರಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಬಿ. ವಾಮದೇವಪ್ಪ, ದೇಶಕ್ಕಾಗಿ ತ್ಯಾಗ ಮಾಡಿದ ಮಹನೀಯರ ಆದರ್ಶಗಳನ್ನು ಯುವಕರು ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು. ಸರ್ಕಾರದ ಕಾರ್ಯಕ್ರಮ ಗಳನ್ನು ಸದುಪಯೋಗಪಡಿಸಿ ಕೊಂಡು ಆದರ್ಶ ಯುತ ಜೀವನ ನಡೆಸಬೇಕು ಎಂದು ಹೇಳಿದರು.

ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತ ಮಾಗಾನಹಳ್ಳಿ ಮಂಜುನಾಥ್, ಜಾನಪದ ಕಲೆಗಳ ಉಳಿವಿಗೆ ವಿದ್ಯಾರ್ಥಿಗಳ ಸಹಕಾರ ಅಗತ್ಯ ಎಂದರು. ಇದೇ ಕಾಲೇಜಿನಲ್ಲಿ ಅಕ್ಟೋಬರ್‌ನಲ್ಲಿ ಯುವ ಜನೋತ್ಸವ ಆಯೋಜಿಸಲಾಗಿದ್ದು, ಭಾಷಣ, ಸುಗಮ ಸಂಗೀತ ಸೇರಿದಂತೆ ಏಳು ಕಲೆಗಳಿಗೆ ಅವಕಾಶವಿದೆ. ವಿದ್ಯಾರ್ಥಿಗಳು ಇಂದಿನಿಂದಲೇ ಅಭ್ಯಾಸ ಮಾಡಿ ಭಾಗವಹಿಸಬೇಕೆಂದು ಪ್ರೋತ್ಸಾಹಿಸಿದರು.

ಕಾಲೇಜಿನ ಪ್ರಾಂಶುಪಾಲ ಬಸವರಾಜಪ್ಪ, ಪ್ರಾಧ್ಯಾಪಕ ನರೇಶ್, ಜಿಲ್ಲಾ ಅಂಗವಿಕಲರ ಕಲ್ಯಾಣಾಭಿವೃದ್ಧಿ ಇಲಾಖೆ ಅಧಿಕಾರಿ ಡಾ.ಕೆ.ಕೆ.ಪ್ರಕಾಶ್ ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ಸ್ವಾಗತಿಸಿದರು. ಡಾ. ಶೃತಿ ಕಾರ್ಯಕ್ರಮ ನಿರೂಪಿಸಿದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ

### ವೃಷಭ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

### ಮಿಥುನ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಕರ್ಕ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೆಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ನೀವು ನಿಮ್ಮ ಪ್ರೀತಿಪಾತ್ರರನ್ನು ನಿಮ್ಮ ಜೀವನ ಸಂಗಾತಿಯನ್ನಾಗಿ ಮಾಡಲು ಬಯಸುತ್ತಿದ್ದರೆ, ಇಂದು ನೀವು ಅವರೊಂದಿಗೆ ಮಾತನಾಡಬಹುದು.

### ಸಿಂಹ ರಾಶಿ

ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ನೀವು ಹಂಚಿಕೊಂಡ ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ. ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ಇಂದು ಸಮಯದ ಸೌಂದರ್ಯವನ್ನು ನೋಡುತ್ತಾ, ನೀವು ನಿಮಗಾಗಿ ಸಮಯವನ್ನು ತೆಗೆಯಬಹುದು

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಹಠಮಾರಿ ವರ್ತನೆ ನಿಮ್ಮ ಹತ್ತಿರದ ಸ್ನೇಹಿತರು ಹಾಗೂ ಮನೆಯಲ್ಲಿರುವವರಿಗೂ ನೋವುಂಟುಮಾಡುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ನೀವು ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಜೊತೆ ಕಳೆಯಲು ಸಾಕಷ್ಟು ಸಮಯ ಸಿಗುತ್ತದೆ.

### ವೃಶ್ಚಿಕ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ಪ್ರೀತಿಪಾತ್ರರಿಗೆ ನಿಮ್ಮ ವಿಚಿತ್ರ ವರ್ತನೆಯ ಜೊತೆ ಏಗಲು ಅತ್ಯಂತ ಕಷ್ಟವಾಗುತ್ತದೆ. ನುರಿತ ಜನರೊಡನೆ ಒಡನಾಟ ಹೊಂದಿ ಮತ್ತು ಅವರು ನಿಮಗೆ ಭವಿಷ್ಯದ ಪ್ರವೃತ್ತಿಗಳ ಬಗ್ಗೆ ಒಳನೋಟ ನೀಡಬಲ್ಲರು.

### ಧನು ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

### ಮಕರ ರಾಶಿ

ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ನಿರೀಕ್ಷೆಗಳಿಗೆ ತಕ್ಕಂತೆ ಬದುಕಲು ನಿಮ್ಮ ಮಗುವನ್ನು ಪ್ರೇರೇಪಿಸಿ. ಆದರೆ ಅವನ ಪ್ರಯತ್ನದಿಂದ ಪವಾಡಗಳನ್ನು ನಿರೀಕ್ಷಿಸಬೇಡಿ.

### ಕುಂಭ ರಾಶಿ

ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ. ನಿಮ್ಮ ಯೋಜನೆಗಳ ಬಗ್ಗೆ ತುಂಬಾ ಮುಕ್ತತೆ ಹೊಂದಿದ್ದಲ್ಲಿ ನೀವು ಅವುಗಳನ್ನು ಹಾಳುಮಾಡಬಹುದು.

### ಮೀನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ಡಾ.ದುರಗೇಶ್ ಕೆ ಆರ್.ಅವರ ನೇತೃತ್ವದಲ್ಲಿ ಸಕಾಲ ಪ್ರಗತಿ ಪರಿಶೀಲನೆ

# ಸಾರ್ವಜನಿಕ ಸೇವಾ ವಿತರಣೆಗೆ ವೇಗ,ಗಡುವು ಮೀರುವ ಅರ್ಜಿಗಳ ನಿವಾರಣೆಗೆ ಸೂಚನೆ

**ಗದಗ:** ಸಾರ್ವಜನಿಕರಿಗೆ ಸರ್ಕಾರದ ಎಲ್ಲ ಸೇವೆಗಳು ನಿಗದಿತ ಅವಧಿಯಲ್ಲಿ ತಲುಪುವಂತೆ ಮಾಡುವ ಉದ್ದೇಶದಿಂದ ಜಾರಿಗೆ ತಂದಿರುವ ಸಕಾಲ ಯೋಜನೆಯ ಅನುಷ್ಠಾನದಲ್ಲಿ ಇನ್ನಷ್ಟು ಕಾರ್ಯಕ್ಷಮತೆ ತರಲು ಹಾಗೂ ಗಡುವು ಮೀರುವ ಅರ್ಜಿಗಳ ನಿವಾರಣೆಗಾಗಿ ಇಲಾಖಾ ಅಧಿಕಾರಿಗಳು ಗಮನ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಸೂಚಿಸಿದರು.



ಬುಧವಾರ ಜಿಲ್ಲಾಡಳಿತ ಭವನದಲ್ಲಿ ಏರ್ಪಡಿಸಲಾದ ಜಿಲ್ಲಾಮಟ್ಟದ ಸಕಾಲ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಅಧಿಕಾರಿಗಳಿಗೆ ಸಕಾಲ ಸರಿಯಾದ ಅನುಷ್ಠಾನದ ಕುರಿತಂತೆ ನಿರ್ದೇಶನ ನೀಡಿದರು.

ಸಾರ್ವಜನಿಕರು ಸಕಾಲ ಮೂಲಕ ಅರ್ಜಿ ಸಲ್ಲಿಸಿದ ದಿನಾಂಕದಿಂದಲೇ ಕಾಲಮಿತಿಯೊಳಗೆ ಸೇವೆ ಒದಗಿಸುವುದು ನಮ್ಮ ಹೊಣೆಗಾರಿಕೆ. ಯಾವುದೇ ಇಲಾಖೆಯಲ್ಲೂ ವಿನಾಕಾರಣ ವಿಳಂಬಕ್ಕೆ ಆಸ್ಪದ ನೀಡಬೇಡಿ. ಕಾಲಮಿತಿ ಮೀರಿ ಉಳಿದಿರುವ ಅರ್ಜಿಗಳನ್ನು ತಕ್ಷಣ ನಿಯಮಾನುಸಾರ ವಿಲೇವಾರಿಗೊಳಿಸಿ ಎಂದು ತಿಳಿಸಿದರು.

ಕಾಲಮಿತಿಯಲ್ಲಿ ಅರ್ಜಿ ವಿಲೇವಾರಿ ಮಾಡಬೇಕೆನ್ನುವ ಒತ್ತಡದಿಂದಾಗಿ ಅನಗತ್ಯ ಅರ್ಜಿಗಳ ತಿರಸ್ಕಾರ ಮಾಡಬೇಡಿ.ನಿಯಮಾನುಸಾರ ಅರ್ಜಿ ತಿರಸ್ಕಾರ ಮಾಡಲು ಕ್ರಮ ವಹಿಸಬೇಕು. ತಪ್ಪಿದಲ್ಲಿ ಇಲಾಖಾಧಿಕಾರಿಗಳು ಶಿಕ್ಷೆ, ದಂಡ ಹಾಗೂ ಇಲಾಖಾ ವಿಚಾರಣೆಗೆ ಒಳಪಡಬೇಕಾದೀತು ಎಂದು ಎಚ್ಚರಿಸಿದರು.

ಸಕಾಲ ಯೋಜನೆ ಕುರಿತು ಇಲಾಖಾ ಮುಖ್ಯಸ್ಥರು ಸರಿಯಾಗಿ ತಿಳುವಳಿಕೆ ಹೊಂದಬೇಕು. ಸಕಾಲ ಯೋಜನೆಯನ್ನು 2011 ರಿಂದ ಆರಂಭಗೊಳಿಸಲಾಗಿದೆ. ಪ್ರಸ್ತುತ 1173 ಸೇವೆಗಳನ್ನು ಸಕಾಲ ಯೋಜನೆಯಡಿ ಸಾರ್ವಜನಿಕರಿಗೆ ಒದಗಿಸಲಾಗುತ್ತಿದೆ. ಸಕಾಲ ಯೋಜನೆಯಡಿ ಅರ್ಜಿ ಸಲ್ಲಿಸುವವರು ಗ್ರಾಮ ಒನ್, ಕರ್ನಾಟಕ ಒನ್, ನಾಡಕಚೇರಿ, ಸಿಎಸ್ ಸಿ ಸೆಂಟರ್ ಮೂಲಕ ಅರ್ಜಿ ಸಲ್ಲಿಸಲಿದ್ದಾರೆ. ಅವರು ಸಲ್ಲಿಸಿದ ಅರ್ಜಿಗಳು ಸರಿಯಿದ್ದಲ್ಲಿ ಶೀಘ್ರ ವಿಲೇವಾರಿ ಮಾಡುವ ಮೂಲಕ ಸಕಾಲ ಯೋಜನೆಯಲ್ಲಿ ಉತ್ತಮ ಪ್ರಗತಿ ಸಾಧಿಸೋಣ ಎಂದು ತಿಳಿಸಿದರು.

ಸಕಾಲ ಪ್ರಗತಿಯಲ್ಲಿ ರಾಜ್ಯದಲ್ಲಿ ಗದಗ ಜಿಲ್ಲೆ 8 ನೇ ಸ್ಥಾನದಲ್ಲಿದೆ. ಜಿಲ್ಲೆಯಲ್ಲಿ ಜುಲೈ 2025 ರ ಅಂತ್ಯದವರೆಗೆ ಸಕಾಲ ಯೋಜನೆಯಡಿ 67154 ಅರ್ಜಿಗಳನ್ನು ಸ್ವೀಕರಿಸಲಾಗಿದೆ. 68305 ಅರ್ಜಿಗಳನ್ನು ವಿಲೇವಾರಿ ಮಾಡಿದ್ದು 5873 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 1039 ಅರ್ಜಿಗಳನ್ನು ಕಾಲಮಿತಿ ನಂತರ ಹಾಗೂ 67266 ಅರ್ಜಿಗಳನ್ನು ನಿಗದಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡಲಾಗಿದೆ.

ಅಗಸ್ಟ ಮಾಹೆಯಲ್ಲಿ ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ 1157 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 251 ಅರ್ಜಿಗಳನ್ನು ಗಡುವು ಮೀರಿದ ನಂತರ ವಿಲೇವಾರಿಗೊಳಿಸಲಾಗಿದೆ.

ಸಭೆಯಲ್ಲಿ ಕೃಷಿ ಜಂಟಿ ನಿರ್ದೇಶಕಿ ತಾರಾಮಣಿ , ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಜಿಲ್ಲಾಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಡಿಡಿಪಿಐ ಆರ್.ಎಸ್.ಬುರುಡಿ, ಕೆ.ಎಸ್.ಆರ್.ಟಿ.ಸಿ. ವಿಭಾಗೀಯ ನಿಯಂತ್ರಣಾಧಿಕಾರಿ ದೇವರಾಜ, ಡಿಡಿಎಲ್ ಆರ್ ರುದ್ರಣ್ಣಗೌಡ ಜಿ.ಜೆ. ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಅಲ್ಪಸಂಖ್ಯಾತರ ಇಲಾಖೆ ಜಿಲ್ಲಾ ಅಧಿಕಾರಿ ಅಮಿತ ಬಿದರಿ, ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗಣ್ಣವರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ಶಿವಕುಮಾರ ಎನ್ ಜಿ ಇವರಿಗೆ ರಾಜ್ಯ ಪ್ರಶಸ್ತಿ

**ದಾವಣಗೆರೆ :** ಇವರು ಕಳೆದ ಹಲವು ವರ್ಷಗಳಿಂದ ಹಲವಾರು ಸಾಮಾಜಿಕ ಕಾರ್ಯಚಟುವಟಿಕೆಯಲ್ಲಿ, ಸೇವಾ ವೃತ್ತಿಯಲ್ಲಿ ಸಕ್ರೀಯವಾಗಿ ತೊಡಗಿಸಿಕೊಂಡು, ಸಮುದಾಯದೊಂದಿಗೆ ಬೆರೆತು ಹಲವಾರು ಸಾಮಾಜಿಕ ಅರಿವಿನ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡು ಬರುತ್ತಿರುವ *ಶಿವಕುಮಾರ ಎನ್ ಜಿ** ಇವರಿಗೆ ಅವರ ಸಾಮಾಜಿಕ ಕಾರ್ಯಚಟುವಟಿಕೆಯಲ್ಲಿ ಸೇವಾ ವೃತ್ತಿಯಲ್ಲಿ ಸೇವಾ ಕಾರ್ಯವನ್ನು ಗುರುತಿಸಿ *ಹರಿಹರ ನಕ್ಷತ್ರ ಟಿವಿ* ಇವರುಗಳಿಂದ ರೋಟರಿ ಕ್ಲಬ್ ದಾವಣಗೆರೆಯಲ್ಲಿ ಹಮ್ಮಿಕೊಂಡಿದ್ದ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಇವರಿಗೆ ರಾಜ್ಯ ಪ್ರಶಸ್ತಿಯಾದ "ನಕ್ಷತ್ರ ಅಚೀವರ್ಸ್ ಅವಾರ್ಡ್–2025"ಯನ್ನು ನೀಡಿ ಗೌರವಿಸಿದೆ. ಪ್ರಶಸ್ತಿಯನ್ನು ಶಿವಕುಮಾರ ಎನ್ ಜಿ ಅವರು ಅವರ ಧರ್ಮಪತ್ನಿಯರಾದ ಮಂಜುಳಾ ಶಿವಕುಮಾರ ರೊಟ್ಟಿಗೆ ಪ್ರಶಸ್ತಿ ಸ್ವೀಕರಿಸಿದ್ದು ವಿಶೇಷ. ಇವರ ಸಾಮಾಜಿಕ ಕಾರ್ಯಚಟುವಟಿಕೆಗಳು ಹೀಗೇ ಮುಂದುವರಿಯಲಿ ಎಂದು ಹರಿಹರ ನಕ್ಷತ್ರ ಟಿವಿ ಆಶಿಸಿದೆ.



ಚಿಕ್ಕ ವಯಸ್ಸಿನಲ್ಲಿ ಸಾಕಿ ಬೆಳೆಸಿದಂತಹ ಹಾಗೂ ಇವರ ಉತ್ತಮ ಬೆಳವಣಿಗೆಗೆ, ಉತ್ತಮ ವ್ಯಕ್ತಿತ್ವಕ್ಕೆ ಕಾರಣರಾದ ದಾವಣಗೆರೆ ತಾಲ್ಲೂಕಿನ ನಾಗರಕಟ್ಟೆ ಗ್ರಾಮದ ಅಜ್ಜನವರಾದ ಎನ್ ಕೆ ಸಿದ್ದಪ್ಪ ಮತ್ತು ಅಜ್ಜಿಯವರಾದ ಶಾಂತಮ್ಮ ಇವರಿಗೆ ಕೀರ್ತಿ ತಂದಿರುತ್ತಾರೆ. ಇವರ ಬೆಳವಣಿಗೆಗೆ ಕಾರಣರಾದ ಅಜ್ಜ ಅಜ್ಜಿಗೆ ಇವರು ಅಭಿನಂದಿಸುತ್ತಾರೆ.

ನೆಚ್ಚಿನ ಗುರುಗಳಾದ ಹಾಗೂ ಇವರ ಸಮಾಜಮುಖಿ ಕಾರ್ಯಾಚಟುವಟಿಕೆಗಳಿಗೆ ಸಹಕರಿಸಿ ಪ್ರೋತ್ಸಾಹಿಸಿದಂತಹ ಪ್ರಸಿದ್ದ ಕವಿ ಮೂಗು ಗಂಟಲು ತಜ್ಞರಾದ ಡಾ. ಎ ಎಮ್ ಶಿವಕುಮಾರ್ ಇವರಿಗೆ ಅಭಿನಂದಿಸುತ್ತಾರೆ.

ಜೊತೆಗೆ ತಂದೆಯವಯರಾದ ಗಂಗಾಧರಪ್ಪ ಎನ್, ತಾಯಿಯವರಾದ ಗೌರಮ್ಮ, ಕಮಲಮ್ಮ, ನಿರ್ಮಲಮ್ಮ ಹೆಂಡತಿಯಾದ ಮಂಜುಳಾ ಶಿವಕುಮಾರ, ತಂಗಿಯವರಾದ ಮಮತ ಎನ್ ಜಿ, ಅಕ್ಕನವರಾದ ಶಿಲ್ಪಾ ಹಾಗೂ ಮಂಜುನಾಥ್, ನರೇಂದ್ರ ಇವರಿಗೂ ಕೀರ್ತಿ ತಂದಿರುತ್ತಾರೆ.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಗೂ, ಪತ್ರಿಕೆಗಳಿಗೂ ಹಾಗೂ ಪತ್ರಿಕಾ ಮಾಧ್ಯಮದ ಬಂಧುಗಳಿಗೂ, ಕಾಲೇಜುಗಳಿಗೂ, ಸಂಸ್ಥೆಗಳಿಗೂ, ಕಂಪನಿಗಳಿಗೂ, ಆಸ್ಪತ್ರೆಗಳಿಗೂ, ಎಲ್ಲ ರಕ್ತನಿಧಿ ಕೇಂದ್ರಗಳಿಗೂ, ಸ್ನೇಹಿತರಿಗೂ, ವೈದ್ಯರಿಗೂ, ಸಂಪನ್ಮೂಲ ವ್ಯಕ್ತಿಗಳಿಗೂ, ಉಪನ್ಯಾಸಕರಿಗೂ, ಶಿಕ್ಷಕರಿಗೂ, ವಿವಿಧ ಇಲಾಖೆಗಳ ಅಧಿಕಾರಿಗಳಿಗೂ, ಬಂಧು–ಮಿತ್ರರಿಗೂ, ಬೆಳ್ಳೂಡಿ ಮತ್ತು ನಾಗರಕಟ್ಟೆ ಗ್ರಾಮದ ಎಲ್ಲ ಗ್ರಾಮಸ್ಥರಿಗೂ, ಪ್ರತ್ಯಕ್ಷವಾಗಿ ಪರೋಕ್ಷವಾಗಿ ಸಹಕರಿಸಿದ ಎಲ್ಲರಿಗೂ ಅಭಿನಂದಿಸುತ್ತಾರೆ.

# ತಂತ್ರಜ್ಞಾನದ ನಾಯಕರಾಗಿ ಬೆಳೆಯಿರಿ: ಪ್ರೊ ವೆಂಕಟೇಶ್ ಬಾಬು

**ದಾವಣಗೆರೆ :** ನಗರದ ಎ.ವಿ.ಕೆ. ಮಹಿಳಾ ಕಾಲೇಜು ಎದುರು ಇರುವ ವಿಶಿಷ್ಟಾ ಇನ್‌ಸ್ಟಿಟ್ಯೂಟ್‌ನಲ್ಲಿ ಆಗಸ್ಟ್ 14, 2025 ರಂದು ಕೋಡಿಂಗ್ ಬ್ಯಾಚ್ ವಿದ್ಯಾರ್ಥಿಗಳಿಗೆ ಭಾವಪೂರ್ಣ ವಿದಾಯ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮದ ಮುಖ್ಯ ಭಾಷಣಕಾರರಾದ ಡಾ. ವೆಂಕಟೇಶ್ ಬಾಬು ಎಸ್ ಅವರು, "ನಿಮ್ಮ ಕಲಿಕೆ ನಿರಂತರವಾಗಿರಲಿ. ಭವಿಷ್ಯದಲ್ಲಿ ತಂತ್ರಜ್ಞಾನ ಕಲಿಕೆ ಅತ್ಯವಶ್ಯಕವಾಗಿದ್ದು, ಅದು ನಿಮಗೆ ಉನ್ನತ ಮಟ್ಟದ ಸಾಧನೆ ತರುವಂತಾಗಲಿ" ಎಂದು ಪ್ರೇರಣಾತ್ಮಕವಾಗಿ ತಿಳಿಸಿದರು.

ಇಂದಿನ ಕಲಿಕೆ ಮೌಲ್ಯಯುತವಾದದ್ದು ನಾಳಿನ ಕಲಿಕೆ ಬದಲಾವಣೆಗೆ ಹತ್ತಿರವಾದದ್ದು ಹಾಗಾಗಿ ನಿಮ್ಮ ಕಲಿಕೆ ನಿರಂತರವಾಗಿದ್ದರೆ ಅದು ನೈತಿಕತೆಯೊಂದಿಗೆ ಜೊತೆಯಾದರೆ ನೀವುಗಳು ಉತ್ತಮ

ನಾಯಕರಾಗಿ ಬೆಳೆಯಲು ಸಾಧ್ಯವಾಗುತ್ತದೆ ಮುಂದಿನ ದಿನಗಳಲ್ಲಿ ನೀವೆಲ್ಲರೂ ತಂತ್ರಜ್ಞಾನದ ನಾಯಕರಾಗಿ ಬೆಳೆಯಬಹುದು ಎಂದು ಹೇಳಿದರು

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಶ್ರೀಮತಿ ಲತೀಕ ದಿನೇಶ್ ಕೆ. ಶೆಟ್ಟಿ ಮಾತನಾಡುತ್ತಾ, "ಜೀವನದಲ್ಲಿ ಬದಲಾವಣೆಗಳಿಗೆ ಹೊಂದಿಕೊಂಡು, ಅವಕಾಶಗಳನ್ನು ಸರಿಯಾಗಿ ಬಳಸಿಕೊಂಡರೆ ಸಾಧಕರಾಗಿ ಬೆಳೆಯಬಹುದು" ಎಂದು ವಿದ್ಯಾರ್ಥಿಗಳಿಗೆ ಪ್ರೇರಣೆಯ ಸಂದೇಶ ನೀಡಿದರು.

ಅತಿಥಿಯಾಗಿ ಭಾಗವಹಿಸಿದ್ದ ಪ್ರೊ. ಅನಿತಾ ಕುಮಾರಿ ಜಿ ತಮ್ಮ ಭಾಷಣದಲ್ಲಿ, "ಪ್ರತಿಯೊಂದು ಅನುಭವವನ್ನು ಮೈಗೂಡಿಸಿಕೊಂಡಾಗ ಉತ್ತಮ ಸಾಧಕರಾಗಲು ಸಾಧ್ಯ" ಎಂದು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿದರು.

ಕಾರ್ಯಕ್ರಮದಲ್ಲಿ ವಿಶಿಷ್ಟಾ ಸಂಸ್ಥೆಯ ಸಂಸ್ಥಾಪಕರಾದ ಅರುಣ್ ಕುಮಾರ್ ಹಾಗೂ ತನುಜ ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಕಾರ್ಯಕ್ರಟಚಿ ನಿರೂಪಿಸಿದರು ಉಪನ್ಯಾಸಕ್ಕೆ ಬಂದವರು ಅತಿಥಿಗಳನ್ನು ಸ್ವಾಗತಿಸಿ ವಂದಿಸಿದರು.

# ತಾಯಿ ಭಾರತಿಗೆ ಗೀತೆಗಳ ಆರತಿ 12ನೇ ಆವೃತ್ತಿ ಕಾರ್ಯಕ್ರಮ

**ಶಿವಮೊಗ್ಗ:** ಭಾರತ ಸ್ಕೌಟ್ ಅಂಡ್ ಗೈಡ್ ಹಾಗೂ ಮಲ್ನಾಡ್ ಓಪನ್ ಗ್ರೂಪ್ ಸಹಭಾಗಿತ್ವದಲ್ಲಿ ಆಯೋಜಿಸಿದ ತಾಯಿ ಭಾರತಿಗೆ ಗೀತೆಗಳ ಆರತಿ 12ನೇ ಆವೃತ್ತಿ ಕಾರ್ಯಕ್ರಮದಲ್ಲಿ ಡೆಲ್ಲಿ ವರ್ಲ್ಡ್ ಶಾಲೆಯ ನೂರು ಮಕ್ಕಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಡೆಲ್ಲಿ ವರ್ಲ್ಡ್ ಶಾಲೆಯ ಪ್ರಾಂಶುಪಾಲರಾದ ದಿವ್ಯ ಶೆಟ್ಟಿ ಅವರಿಗೆ ನೆನಪಿನ ಕಾಣಿಕೆ ನೀಡಿ ಅಭಿನಂದಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತರಾದ ಪಿ.ಜಿ.ಆರ್.ಸಿಂಧ್ಯಾ, ವಿಶೇಷ ಆಹ್ವಾನಿತರಾಗಿ ಮಾಜಿ ವಿಧಾನ ಪರಿಷತ್ ಶಾಸಕ ಎಸ್. ರುದ್ರೇಗೌಡ, ಸಂಗೀತ ಶಿಕ್ಷಕಿ ರೂಪ ಹೊಳ್ಳ ಸೇರಿದಂತೆ ಹಲವರು ಭಾಗವಹಿಸಿದ್ದರು.



## ರಾಮಕೃಷ್ಣ ವಿದ್ಯಾನಿಕೇತನದಲ್ಲಿ ಅಂತರ ಶಾಲಾ ಗಣಪತಿ ಚಿತ್ರ ರಚನಾ ಸ್ಪರ್ಧೆ

**ಶಿವಮೊಗ್ಗ:** ಶಿವಮೊಗ್ಗ ಇಲ್ಲಿನ ಗೋಪಾಲಗೌಡ ಬಡಾವಣೆಯ ಶ್ರೀ ರಾಮಕೃಷ್ಣ ವಿದ್ಯಾನಿಕೇತನ ವಸತಿ ವಿದ್ಯಾಲಯದಲ್ಲಿ ಅಂತರ್ ಶಾಲಾ ಮಕ್ಕಳಿಗೆ ಗಣಪತಿ ಹಬ್ಬದ ನಿಮಿತ್ತ ವೈವಿಧ್ಯಮಯ ಗಣಪತಿ ಚಿತ್ರ ರಚನೆಯ ಸ್ಪರ್ಧೆಯನ್ನು ಆಗಸ್ಟ್ 16ರಂದು ಆಯೋಜಿಸಲಾಗಿದೆ.

16ರ ಶನಿವಾರ ಮಧ್ಯಾಹ್ನ 2.30 ರಿಂದ 4.30 ಗಂಟೆಯವರೆಗೆ ನಡೆಯಲಿರುವ ಈ ಸ್ಪರ್ಧೆಯಲ್ಲಿ ಶಿವಮೊಗ್ಗ ನಗರದ ಆಸಕ್ತ ವಿದ್ಯಾರ್ಥಿಗಳು ಭಾಗವಹಿಸಲು ಅವಕಾಶವಿರುತ್ತದೆ.

ಮಕ್ಕಳು ಚಿತ್ರ ರಚನೆ ಸ್ಪರ್ಧೆಯಲ್ಲಿ ಭಾಗವಹಿಸಲು ಅಗತ್ಯವಿರುವ ಬಣ್ಣ, ಕ್ರಯಾನ್, ಸ್ಕೆಚ್ ಪೆನ್ ಹಾಗೂ ಇತರ ವಸ್ತುಗಳನ್ನು ತಾವೇ ತರಬೇಕಾಗಿದ್ದು, ಡ್ರಾಯಿಂಗ್ ಹಾಳೆಯನ್ನು ಶಾಲೆಯ ವತಿಯಿಂದ ನೀಡಲಾಗುತ್ತದೆ.

**ಬಹುಮಾನ:**

ಎಲ್ ಕೆ ಜಿಯಿಂದ 10ನೇ ತರಗತಿವರೆಗಿನ ಪ್ರತಿ ತರಗತಿಯ ವಿದ್ಯಾರ್ಥಿಗಳಿಗೆ ತರಗತಿವಾರು ಐದು ಬಹುಮಾನಗಳನ್ನು ನೀಡಲು ನಿರ್ಧರಿಸಲಾಗಿದೆ.

## ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ವಾಕಥಾನ್–ಮ್ಯಾರಥಾನ್

**ಚಿಕ್ಕಮಗಳೂರು:** ಸ್ವಚ್ಛ ಭಾರತ ಮಿಷನ್ 2.0 ಯೋಜನೆಯಡಿ ಆಗಸ್ಟ್ 16 ರಂದು ಬೆಳಿಗ್ಗೆ 7 ಗಂಟೆಗೆ ನಗರದ ತಾಲ್ಲೂಕು ಕಚೇರಿಯಿಂದ ಎಂ.ಜಿ. ರಸ್ತೆ ಮಾರ್ಗವಾಗಿ ಆಜಾದ್ ಪಾರ್ಕ್ ಮೂಲಕ ನಗರಸಭಾ ಕಚೇರಿಯವರೆಗೆ ವಾಕಥಾನ್–ಮ್ಯಾರಥಾನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ನಗರಸಭೆಯ ಚುನಾಯಿತ ಸದಸ್ಯರು, ಅಧಿಕಾರಿ, ಸಿಬ್ಬಂದಿ, ಪೌರಕಾರ್ಮಿಕರು, ನೀರು ಸರಬರಾಜು ಸಿಬ್ಬಂದಿ, ಹಾಗೂ ಸರ್ಕಾರಿ

ಮತ್ತು ಸರ್ಕಾರೇತರ ಅಧಿಕಾರಿ, ಸಿಬ್ಬಂದಿ ವರ್ಗ, ಲಯನ್ಸ್ ಕ್ಲಬ್, ರೋಟರಿ ಕ್ಲಬ್, ವಿವಿಧ ಸಂಘ–ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಹಿರಿಯ ನಾಗರಿಕರು, ಸಾಹಿತಿಗಳು, ಪತ್ರಕರ್ತರು, ಸ್ತ್ರೀಶಕ್ತಿ ಸ್ವಸಹಾಯ ಸಂಘದ ಪದಾಧಿಕಾರಿಗಳು, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದವರು ಹಾಗೂ ಸಮಸ್ತ ನಾಗರಿಕರು ಭಾಗವಹಿಸುವಂತೆ ನಗರಸಭೆಯ ಪೌರಾಯುಕ್ತರು ಕೋರಿದ್ದಾರೆ.

## ನಾಳೆ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟನೆ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆ.16 ರ ಬೆಳಿಗ್ಗೆ 10.30 ಕ್ಕೆ ನಗರ ನೆಹರು ಕ್ರೀಡಾಂಗಣದಲ್ಲಿ 2025–26 ನೇ ಸಾಲಿನ ಶಿವಮೊಗ್ಗ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ಉದ್ಘಾಟನೆ ಸಮಾರಂಭವನ್ನು ಏರ್ಪಡಿಸಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪನವರು ದಸರಾ ಕ್ರೀಡಾಕೂಟದ ಉದ್ಘಾಟನೆಯನ್ನು ನೆರವೇರಿಸುವರು.

ಶಾಸಕರಾದ ಎಸ್.ಎನ್.ಚನ್ನಬಸಪ್ಪ ಅಧ್ಯಕ್ಷತೆ ವಹಿಸಲಿದ್ದು, ಭದ್ರಾವತಿ ಶಾಸಕರು ಹಾಗೂ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳು ಅಭಿವೃದ್ದಿ ನಿಗಮ ಅಧ್ಯಕ್ಷರಾದ ಬಿ.ಕೆ.ಸಂಗಮೇಶ್ವರ, ಸಾಗರ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ ಅಧ್ಯಕ್ಷರಾದ ಗೋಪಾಲಕೃಷ್ಣ ಬೇಳೂರು ಇವರ ಗೌರವ ಉಪಸ್ಥಿತಿ ಇರಲಿದೆ.

ಮುಖ್ಯ ಅತಿಥಿಗಳಾಗಿ ಸಂಸದರು, ವಿಧಾನಸಭೆ ಮತ್ತು ವಿಧಾನ ಪರಿಷತ್ ಶಾಸಕರುಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರದ ಅಧ್ಯಕ್ಷರುಗಳು, ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಓ, ಜಿಲ್ಲಾ ಪೊಲೀಸ್ ಅಧೀಕ್ಷಕರು, ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪಾಲ್ಗೊಳ್ಳುವರು, ಜನಪ್ರತಿನಿಧಿಗಳು, ಅಧಿಕಾರಿಗಳು, ಕ್ರೀಡಾಪಟುಗಳು ಪಾಲ್ಗೊಳ್ಳುವರು.

## ಆ.18 ರಂದು ಜನ ಸಂಪರ್ಕ ಸಭೆ

**ಶಿವಮೊಗ್ಗ:** ನಗರ ಉಪವಿಭಾಗ–2 ರಲ್ಲಿ ಆ.18 ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆವರೆಗೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಇವರ ನೇತೃತ್ವದಲ್ಲಿ ನಗರದ ಎನ್.ಟಿ ರಸ್ತೆಯಲ್ಲಿರುವ ಉಪ ವಿಭಾಗ–2 ರ ಸಹಾಯಕ ಕಾರ್ಯನಿರ್ವಾಹಕ ಇಂಜನಿಯರ್ ಕಚೇರಿಯಲ್ಲಿ ಜನ ಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.

ಉಪ ವಿಭಾಗದ ವ್ಯಾಪ್ತಿಯ ಗ್ರಾಹಕರು ಸಭೆ ಹಾಜರಾಗಿ ತಮ್ಮ ಅಹವಾಲುಗಳನ್ನು ನೀಡಬಹುದೆಂದು ಮೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ವಿಟ್ ಇಂಡಿಯಾ : ದಾವಣಗರೆಯಲ್ಲಿ 'ಕ್ರಾಂತಿ ಜ್ಯೋತಿ ದಿನ' ಆಚರಣೆ



**ದಾವಣಗೆರೆ:** ಭಾರತ ಬಿಟ್ಟು ತೊಲಗಿ ಚಳುವಳಿಯು ಒಂದು ಅಸಹಕಾರ ಚಳುವಳಿ ಯಾಗಿದ್ದು, ಆಗಸ್ಟ್ 1942ರಲ್ಲಿ ಮಹಾತ್ಮಾ ಗಾಂಧಿಯವರ ಮುಂದಾಳತ್ವದಲ್ಲಿ ಆರಂಭವಾದ ಈ ಚಳುವಳಿಯಲ್ಲಿ ಭಾಗವಹಿಸಿದ್ದ ನಾಗರಿಕರ ಪೈಕಿ ನಗರದ ಆರು ನಾಗರಿಕರು ಹುತಾತ್ಮರಾಗಿದ್ದರು ಎಂದು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ.ಶೆಟ್ಟಿ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ವತಿಯಿಂದ ಕ್ವಿಟ್ ಇಂಡಿಯಾ ಮೂವ್‌ಮೆಂಟ್ ಅಂಗವಾಗಿ ಶನಿವಾರ ನಗರದಲ್ಲಿ ಹಮ್ಮಿಕೊಂಡಿದ್ದ ಕ್ರಾಂತಿ ಜ್ಯೋತಿ ದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬ್ರಿಟಿಷ್ ಸರ್ಕಾರದಿಂದ ಭಾರತದ ಸ್ವಾತಂತ್ರ್ಯ ಪಡೆಯುವ ಉದ್ದೇಶದಿಂದ ಮಹಾತ್ಮ ಗಾಂಧೀಜಿಯವರ ನೇತೃತ್ವದಲ್ಲಿ 'ಮಾಡು ಇಲ್ಲವೇ ಮಡಿ' ಎಂಬ ಘೋಷಣೆಯೊಂದಿಗೆ ಪ್ರಾರಂಭವಾದ ಈ ಚಳುವಳಿಯಿಂದ ದೇಶದಲ್ಲಿ ಅರಾಜಕತೆ ಸೃಷ್ಟಿಯಾಗಿ ಬ್ರಿಟಿಷರು ಹೆದರಿ ಬಹುತೇಕ ಕಾಂಗ್ರೆಸ್ ನಾಯಕರನ್ನು ಬಂಧಿಸಲಾಯಿತು ಎಂದರು.

ಮಹಾನಗರ ಪಾಲಿಕೆ ಮಾಜಿ ಸದಸ್ಯ ಸೋಗಿ ಶಾಂತಕುಮಾರ್ ಮಾತನಾಡಿ, 1942ರಂದು ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಮುಂಬೈ ಅಧಿವೇಶನದಲ್ಲಿ ಭಾರತ ಬಿಟ್ಟು ತೊಲಗಿ ಎಂಬ ಗೊತ್ತುವಳಿಯನ್ನು ಹೊರಡಿಸಿದ ನಂತರ ದೇಶದ ಹಲವು ಕಡೆಗಳಲ್ಲಿ ಹೋರಾಟ ಪ್ರಾರಂಭವಾಗಿದ್ದರಿಂದ ದಾವಣಗೆರೆಯಲ್ಲಿಯೂ ಸಹ ನಾಗರಿಕರು ಚಳುವಳಿ ನಡೆಸುವ ವೇಳೆ ಬ್ರಿಟಿಷರು ನಡೆಸಿದ ಗುಂಡಿನ ದಾಳಿಗೆ ದಾವಣಗೆರೆಯ ಹಳ್ಳೂರು ನಾಗಪ್ಪ, ಅಕ್ಕಸಾಲಿ ವಿರೂಪಾಕ್ಷಪ್ಪ, ಬಿದರಕುಂದಿ ನಿಂಗಪ್ಪ, ಹಮಾಲಿ ತಿಮ್ಮಣ್ಣ, ಹದಡಿ ನಿಂಗಪ್ಪ, ಮಾಗಾನಹಳ್ಳಿ ಹನುಮಂತಪ್ಪನವರು ಹುತಾತ್ಮರಾದರು. ಅವರ ನೆನಪಿಗಾಗಿ ದಾವಣಗೆರೆ ಮಹಾನಗರ ಪಾಲಿಕೆ ಮುಂಭಾಗ ಸ್ಮಾರಕ ನಿರ್ಮಿಸಲಾಗಿದೆ ಎಂದು ಹೇಳಿದರು.

ಮಾಜಿ ಯೋಧ ಮಂಜಾನಾಯ್ಕ, ವಕೀಲರ ವಿಭಾಗದ ಜಿಲ್ಲಾಧ್ಯಕ್ಷ ಪ್ರಕಾಶ್ ಪಾಟೀಲ್, ಕಂಚಿಕೆರೆ ಕೊಟ್ರೇಶ್ ಮತ್ತಿತರರು ಮಾತನಾಡಿ, ಕ್ವಿಟ್ ಇಂಡಿಯಾ ಚಳುವಳಿ ಮೂಲಕ ದೇಶಾದ್ಯಂತ ಸಾಮಾನ್ಯ ನಾಗರಿಕರು ಸಹ ಭಾಗವಹಿಸಿರುವುದನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರುಗಳಾದ ಹೆಚ್.ಜಯಣ್ಣ, ನಂಜಾನಾಯ್ಕ, ಮೈನುದ್ದೀನ್, ಹರೀಶ್, ಲಿಯಾಖತ್, ಅಕ್ಬರ್, ಮಲ್ಲೇಶ್, ಸೈಯದ್ ಜಿಕ್ರಿಯಾ, ಭಾಗ್ಯಶ್ರೀ, ಗೀತಾ ಚಂದ್ರಶೇಖರ್, ಶುಭಮಂಗಳ ಮತ್ತಿತರರಿದ್ದರು.

# ಮಳೆಯ ಪ್ರವಾಹಕ್ಕೆ ಕೊಚ್ಚಿ ಹೋದ ಸೇತುವೆ

**ಚಿತ್ರದುರ್ಗ :** ಜಿಲ್ಲೆಯ ಹೊಳಲ್ಕೆರೆ ತಾಲೂಕು ಕಾಳಘಟ್ಟ ವಡ್ಡರಹಟ್ಟಿಯಿಂದ ದಾಸರಹಳ್ಳಿ ವಡ್ಡರಹಟ್ಟಿ ಹೋಗುವ ರಸ್ತೆಯಲ್ಲಿ ಇರುವ ಹಳ್ಳಕ್ಕೆ ಗ್ರಾಮಸ್ಥರೇ ನಿರ್ಮಾಣ ಮಾಡಿಕೊಂಡಿದ್ದು, ಕಲ್ಲು ಸೇತುವೆ ಇತ್ತೀಚಿಗೆ ಬೀಳುತ್ತಿರುವ ಮಳೆಯ ಪ್ರವಾಹದಿಂದ ಕೊಚ್ಚಿ ಹೋಗಿದೆ. ಎರಡು ಹಳ್ಳಿ ಜನರಿಗೆ ಓಡಾಟಕ್ಕೆ ತೊಂದರೆಯಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಸ್ವಾತಂತ್ರ್ಯ ಬಂದು 75 ವರ್ಷಗಳನ್ನು ಕಳೆದರೂ ಸಹ ಗ್ರಾಮದ ಮಧ್ಯ ಓಡಾಡಲು ಜನರಿಗೆ ಉತ್ತಮವಾದ ರಸ್ತೆ ಇದುವರೆವಿಗೂ ನಿರ್ಮಾಣವಾಗಿಲ್ಲ, ಕಾಳಘಟ್ಟ ವಡ್ಡರಹಟ್ಟಿಯಿಂದ ದಾಸರಹಳ್ಳಿ ವಡ್ಡರಹಟ್ಟಿ ಹೋಗುವ ರಸ್ತೆಯಲ್ಲಿ ಸರಿಯಾದ ರೀತಿಯಲ್ಲಿ ರಸ್ತೆಯ ನಿರ್ಮಾಣ ಕಾರ್ಯವಾಗಿಲ್ಲ ಜನಾರ್ಧನ ಸ್ವಾಮಿಯವರ ಸಂಸದರಾಗಿದ್ದ ಸಮಯದಲ್ಲಿ ಇಲ್ಲಿ ರಸ್ತೆಯನ್ನು ನಿರ್ಮಾಣ ಮಾಡಲು ಮುಂದಾಗಿದ್ದರು ಆದರೆ ಆತಂರಿಕ ಜಗಳದಿಂದಾಗಿ ರಸ್ತೆ ನಿರ್ಮಾಣ ಕಾರ್ಯ ನೆನಗುದ್ದಿಗೆ ಬಿತ್ತು ಇದರಿಂದ ಈ ಗ್ರಾಮಗಳಲ್ಲಿ ಮಳೆಗಾಲದಲ್ಲಿ ಓಡಾಡಲು ರಸ್ತೆ ಇಲ್ಲದಾಗಿದೆ, ನಮ್ಮ ಗ್ರಾಮವೂ ಹೊಳಲ್ಕೆರೆ ವಿಧಾನಸಭಾ ವ್ಯಾಪ್ತಿಗೆ ಬರಲಿದ್ದು ಅಲ್ಲಿ ಚುನಾಯಿತರಾದ ಯಾವ ಚುನಾಯಿತ ಪ್ರತಿನಿಧಿಗಳು ಸಹಾ ಇದರ ಬಗ್ಗೆ ಗಮನ ನೀಡಲ್ಲ, ಈಗಿನ ಶಾಸಕರು ರಸ್ತೆ ರಾಜ ಎಂದು ಹೆಸರನ್ನು ಪಡೆದಿದ್ದಾರೆ ಆದರೆ ನಮ್ಮ ಗ್ರಾಮದ ರಸ್ತೆ ಕಾಣುತಿಲ್ಲವೆ ಎಂದು ಗ್ರಾಮಸ್ಥರು ಶಾಸಕರನ್ನು ಪ್ರಶ್ನೆ ಮಾಡಿದ್ದಾರೆ.

ಇಲ್ಲಿ ರಸ್ತೆಯನ್ನು ನಿರ್ಮಾಣ ಮಾಡುವಂತೆ ಹಲವಾರು ಬಾರಿ ಆಗ್ರಹ ಮಾಡಿದ್ದರು ಸಹಾ ಇದುವರೆವಿಗೂ ಯಾರೂ ಸಹಾ ಗಮನ ನೀಡಿಲ್ಲ, ಹಲವಾರು ಮಳೆಗಾಲದಲ್ಲಿ ಗ್ರಾಮಸ್ಥರೇ ಮುಂದಾಗಿ ಹಳ್ಳ ಹರಿದ ಜಾಗದಲ್ಲಿ ಕಲ್ಲುಗಳನ್ನು ಹಾಕಿ ತಾತ್ಕಾಲಿಕವಾಗಿ ರಸ್ತೆಯನ್ನು ನಿರ್ಮಾಣ ಮಾಡಿಕೊಂಡ ಬರಲಾಗುತ್ತಿದೆ



ಪ್ರತಿ ಮಳೆಯ ಸಮಯದಲ್ಲಿಯೂ ಸಹಾ ಇಲ್ಲಿನ ರಸ್ತೆ ಹಾಳಾಗುತ್ತದೆ ಮಳೆ ನಿಂತ ಮೇಲೆ ಗ್ರಾಮಸ್ಥರೆ ಪುನರ್ ರಸ್ತೆಯನ್ನು ನಿರ್ಮಾಣ ಮಾಡಿಕೊಳ್ಳುವಂತ ವಾತಾವರಣ ನಮ್ಮ ಗ್ರಾಮದಲ್ಲಿ ನಿರ್ಮಾಣವಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಇಲ್ಲಿ ರಸ್ತೆ ನಿರ್ಮಾಣ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ತಿಳಿಸಲು ಕರೆ ಮಾಡಿದರು ಕರೆ ಸ್ವೀಕರಿಸುತ್ತಿಲ್ಲ, ಕಚೇರಿಗೆ ಹೋದರು ಸಹಾ ಸರಿಯಾದ ಸ್ಪಂದನೆ ಸಿಗುತ್ತಿಲ್ಲ ಹಾರಿಕೆ ಉತ್ತರವನ್ನು ನೀಡಲಾಗುತ್ತದೆ, ಸ್ವಾತಂತ್ರ್ಯ ಬಂದು 75 ವರ್ಷಗಳನ್ನು ಕಳೆದರೂ ಸಹ ಗ್ರಾಮದ ಮಧ್ಯ ಓಡಾಡಲು ಜನರಿಗೆ ಉತ್ತಮವಾದ ರಸ್ತೆ ಇದುವರೆವಿಗೂ ನಿರ್ಮಾಣವಾಗಿಲ್ಲದಿರುವುದು ನಮ್ಮ ದುರಂತವಾಗಿದೆ. ರಾಜಕಾರಣಿಗಳು ಸಹ ಸ್ಪಂದಿಸಿಲ್ಲ ಎಂದು ದೂರಿದ್ದಾರೆ.

ಸರ್ಕಾರ ರಸ್ತೆ ನಿರ್ಮಾಣಕ್ಕೆ ಪ್ರತಿ ವರ್ಷ ಸಾವಿರಾರು ಕೋಟಿ ರೂ.ಗಳನ್ನು ನೀಡುತ್ತದೆ ಆದರೆ ನಮ್ಮ ಗ್ರಾಮದಲ್ಲಿನ ರಸ್ತೆ ನಿರ್ಮಾಣಕ್ಕೆ ಇದುವರೆವಿಗೂ ಸಹಾ ಹಣವನ್ನು ನೀಡಿಲ್ಲ, ಇದರ ಬಗ್ಗೆ ಯಾವ ಚುನಾಯಿತ ಪ್ರತಿನಿಧಿಗಳು ಸಹಾ ಗ್ರಾಮದ ಈ ರಸ್ತೆಯ ಚಕಾರವನ್ನು ಎತ್ತಿಲ್ಲ, ಚುನಾವಣೆ ಸಮಯದಲ್ಲಿ ಮತವನ್ನು ಕೇಳಲು ಎಲ್ಲಾ ಪಕ್ಷದವರಯ ಸಹಾ ಬರುತ್ತಾರೆ ಆದರೆ ಗೆದ್ದ ನಂತರ ನಮ್ಮ ಗ್ರಾಮವನ್ನು ಮರೆಯುತ್ತಾರೆ, ಇದ್ದಲ್ಲದೆ ಪ್ರತಿ ಚುನಾವಣೆಯಲ್ಲಿಯೂ ಸಹಾ ಇದರ ಬಗ್ಗೆ ಎಲ್ಲರಲ್ಲೂ ಸಹಾ ಪ್ರಸ್ತಾವನೆ ಮಾಡಿದಾಗ ನಾನು ಗೆದ್ದು ಬಂದರೆ ಈ ಕೆಲಸವನ್ನು ಮಾಡಿಸುತ್ತೇನೆ ಎಂದು ಭರವಸೆಯನ್ನು ನೀಡುತ್ತಾರೆ ಆದರೆ ಮಾಡುವುದಿಲ್ಲ ಎಂದು ಗ್ರಾಮಸ್ಥರು ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ.

ಇನ್ನಾದರೂ ಹೊಳಲ್ಕೆರೆ ತಾಲೂಕು ಕಾಳಘಟ್ಟ ವಡ್ಡರಹಟ್ಟಿಯಿಂದ ದಾಸರಹಳ್ಳಿ ವಡ್ಡರಹಟ್ಟಿ ಹೋಗುವ ರಸ್ತೆಯಲ್ಲಿ ಇರುವ ಹಳ್ಳಕ್ಕೆ ಈ ಭಾಗದ ಚುನಾಯಿತ ಪ್ರತಿನಿಧಿಗಳು ಉತ್ತಮವಾದ ರಸ್ತೆಯನ್ನು ನಿರ್ಮಾಣ ಮಾಡಿಕೊಡುವರೆ ಎಂದು ಗ್ರಾಮಸ್ಥರು ಕಾಯುತ್ತಿದ್ದಾರೆ.

## ಬಳ್ಳಾರಿಯಲ್ಲಿ ಅದ್ದೂರಿ ಕಾಯಕಯೋಗಿ ನುಲಿಯ ಚಂದಯ್ಯ ಜಯಂತ್ಯೋತ್ಸವ

# ಕಾಯಕ ದಾಸೋಹಿ ನುಲಿಯ ಚಂದಯ್ಯ: ಲಿಡ್ಕರ್ ಅಧ್ಯಕ್ಷ ಮುಂಡರಿಗಿ ನಾಗರಾಜ್

**ಬಳ್ಳಾರಿ :** 12ನೇ ಶತಮಾನದ ಅನುಭವ ಮಂಟಪದಲ್ಲಿ ವಚನಕಾರರಾಗಿದ್ದ ನುಲಿಯ ಚಂದಯ್ಯ ಅವರು ಕಾಯಕ ದಾಸೋಹಿಗಳಾಗಿದ್ದರು ಎಂದು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಿಗಿ ನಾಗರಾಜ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶನಿವಾರ ಆಯೋಜಿಸಿದ್ದ ಕಾಯಕಯೋಗಿ ನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮವನ್ನು ನುಲಿಯ ಚಂದಯ್ಯ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದ ವಚನಕಾರರ ಕಾಲದ ಕಾಯಕಜೀವಿಗಳು ಯಾವ ಸಮುದಾಯವೂ ನಮ್ಮವರೆಂದು ಗುರುತಿಸಿಕೊಳ್ಳಲಾಗದ ರೀತಿಯಲ್ಲಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ ಅದರಲ್ಲಿ ನುಲಿಯ ಚಂದಯ್ಯ ಒಬ್ಬರು ಎಂದು ಹೇಳಿದರು.

ಸಮಾಜ ಹಾಗೂ ಜನ ಸಾಮಾನ್ಯರ ಏಳ್ಗೆಗಾಗಿ ಪರಿತಪಿಸಿದ ವಿವಿಧ ಮಹನೀಯರ ವಿಚಾರಧಾರೆಗಳನ್ನು ನಾವೆಲ್ಲರು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಜೀವನ ನಡೆಸಬೇಕು. ಎಲ್ಲರೂ ಸಂಘಟಿತರಾಗಿ ದುಶ್ಚಟಗಳಿಂದ ದೂರವಿದ್ದು, ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ನುಲಿಯ ಚಂದಯ್ಯ ಅವರು ಶ್ರೇಷ್ಠ ಕಾಯಕ ಯೋಗಿಯಾಗಿದ್ದರು, ತಮ್ಮ ವೃತ್ತಿಯ ಬಗ್ಗೆ ಅಪಾರ ಗೌರವ ಹೊಂದಿದ್ದವರು. ವೃತ್ತಿಯಿಂದ ಬಂದಂತಹ ಆದಾಯದಲ್ಲಿ ತಮ್ಮ ಜೀವನಕ್ಕೆ ಅಲ್ಪ



ವ್ಯಯಮಾಡಿಕೊಂಡು ಉಳಿದ ಹಣದಲ್ಲಿ ಜಂಗಮರ ದಾಸೋಹಕ್ಕಾಗಿ ಮೀಸಲಿಟ್ಟಿದ್ದು, ಅವರ ನಿಸ್ವಾರ್ಥ ಸೇವೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಸಿಂಧನೂರು ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಉಪನ್ಯಾಸಕ ಡಾ. ಗಂಗಾಧರ.ಎಲ್ ಅವರು ಉಪನ್ಯಾಸದಲ್ಲಿ ಮಾತನಾಡಿ, ನುಲಿಯ ಚಂದಯ್ಯನವರು ಸುಮಾರು ಕ್ರಿ.ಶ.1,130 ರಲ್ಲಿ ವಿಜಯಪುರ ಜಿಲ್ಲೆಯ ಶಿವಣಗಿ ಗ್ರಾಮದಲ್ಲಿ ಜನಿಸಿದರು. ನಂತರ ಬಸವಣ್ಣನ ಕಾರ್ಯಕ್ಷೇತ್ರ ಕಲ್ಯಾಣಕ್ಕೆ ಬಂದರು. ಕಲ್ಯಾಣದ ಕೆರೆಗಳಲ್ಲಿ ಸಿಗುವ ಹೊಡಕೆ, ಚೇಣಿ ಮುಂತಾದ ನಾರುಗಳಿಂದ ಹಗ್ಗ ಹೊಸೆದು ಮಾರಾಟ ಮಾಡಿ ಬಂದ ಹಣದಿಂದ ಜಂಗಮ ದಾಸೋಹ ನಡೆಸುತ್ತಿದ್ದರು. ಈ ರೀತಿ ನುಲಿಯ ಕಾಯಕದಿಂದಾಗಿ ಮುಂದೆ ನುಲಿಯ ಚಂದಯ್ಯನೆಂದು ಹೆಸರಾದರು ಎಂದು ತಿಳಿಸಿದರು.

ಕಲ್ಯಾಣದಲ್ಲಿ 1160ರ ವೇಳೆಯಲ್ಲಿ ನಡೆಯುತ್ತಿದ್ದ ಅನುಭವ ಗೋಷ್ಠಿಗಳಲ್ಲಿ ಇವರು ಚಂದೇಶ್ವರ ಲಿಂಗ ಎಂಬ ಅಂಕಿತನಾಮದಲ್ಲಿ ಸುಮಾರು 48 ವಚನ ರಚಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕೊರವ ಸಮಾಜದ ಜಿಲ್ಲಾಧ್ಯಕ್ಷ ಶ್ರೀರಾಮುಲು, ಗೌರವಾಧ್ಯಕ್ಷ ಶಂಕರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ನಾಗರಾಜ್ ಸೇರಿದಂತೆ ಸಮುದಾಯದ ಮುಖಂಡರು, ಮಹಿಳೆಯರು ಹಾಗೂ ಇತರರು ಉಪಸ್ಥಿತರಿದ್ದರು.

ಅದ್ದೂರಿ ಮೆರವಣಿಗೆ: ಕಾಯಕಯೋಗಿ ನುಲಿಯ ಚಂದಯ್ಯ ಜಯಂತ್ಯೋತ್ಸವ ಅಂಗವಾಗಿ ನಗರದಲ್ಲಿ ಅದ್ದೂರಿ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ಪೂರ್ಣ ಕುಂಭ ಹೊತ್ತ ಮಹಿಳೆಯರು ಹಾಗೂ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಗಮನ ಸೆಳೆದವು.

ಮೆರವಣಿಗೆಯು ನಗರದ ಕೊರವ ಸಮುದಾಯ ಭವನ ಆವರಣದಿಂದ ಆರಂಭವಾಗಿ ಕೊರವ ಬೀದಿ-ಸುಂಕ್ಲಮ್ಮ ದೇವಸ್ಥಾನ-ಕೌಲ್ ಬಜಾರ್ ಮುಖ್ಯರಸ್ತೆ-ವಾಲ್ಮೀಕಿ ಭವನ-ಡಾ.ಬಾಬು ಜಗಜೀವನರಾಂ ಭವನದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

# ಜಿಲ್ಲಾಡಳಿತದಿಂದ ಸ್ವಾತಂತ್ರ್ಯೋತ್ಸವ

**ಚಿಕ್ಕಮಗಳೂರು, ಆ.14:** ಜಿಲ್ಲಾಡಳಿತದ ವತಿಯಿಂದ ಆಗಸ್ಟ್ 15 ರಂದು ಬೆಳಿಗ್ಗೆ 9 ಗಂಟೆಗೆ ಸ್ವಾತಂತ್ರ್ಯೋತ್ಸವವನ್ನು ನಗರದ ನೇತಾಜಿ ಸುಭಾಷ್‌ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ರಾಷ್ಟ್ರ ಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

ಚಿಕ್ಕಮಗಳೂರು ಕ್ಷೇತ್ರದ ಶಾಸಕರಾದ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷರಾದ ಬಿ.ಶೀಲಾ ದಿನೇಶ್ ಪಾಲ್ಗೊಳ್ಳಲಿದ್ದಾರೆ.

# ಕರ್ನಾಟಕ ರಾಜ್ಯ ಮುಕ್ತ ವಿ.ವಿ.ಗೆ ಪ್ರವೇಶ

**ಚಿಕ್ಕಮಗಳೂರು, ಆ.14:** ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಚಿಕ್ಕಮಗಳೂರು ಪ್ರಾದೇಶಿಕ ಕೇಂದ್ರದಲ್ಲಿ 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪ್ರಥಮ ವರ್ಷದ ಬಿ.ಎ., ಬಿ.ಕಾಂ, ಬಿ.ಎಸ್ಸಿ, ಬಿ.ಸಿ.ಎ., ಬಿ.ಬಿ.ಎ., ಬಿ.ಎಸ್.ಡಬ್ಲ್ಯು, ಬಿ.ಎಲ್.ಐ.ಸಿ., ಎಂ.ಎಲ್.ಐ.ಸಿ., ಎಂ.ಎ., ಎಂ.ಕಾಂ, ಎಂ.ಎಸ್ಸಿ, ಎಂ.ಬಿ.ಎ., ಎಂ.ಎಸ್.ಡಬ್ಲ್ಯು, ಡಿಪ್ಲೊಮಾ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಜುಲೈ 1 ರಿಂದ ಪ್ರವೇಶಾತಿ ಪ್ರಾರಂಭವಾಗಿದೆ.

ರಾಜ್ಯ ಮುಕ್ತ ವಿವಿಯು ಯುಜಿಸಿಯ ಅನುಮತಿಯೊಂದಿಗೆ 2025-26ನೇ ಸಾಲಿನ ಜುಲೈ ಆವೃತ್ತಿಗೆ ಸ್ನಾತಕ, ಸ್ನಾತಕೋತ್ತರ ಪದವಿ, ಡಿಪ್ಲೊಮಾ ಸರ್ಟಿಫಿಕೇಟ್ ಶಿಕ್ಷಣ ಕ್ರಮಗಳಿಗೆ ಕೇಂದ್ರ ಕಚೇರಿ ಹಾಗೂ ಪ್ರಾದೇಶಿಕ ಕೇಂದ್ರಗಳ ಪ್ರವೇಶಾತಿ ನಡೆಯುತ್ತಿದ್ದು, ಪ್ರವೇಶ ಪಡೆಯಲು ಸೆಪ್ಟಂಬರ್ 15 ಕೊನೆಯ ದಿನವಾಗಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬಹುದು.

ಐಟಿಐ ಹಾಗೂ ಡಿಪ್ಲೊಮಾ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರಥಮ ಬಿ.ಎ., ಬಿ.ಕಾಂ., ಪ್ರವೇಶಕ್ಕೆ ಅವಕಾಶವಿದೆ. ಹೆಚ್ಚಿನ ಮಾಹಿತಿಗೆ ನಗರದ ಮಧುವನ ಬಡಾವಣೆ ಸಾಯಿ ಮಂದಿರ ರಸ್ತೆಯಲ್ಲಿರುವ ಕರಾಮುವಿ ಪ್ರಾದೇಶಿಕ ಕೇಂದ್ರದ ಪ್ರಾದೇಶಿಕ ನಿರ್ದೇಶಕ ಕೆ.ಪಿ.ಗುರುದತ್ ಅವರನ್ನು ಸಂಪರ್ಕಿಸಬಹುದು. ಸಂಪರ್ಕ ಸಂಖ್ಯೆಗಳು: 8088716236, 8951686199, 9449396155, 9481478448, 8971124601.

# ರಸ್ತೆ ದುರಸ್ಥಿಗೆ ಆಗ್ರಹಿಸಿ ಬಿಜೆಪಿ-ಜೆಡಿಎಸ್ ಪ್ರತಿಭಟನೆಗೆ ನಿರ್ಧಾರ

**ಚಿಕ್ಕಮಗಳೂರು:** ಮಲೆನಾಡು ಭಾಗದಲ್ಲಿ ಕಳೆದ ಮೂರು ವರ್ಷಗಳಿಂದ ಅತೀ ಹೆಚ್ಚು ಮಳೆಯಾಗುತ್ತಿರುವ ಪರಿಣಾಮ ರಸ್ತೆಗಳು ಗುಂಡಿ ಗೊಟರುಗಳಿಂದ ಕೂಡಿದ್ದು, ವಾಹನ ಸವಾರಿಗೆ ತೊಂದರೆಯಾಗುತ್ತಿರುವ ಕಾರಣದಿಂದ ಕೂಡಲೇ ರಸ್ತೆ ದುರಸ್ತಿಪಡಿಸುವಂತೆ ಒತ್ತಾಯಿಸಿ ಆ.13 ರಂದು ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಕಾರ್ಯಕರ್ತರು ಜೋಳದಾಳ್ ವೃತ್ತದಲ್ಲಿ ಬೀದಿಗಿಳಿದು ರಸ್ತೆ ತಡೆ ನಡೆಸಲು ನಿರ್ಧರಿಸಿದ್ದಾರೆ.

ಇಂದು ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಹಾಗೂ ಪರಾಜಿತ ಅಭ್ಯರ್ಥಿ ದೀಪಕ್ ದೊಡ್ಡಯ್ಯ ಮಾತನಾಡಿ, ಚಿಕ್ಕಮಗಳೂರು-ಮಲ್ಲಂದೂರು ರಸ್ತೆ, ವಸ್ತಾರೆ-ಆಲ್ದೂರು-ಬಾಳೆಹೊನ್ನೂರು



ರಸ್ತೆ, ಹಾಂದಿ-ಬಸ್ಕಲ್-ಗೆಂಡೇಹಳ್ಳಿ ರಸ್ತೆ ಮಾರ್ಗವಾಗಿ ಹೋಬಳಿ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಎಲ್ಲಾ ರಸ್ತೆಗಳು ಮೃತ್ಯು ಗುಂಡಿಗಳಾಗಿ ಮಾರ್ಪಾಡಾಗಿವೆ ಎಂದು ಆರೋಪಿಸಿದರು.

ರಾಜ್ಯಸರ್ಕಾರ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಪಂಚ ಗ್ಯಾರಂಟಿಗಳಿಗೆ ಬಳಸುತ್ತಿರುವ ಕಾರಣದಿಂದಾಗಿ ಅಧಿಕಾರಕ್ಕೆ ಬಂದ ಈವರೆಗೆ ಜನಪರವಾದ ಅಭಿವೃದ್ಧಿ ಕಾಮಗಾರಿಗಳನ್ನು ಸ್ಥಗಿತಗೊಳಿಸಿದೆ ಎಂದು ಟೀಕಿಸಿದರು.

ಕೃಷಿ ಮತ್ತು ತೋಟಗಾರಿಕೆ ಇಲಾಖೆ ವ್ಯಾಪ್ತಿಗೆ ಬರುವ ಅನುದಾನವನ್ನು ಕಡಿತಗೊಳಿಸಿರುವುದರಿಂದ ರೈತರು ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಅತಿವೃಷ್ಠಿಹಾನಿಯಿಂದಾಗಿ ಕಾಫಿ, ಕಾಳುಮೆಣಸು, ಅಡಿಕೆ, ಏಲಕ್ಕಿ ಮುಂತಾದ ಬೆಳೆಗಳು ಕೊಳೆರೋಗಕ್ಕೆ ತುತ್ತಾಗಿ ಹಾನಿಯಾಗಿದ್ದು, ಕೂಡಲೇ ಸೂಕ್ತ ಪರಿಹಾರ ನೀಡಬೇಕೆಂದು ಅಂದು ರಸ್ತೆ ತಡೆ ನಡೆಸುವ ಮೂಲಕ ಸಾವಿರಾರು ಕಾರ್ಯಕರ್ತರು ಸರ್ಕಾರದ ಗಮನ ಸೆಳೆಯಲಿದ್ದಾರೆ ಎಂದರು.

ಕಾಡುಪ್ರಾಣಿಗಳು ಮತ್ತು ಮಾನವ ಸಂಘರ್ಷ ಇತ್ತೀಚೆಗೆ ಮಿತಿಮೀರಿದ್ದು, ಕಾಡಾನೆ, ಕಾಡುಕೋಣ, ಹುಲಿ ಚಿರತೆಗಳು ಮಾನವನ ಸಾವಿಗೆ ಕಾರಣವಾಗಿದ್ದು, ಜನಸಾಮಾನ್ಯರ ಜೀವನದ ಜೊತೆ ಚೆಲ್ಲಾಟವಾಡುತ್ತಿರುವ ಸರ್ಕಾರದ ವಿರುದ್ಧ ಆಲ್ದೂರು ಮಂಡಲ ಬಿಜೆಪಿ-ಜೆಡಿಎಸ್ ಒಂದಾಗಿ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಆಲ್ದೂರು ಮಂಡಲ ಅಧ್ಯಕ್ಷ ರವಿ ಬಸರವಳ್ಳಿ, ಕೆರಮಕ್ಕಿ ಮಹೇಶ್, ಜೆಡಿಎಸ್ ನ ಟಿ.ಡಿ. ಮಲ್ಲೇಶ್, ಹೆಚ್.ಎನ್ ಕೃಷ್ಣೇಗೌಡ ಮತ್ತಿತರರು ಉಪಸ್ಥಿತರಿದ್ದರು.

# ಕೊಪ್ಪ-ನಿವೇಶನ ರಹಿತರಿಗೆ ನಿವೇಶನ ನೀಡಲು ಆಗ್ರಹ: ಬಾಲಕೃಷ್ಣ

**ಚಿಕ್ಕಮಗಳೂರು:** ಕೊಪ್ಪ ತಾಲೂಕು ಎಲೆಮಡಲು, ಹೆರೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ದಲಿತರು ಇತರೆ ಹಿಂದುಳಿದವರಿಗೆ ನಿವೇಶನ ನೀಡುವಲ್ಲಿ ಅನ್ಯಾಯ ಮಾಡಲಾಗುತ್ತಿದೆ ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಬಾಲಕೃಷ್ಣ ಬಿಳೇಕಲ್ಲು ಆರೋಪಿಸಿದರು.

ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆರೂರು ಗ್ರಾಮಪಂಚಾಯಿತಿಗೆ ಸಂಬಂಧಿಸಿದ ಸಿಗೋಡು ಸ.ನಂ.9 ರಲ್ಲಿ ಒಂಭತ್ತು ದಲಿತ ಕುಟುಂಬಗಳು ವಾಸ ಮಾಡಲು ಮನೆಯಿಲ್ಲದೆ ಸರಕಾರಿ ಜಾಗದಲ್ಲಿ ಗುಡಿಸಲು ಹಾಕಿಕೊಂಡಿದ್ದರು. ಆಗ ತಹಸೀಲ್ದಾರ್ ಮತು ಸ್ಥಳೀಯ ಗ್ರಾಮ ಪಂಚಾಯಿತಿ ಅಧಿಕಾರಿಗಳು



ಗುಡಿಸಲುಗಳನ್ನು ಕಿತ್ತುಹಾಕಿ ನಿವಾಸಿಗಳ ಮೇಲೆ ಕೇಸು ದಾಖಲಿಸಿದ್ದರು ಎಂದರು ಹೇಳಿದರು.

ಮತ್ತೆ ಅದೇ ಪಂಚಾಯಿತಿಯ ಸರ್ವೆನಂಬರ್ 6 ರಲ್ಲಿ 40 ದಲಿತ ಬಡ ಕುಟುಂಬಗಳು ಪಂಚಾಯಿತಿ ಸದಸ್ಯ ಅಮ್ಜದ್ ಬೆಂಬಲದಲ್ಲಿ ಟೆಂಟ್ ಹಾಕಿ ವಾಸಿಸುತ್ತಿದ್ದರು. ಇದೇ ಅಮ್ಜದ್ ಆ ಜಾಗ 4(1) ಅಧಿಸೂಚನೆಗೆ ಸೇರಲ್ಪಟ್ಟಿದೆ ಎಂದು ಹೇಳಿ ಅಲ್ಲಿಂದಲೂ ಬಡವರನ್ನು ಒಕ್ಕಲೆಬ್ಬಿಸಿ ಈಗ ಆ ಜಾಗವನ್ನು ಉಳ್ಳವರು ಕಾಫಿ ತೋಟ ಮಾಡಿಕೊಂಡಿದ್ದಾರೆ. ಬಡವರಿಗೆ ನಿವೇಶನ ನೀಡಲು 4(1), ಅಡ್ಡಿಯಾದರೆ ಉಳ್ಳವರು ಕಾಫಿ ತೋಟಮಾಡಲು ಈ ಅಧಿಸೂಚನೆ ಅಡ್ಡಿಯಾಗುವುದಿಲ್ಲವೇ ಎಂದು ಪ್ರಶ್ನಿಸಿದರು.

ಈಗ ಆ 40 ಕುಟುಂಬಗಳು ಸ.ನಂ.17 ರಲ್ಲಿ ನೆಲೆ ನಿಂತಿವೆ. ಆ ಜಾಗಕ್ಕೂ ತಹಸಿಲ್ದಾರ್, ಆರ್‌ಎಫ್‌ಓ, ಪಿಡಿಓ ಬಂದು ಈ ಜಾಗವೂ 4(1) ಗೆ ಸೇರುತ್ತದೆ ಎಂದು ಅಲ್ಲಿಂದಲೂ ತೆರವುಗೊಳಿಸಿದ್ದಾರೆ ಎಂದು ದೂರಿದರು.

ಹೀಗಾದರೆ ಬಡವರು ವಾಸಿಸುವುದಾದರೂ ಎಲ್ಲಿ ಎಂದು ಪ್ರಶ್ನಿಸಿದರಲ್ಲದೆ, ಕೂಡಲೇ ಕಂದಾಯ ಇಲಾಖೆ ಒತ್ತುವರಿಯಾಗಿರುವ ಸರಕಾರಿ ಜಾಗವನ್ನು ಖುಲ್ಲಾ ಮಾಡಿಸಿ ನಿವೇಶನ ಇಲ್ಲದ ಬಡವರಿಗೆ ನಿವೇಶನ ಹಂಚಿಕೆ ಮಾಡಬೇಕು. ಇಲ್ಲವಾದಲ್ಲಿ ಡಿಎಸ್‌ಎಸ್ ಕಾರ್ಯಕರ್ತರು ನಿವಾಸಿಗಳೊಂದಿಗೆ ಜಿಲ್ಲಾಧಿಕಾರಿ ಕಚೇರಿ ಮುಂದೆ ತೀವ್ರತರದ ಪ್ರತಿಭಟನೆ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಯೋಗೇಶ್ ತುಡುಕೂರು, ಚೇತನ್, ಸತೀಶ್, ರವಿ ಮತ್ತಿತರರು ಉಪಸ್ಥಿತರಿದ್ದರು.

# ಸಮಾಜವು ಸಂಘಟಿತರಾದರೆ ಮಾತ್ರ ಅಭಿವೃದ್ಧಿ ಸಾಧ್ಯ

**ಚಿಕ್ಕಮಗಳೂರು:** ಮಡಿವಾಳ ಸಮಾಜವು ಎಲ್ಲಾ ಸಮಾಜಕ್ಕಿಂತ ಚಿಕ್ಕ ಜನಾಂಗವಾಗಿದೆ. ಸಮಾಜ ಬಾಂಧವರು ಒಂದುಗೂಡಿ ಸರ್ಕಾರದ ಯೋಜನೆಗಳನ್ನು ಪಡೆದುಕೊಂಡು ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಬೇಕು ಎಂದು ಚಿತ್ರದುರ್ಗದ ಮಹಾಸಂಸ್ಥಾನ ಮಠದ ಶ್ರೀ ಬಸವ ಮಾಚಿದೇವ ಮಹಾ ಸ್ವಾಮೀಜಿ ಹೇಳಿದರು.

ನಗರದ ಬಸವನಹಳ್ಳಿ ಸಮೀಪದ ಜಿಲ್ಲಾ ಮಡಿವಾಳ ಸಂಘದ ಭವನದಲ್ಲಿ ಏರ್ಪಡಿಸಿದ್ದ 'ಮನ ಮನೆಗೆ ಮಾಚಿದೇವ' ಶ್ರಾವಣ ಮಾಸದ ನಿಮಿತ್ಯ ವಿಶೇಷ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಅವರು ಆರ್ಶೀವಚನ ನೀಡಿದರು.

ಸಮಾಜ ಮತ್ತು ಸಮುದಾಯದ ಒಳಿತಿಗಾಗಿ ಮಾಚಿದೇವರ ಆದೇಶ ಮಾಡುತ್ತಾರೋ ಅಂತಹ ಕಾರ್ಯವನ್ನು ನಾವು ಪ್ರಾಮಾಣಿಕವಾಗಿ ಮಾಡುತ್ತೇವೆ.




ಸಮುದಾಯದವರು ಸಂಘಟಿತರಾದರೆ ಮಾತ್ರ ಸಮಾಜವು ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಮುನ್ನೆಲೆಗೆ ಬರಲು ಸಾಧ್ಯ ಎಂಬುದು ಅರಿತುಕೊಳ್ಳಬೇಕು ಎಂದರು.

ಮಡಿವಾಳ ಸಮಾಜದ ಮುಂದಿನ ಪೀಳಿಗೆ ಉಳಿಸಿ ಬೆಳೆಸಲು ಇಂದಿನಿಂದಲೇ ಜನಾಂಗದ ಮುಖಂಡರು ಪ್ರಜ್ಞಾವಂತರಾಗಬೇಕು. ರಾಜ್ಯದ ಪ್ರತಿ ಜಿಲ್ಲೆ ಹಾಗೂ ತಾಲ್ಲೂಕಿನ ಮಡಿವಾಳ ಸಂಘದ ಅರಿವನ್ನು ಮೂಡಿಸುವುದು ಜಿಲ್ಲಾ ಮುಖಂಡರುಗಳ ಕರ್ತವ್ಯವಾಗಿದ್ದು, ಆಗ ಮಾತ್ರ ಮಡಿವಾಳ ಜೀವನ ಉದ್ಧಾರವಾಗಲು ಸಾಧ್ಯ ಎಂದು ತಿಳಿಸಿದರು.

ರಾಜಕೀಯವಾಗಿ ಜನಾಂಗದ ಯಾವುದೇ ಮುಖಂಡರುಗಳು ಜನಪ್ರತಿನಿಧಿಗಳಾಗಿಲ್ಲ. ಆ ನಿಟ್ಟಿನಲ್ಲಿ ಜಿಲ್ಲಾವಾರು ಮುಖಂಡರುಗಳೇ ಒಟ್ಟಾಗಿ ಕೈಜೋಡಿಸಬೇಕು. ಪ್ರತಿ ಜಿಲ್ಲೆಗಳಲ್ಲಿ ಸರ್ಕಾರದ ಸೌಲಭ್ಯ ಹಾಗೂ ದಾನಿಗಳ ಸಹಕಾರದಲ್ಲಿ ಒಂದೊಂದು ಭವನವನ್ನು ನಿರ್ಮಿಸಿಕೊಂಡಲ್ಲಿ ಆರ್ಥಿಕ ಏಳಿಗೆ ಹೊಂದುವ ಜೊತೆಗೆ ಸಮಾಜವು ಅಭಿವೃದ್ಧಿ ಹೊಂದಲಿದೆ ಎಂದರು.

ಚಿಕ್ಕಮಗಳೂರಿನ ಭವ್ಯವಾದ ಸಮುದಾಯಭವನ ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿದೆ. ಈ ಕಟ್ಟಡದ ಅಭಿವೃದ್ಧಿಗೂ ಮಠದಿಂದ ಮುಖ್ಯಮಂತ್ರಿಗಳಿಗೆ ಅನುದಾನಕ್ಕೆ ಕೋರಿ ಪತ್ರವು ಬರೆಯಲಾಗಿದೆ ಎಂದ ಅವರು, ಮುಂದಿನ ಶ್ರಾವಣ ಮಾಸದ ಆರಂಭದೊಳಗೆ ಕಟ್ಟಡವನ್ನು ಸಂಪೂರ್ಣಗೊಳಿಸಿ ಉದ್ಘಾಟಿಸಲು ಜನಾಂಗವು ಮುಂದಾಗಬೇಕಿದೆ ಎಂದು ತಿಳಿಸಿದರು.

ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷ ಲಕ್ಷ್ಮಣ್ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 10 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ಸಮಾಜದವರು ನೆಲೆಸಿದ್ದಾರೆ. ಆರ್ಥಿಕವಾಗಿ ಹಿಂದುಳಿದಿರುವ ಸಮಾಜದ ಏಳಿಗೆಗೆ ಸರ್ವರು ಒಗಟ್ಟಿನಿಂದ ಕೈಜೋಡಿಸಿದಾಗ ಮಾತ್ರ ಭವನದ ಕಟ್ಟಡವನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲು ಸಾಧ್ಯವಾಗಲಿದೆ ಎಂದರು.

ಈಗಾಗಲೇ ಸರ್ಕಾರದಿಂದ ಅನುದಾನವು ಹಂತ ಹಂತವಾಗಿ ಬಿಡುಗಡೆಗೊಂಡು ಶೇ.85ರಷ್ಟು ಕಟ್ಟಡ ಪೂರ್ಣಗೊಂಡಿದೆ. ಇನ್ನಷ್ಟು ಸಣ್ಣಪುಟ್ಟ ಕೆಲಸಗಳು ಬಾಕಿಯಿರುವ ಹಿನ್ನೆಲೆಯಲ್ಲಿ ಜನಾಂಗದ ಮುಖಂಡರು ಕಟ್ಟಡಕ್ಕೆ ಅವಶ್ಯವಿರುವ ವಸ್ತುಗಳನ್ನು ಖರೀದಿಸಿಕೊಟ್ಟಲ್ಲಿ ಸಹಾಯವಾಗಲಿದೆ ಎಂದರು.

## ಫಿಟ್ನೆಸ್ ಸೆಂಟರ್‌ನ 3ನೇ ಅಂತಸ್ಸಿನಿಂದ ಬಿದ್ದು ಯುವತಿ ಸಾವು

**ಬೆಂಗಳೂರು:** ಬೆಂಗಳೂರು ಉತ್ತರ ತಾಲೂಕಿನ ಕಡಬಗೆರೆಯಲ್ಲಿ ಫಿಟ್ನೆಸ್ ಸೆಂಟರ್ ಒಂದರಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದ ಯುವತಿಯೊಬ್ಬಳು ಮೂರನೇ ಅಂತಸ್ತಿನಿಂದ ಕೆಳಗೆ ಬಿದ್ದು ಸಾವನ್ನಪ್ಪಿದ್ದಾಳೆ.



20 ವರ್ಷದ ರಿಸೆಪ್ಷನಿಸ್ಟ್ ರಕ್ಷಿತಾ ಮೃತ ದುರ್ದೈವಿ. ಕಳೆದ ಎಂಟು ತಿಂಗಳಿನಿಂದ ರಕ್ಷಿತಾ ಜುನಿಫರ್ ಫಿಟ್ನೆಸ್ ಸೆಂಟರ್‌ನಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದರು. ಫಿಟ್ನೆಸ್ ಸೆಂಟರ್‌ನ ಮೂರನೇ ಮಹಡಿಗೆ ಹೋಗಿ ಅಲ್ಲಿಂದ ಬಿದ್ದು ಮೃತಪಟ್ಟಿದ್ದಾರೆ. ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಆಗಿದೆ.

## ಸಿದ್ದರಾಮಯ್ಯನವರೇ, ಈ ನವರಂಗಿ ಆಟ ನಿಲ್ಲಿಸಿ ರಾಜೀನಾಮೆ ನೀಡಿ ಕರ್ನಾಟಕವನ್ನು ಉಳಿಸಿ : ಆರ್.ಅಶೋಕ್

**ಬೆಂಗಳೂರು :** ಅಧಿಕಾರ ಇದ್ದಾಗ ನವರಂಗಿ ಆಟ. ವಿರೋಧ ಪಕ್ಷದಲ್ಲಿದ್ದಾಗ ಗೋಸುಂಬೆ ನಾಟಕ. ಸಾಕು ಮಾಡಿ ಈ ನಾಟಕ. ರಾಜೀನಾಮೆ ಕೊಟ್ಟು ಕರ್ನಾಟಕವನ್ನು ಉಳಿಸಿ. ಕನ್ನಡಿಗರನ್ನು ನೆಮದಿಯಾಗಿರಲು ಬಿಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅಶೋಕ್ ಅವರು, ಸಿಎಂ ಸಿದ್ದರಾಮಯ್ಯನವರೇ, ಅಧಿಕಾರ ಇದ್ದಾಗ ಹಗಲುವೇಷ



ವಿರೋಧ ಪಕ್ಷದಲ್ಲಿದ್ದಾಗ ರೋಷಾವೇಶ. ಅಧಿಕಾರ ಯಾರಿಗೂ ಶಾಶ್ವತ ಅಲ್ಲ. ನಿಮ್ಮ ದಿವಾಳಿತನಕ್ಕೆ ಸಾರಿಗೆ ನೌಕರರು ಎಷ್ಟು ದಿನ ನಷ್ಟ ಅನುಭವಿಸಬೇಕು? ನಿಮ್ಮ ದುರಾಡಳಿತಕ್ಕೆ ಜನಸಾಮಾನ್ಯರು ಏಕೆ ದಿನನಿತ್ಯ ಪರದಾಡಬೇಕು? ಎಂದು ಸಿದ್ದರಾಮಯ್ಯ ಅವರನ್ನು ತರಾಟೆಗೆ ತೆಗದುಕೊಂಡಿದ್ದಾರೆ.

ಇನ್ನೆಷ್ಟು ದಿನ ಸ್ವಾಮಿ ಈ ಭಂಡ ಬಾಳು. ನಿಮ ಅಧಿಕಾರದ ಲಾಲಸೆಗೆ, ದುರಾಡಳಿತಕ್ಕೆ ಜನಸಾಮಾನ್ಯರು ಇನ್ನು ಯಾವ್ಯಾವ ರೀತಿ ಪರದಾಡಬೇಕು?, ಇನ್ನೆಷ್ಟು ಕಷ್ಟ ಅನುಭವಿಸಬೇಕು. ಬಸ್ಸಿಲ್ಲ..ಬಸ್ಸಿಲ್ಲ, ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಿಗೆ ಹೋಗಲು ಬಸ್ಸಿಲ್ಲ. ನೌಕರರು, ಉದ್ಯೋಗಿಗಳು ಕೆಲಸಕ್ಕೆ ಹೋಗಲು ಬಸ್ಸಿಲ್ಲ. ನೆಂಟರಿಷ್ಟರ ಮನೆಗಳಿಗೆ, ಶುಭ ಸಮಾರಂಭಗಳಿಗೆ, ಸಾವು–ನೋವಿಗೆ ಹೋಗಲು ಬಸ್ಸಿಲ್ಲ. ಇದು ಬಹುಪಾಲು ಕನ್ನಡಿಗರ ಇಂದಿನ ಬವಣೆ ಎಂದು ವಿವರಿಸಿದ್ದಾರೆ.

ರಾಜ್ಯದ ಖಜಾನೆ ಖಾಲಿ ಮಾಡಿ ಪಾಪರ್ ಆಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಚೆಲ್ಲಾಟ, ಜನಸಾಮಾನ್ಯರಿಗೆ ಪರದಾಟ, ಗೋಳಾಟ, ತೊಳಲಾಟ! ಸಿಎಂ ಸಿದ್ದರಾಮಯ್ಯನವರೇ, ನಿಮ ಘನಂದಾರಿ ಆಡಳಿತದಿಂದ ಸಾರಿಗೆ ನಿಗಮಗಳನ್ನು ಸರ್ವನಾಶ ಮಾಡಿಬಿಟ್ಟರಲ್ಲ ಸ್ವಾಮಿ. ಸಾರಿಗೆ ನೌಕರರ ಹಿಂಬಾಕಿ ಕೊಡಲು ದುಡ್ಡಿಲ್ಲ. ನೌಕರರ ವೇತನ ಹೆಚ್ಚಳ ಮಾಡಲು ದುಡ್ಡಿಲ್ಲ. ಹೊಸ ಬಸ್ ಖರೀದಿಗೆ ದುಡ್ಡಿಲ್ಲ. ಹಳೆ ಬಸ್‌ಗಳ ರಿಪೇರಿಗೆ ದುಡ್ಡಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ. ಸಿದ್ಧರಾಮಯ್ಯನವರೇ, ದಯವಿಟ್ಟು ರಾಜೀನಾಮೆ ಕೊಟ್ಟು ಕರ್ನಾಟಕವನ್ನು ಉಳಿಸಿ. ಕನ್ನಡಿಗರಿಗೆ ನೆಮದಿಯ ಜೀವನ ಮಾಡಲು ಬಿಡಿ ಎಂದು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

## ಬೀದಿ ನಾಯಿಗಳ ಹಾವಳಿ, ಮಕ್ಕಳು ಸೇರಿ ಹಲವರಿಗೆ ಕಡಿತ : ಎಚ್ಚೆತ್ತ ಪಾಲಿಕೆ



**ದಾವಣಗೆರೆ:** ಹಳೇ ಕುಂದುವಾಡ ಮತ್ತು ಬೆಂಚಿಕಟ್ಟೆ ಪ್ರದೇಶದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಶಾಲೆ ಬಿಡುವ ಸಮಯದಲ್ಲಿ ಮಕ್ಕಳು ಸೇರಿ ಹಲವರ ಮೇಲೆ ದಾಳಿ ನಡೆಸಿವೆ. ಇದರಿಂದ ಜನರು ಭಯಭೀತರಾಗಿದ್ದಾರೆ.

ಸೋಮವಾರ ಸಂಜೆ ನಡೆದ ಈ ಘಟನೆಯಲ್ಲಿ ಭಾವನ (11), ಆಶಾ (8), ಕರಿಬಸಮ್ಮ (45), ಮತ್ತು ಅನಿಲ್ ಕುಮಾರ್ (36) ಸೇರಿದಂತೆ ಸುಮಾರು ಹತ್ತಕ್ಕೂ ಹೆಚ್ಚು ಜನರಿಗೆ ನಾಯಿಗಳು ಕಚ್ಚಿ ಗಾಯಗೊಳಿಸಿವೆ. ಗಾಯಾಳುಗಳನ್ನು ಚಿಗಟೇರಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಬೀದಿ ನಾಯಿಗಳ ನಿಯಂತ್ರಣಕ್ಕಾಗಿ ಈ ಹಿಂದೆ ಹಲವು ಬಾರಿ ಮಹಾನಗರ ಪಾಲಿಕೆಗೆ ಮನವಿ ಸಲ್ಲಿಸಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದರು ಎಂದು ಸ್ಥಳೀಯರು ಆರೋಪಿಸಿದ್ದಾರೆ. ನಾವು ಹುಚ್ಚು ನಾಯಿಗಳನ್ನು ಹಿಡಿಯುವುದಿಲ್ಲ ಎಂದು ಪಾಲಿಕೆ ಅಧಿಕಾರಿಗಳು ಉಡಾಫೆಯ ಉತ್ತರ ನೀಡಿದ್ದರು. ಪಾಲಿಕೆಯ ನಿರ್ಲಕ್ಷ್ಯದಿಂದಲೇ ಪದೇ ಪದೇ ಇಂತಹ ಘಟನೆಗಳು ನಡೆಯುತ್ತಿವೆ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸ್ಥಳೀಯರ ಆಕ್ರೋಶದ ಹಿನ್ನೆಲೆಯಲ್ಲಿ ಮಂಗಳವಾರ ಹಳೇ ಕುಂದುವಾಡದಲ್ಲಿ "ಆಪರೇಷನ್ ಡಾಗ್" ಕಾರ್ಯಾಚರಣೆ ನಡೆಸಿ, 10ಕ್ಕೂ ಹೆಚ್ಚು ನಾಯಿಗಳನ್ನು ಹಿಡಿದಿದೆ. ಹಿಡಿದ ನಾಯಿಗಳಿಗೆ ರೇಬೀಸ್ ಚುಚ್ಚುಮದ್ದು ನೀಡಿದ ನಂತರ ಅವುಗಳನ್ನು ಮತ್ತೆ ಅದೇ ಸ್ಥಳಕ್ಕೆ ಬಿಡಲಾಗುವುದು ಎಂದು ಪಾಲಿಕೆ ಆರೋಗ್ಯ ನಿರೀಕ್ಷಕ ರಾಜಪ್ಪ ತಿಳಿಸಿದ್ದಾರೆ.

ನಗರಕ್ಕೆ ಸೇರಿಕೊಂಡಿರುವ ಹಳ್ಳಿಗಳಾದ ಹಳೇ ಕುಂದುವಾಡ, ಹೊಸ ಕುಂದುವಾಡ, ಆವರಗೆರೆ, ಕರೂರು ಸೇರಿದಂತೆ ಹಲವು ಪ್ರದೇಶಗಳಲ್ಲಿ ಸ್ವಚ್ಛತೆ, ಮೂಲಭೂತ ಸೌಕರ್ಯ ಮತ್ತು ಅಭಿವೃದ್ಧಿ ವಿಷಯಗಳಲ್ಲಿ ಪಾಲಿಕೆ ನಿರ್ಲಕ್ಷ್ಯ ವಹಿಸಿದೆ ಎಂದು ಸ್ಥಳೀಯ ಮಧುನಾಗರಾಜ್ ಕುಂದುವಾಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಕೇರಳಕ್ಕೆ ಯೂರಿಯಾ ಗೊಬ್ಬರ ಅಕ್ರಮ ಸಾಗಣೆ: ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ ಲಾರಿ ವಶ

**ಮೈಸೂರು:** ರಾಜ್ಯದ ರೈತರು ರಸಗೊಬ್ಬರ ಕೊರತೆ ಅನುಭವಿಸುತ್ತಿದ್ದಾರೆ, ಇದೇ ವೇಳೆ ಅಕ್ರಮವಾಗಿ ನೆರೆಯ ಕೇರಳಕ್ಕೆ ಯೂರಿಯಾ ರಸಗೊಬ್ಬರ ಸಾಗಣೆ ಮಾಡುತ್ತಿದ್ದ ಲಾರಿಯನ್ನು ಕೃಷಿ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ವಶಕ್ಕೆ ಪಡೆದಿರುವ ಘಟನೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೂಲೆಹೊಳೆ ಚೆಕ್ ಪೋಸ್ಟ್ ನಲ್ಲಿ ನಡೆದಿದೆ.

ನಂಜಗೂಡಿನ ಗೋಧಾಮಿನಿಂದ ಯೂರಿಯಾ ರಸಗೊಬ್ಬರ ತುಂಬಿಕೊಂಡು ಕೇರಳಕ್ಕೆ ಅಕ್ರಮವಾಗಿ ಸಾಗಣೆ ಮಾಡುತ್ತಿರುವ ಕುರಿತು ಬಂದ ಖಚಿತ ಮಾಹಿತಿ ಮೇರೆಗೆ ಕೃಷಿ ಇಲಾಖೆ ಅಧಿಕಾರಿಗಳು ಪೊಲೀಸರ ಸಹಕಾರದೊಂದಿಗೆ ದಾಳಿ ನಡೆಸಿ ಮೂಲೆಹೊಳೆ ಚೆಕ್ ಪೋಸ್ಟ್ ಬಳಿ ಕೇರಳ ನೋಂದಣಿಯ ಕೆ.ಎಲ್–73, ಡಿ–1699 ಲಾರಿಯನ್ನು ತಡೆದು ಪರಿಶೀಲನೆ ನಡೆಸಿದ ವೇಳೆ ಅಕ್ರಮ ಬೆಳಕಿಗೆ ಬಂದಿದೆ.

ಚೆಕ್‌ಪೋಸ್ಟ್ ಬಳಿ ಕೇರಳ ನೋಂದಣಿಯಾದ ಟ್ರಕ್ ಅನ್ನು ಅಧಿಕಾರಿಗಳು ತಡೆದಿದ್ದಾರೆ. ಪರಿಶೀಲನೆಯ ಸಮಯದಲ್ಲಿ, ಸುಮಾರು 300 ಚೀಲಗಳಷ್ಟು ಯೂರಿಯಾ ಗೊಬ್ಬರವನ್ನು, ಕೆಲವು ಟನ್‌ಗಳಷ್ಟು, ಸರಿಯಾದ ಅನುಮತಿಯಿಲ್ಲದೆ ಸಾಗಿಸಲಾಗುತ್ತಿರುವುದು ಕಂಡುಬಂದಿದೆ.

ಲಾರಿಯಲ್ಲಿ ಸುಮಾರು 15 ಟನ್‌ನಷ್ಟು 300 ರಿಂದ 330 ಚೀಲ ಯೂರಿಯಾ ಇದ್ದು, ಸಾಗಣೆದಾರರ ವಿರುದ್ಧ ಕೇಸು ದಾಖಲಿಸಿ ಮುಂದಿನ ಕ್ರಮ ಕೈಗೊಳ್ಳುವಂತೆ ಯೂ–ರಿಯಾ ತುಂಬಿದ ಲಾರಿಯನ್ನು ಪೊಲೀಸರ ವಶಕ್ಕೆ ನೀಡಲಾಗಿದೆ ಎಂದು ಕೃಷಿ ಅಧಿಕಾರಿ ಕಿರಣ್ ಕುಮಾರ್ ಮಾಹಿತಿ ನೀಡಿದ್ದಾರೆ.

ಈ ಸಂಬಂಧ ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾದ ಶಶಿಧರ್ ಪ್ರತಿಕ್ರಿಯೆ ನೀಡಿ, ತಾಲೂಕಿನಲ್ಲಿ ಭತ್ತ ಇತರೆ ನೀರಾವರಿ ಬೆಳೆಗಳ ಪ್ರಮಾಣ ಕಡಿಮೆ ಇರುವ ಹಿನ್ನೆಲೆಯಲ್ಲಿ ರೈತರಿಗೆ ಯೂರಿಯಾ ಕೊರತೆ ಇಲ್ಲ. ಆದರೆ ಯೂರಿಯಾ ಅಂತರಾಜ್ಯ ಸಾಗಣೆಗೆ ಅವಕಾಶವಿಲ್ಲದಿದ್ದರೂ ಅಕ್ರಮವಾಗಿ ಸಾಗಿಸುತ್ತಿದ್ದ ಹಿನ್ನೆಲೆಯಲ್ಲಿ ದಾಳಿ ನಡೆಸಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದರು.

ದಾಳಿಯಲ್ಲಿ ಕೃಷಿ ನಿರ್ದೇಶಕ ಶಶಿಧರ್, ಸಹಾಯಕ ಕೃಷಿ ನಿರ್ದೇಶಕ ಜಾರಿದಳ ರಮೇಶ್, ಕೃಷಿ ಅಧಿಕಾರಿ ಕಿರಣ್ ಕುಮಾರ್, ಸಿಬ್ಬಂದಿ ಕುಮಾರ್, ಸ್ವಾಮಿ, ಗಣೇಶ್, ಶರಣ್ ಸೇರಿದಂತೆ ಪೊಲೀಸ್ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ಬೆಂಗಳೂರಿನ ಸುತ್ತಮುತ್ತಲ ಪ್ರದೇಶಗಳ ಸಮಗ್ರ ಅಭಿವೃದ್ಧಿ : ಸಿಎಂ ಸಿದ್ದರಾಮಯ್ಯ




**ಬೆಂಗಳೂರು :** ಮುಂದಿನ ನಾಲ್ಕು ವರ್ಷಗಳ ಒಳಗಾಗಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಬರ್‌ಬನ್ ರೈಲು ಸಂಪರ್ಕ ಕಲ್ಪಿಸುವ ಮೂಲಕ ನಗರದ ಕೇಂದ್ರ ಭಾಗದಂತೆಯೇ ಇತರ ಪ್ರದೇಶಗಳನ್ನು ಸಮಗ್ರ ಅಭಿವೃದ್ಧಿಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ದೇವನಹಳ್ಳಿಯಲ್ಲಿ ಲ್ಯಾಬ್ಸ್ ಇಂಡಿಯಾದ 41 ಎಕರೆ ವಿಸ್ತೀರ್ಣದ ಹೊಸ ಇನ್ನೋವೇಶನ್ ಪಾರ್ಕ್ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರಿನ ಸಮತೋಲಿತ ಅಭಿವೃದ್ಧಿಗೆ ಹಾಗೂ ಹೊರ ವಲಯಗಳನ್ನು ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.

ವಿಮಾನನಿಲ್ದಾಣಕ್ಕೆ ಮೆಟ್ರೋ ರೈಲು ಸಂಪರ್ಕವನ್ನು ತ್ವರಿತಗತಿಯಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, 2029ರ ವೇಳೆಗೆ ಸಬರ್‌ಬನ್ ರೈಲು ಸಂಪರ್ಕವನ್ನು ಒದಗಿಸಲಾಗುತ್ತಿದೆ ಎಂದಿದ್ದಾರೆ.

ರಾಜ್ಯ ಸರ್ಕಾರದ ಕ್ರಮಗಳು ಕೇವಲ ಬೆಂಗಳೂರಿಗೆ ಸೀಮಿತವಾಗಿವೆ. ರಾಜ್ಯಾದ್ಯಂತ ಜಿಲ್ಲಾ ಕೇಂದ್ರಗಳಲ್ಲೂ ಜಾಗತಿಕ ತಂತ್ರಜ್ಞಾನ ಕೇಂದ್ರಗಳು ಹಾಗೂ ಸಂಶೋಧನಾತಕ ಸಂಸ್ಥೆಗಳ ಅಭಿವೃದ್ಧಿಗೆ ಪೂರ್ವಕವಾಗಿವೆ?. ವಿಶ್ವ ಬ್ಯಾಂಕಿನ 2500 ಕೋಟಿ ರೂ.ಗಳ ಬೆಂಬಲದೊಂದಿಗೆ ಪ್ರಥಮ ದರ್ಜೆ ಕಾಲೇಜುಗಳ ಬಲವರ್ಧನೆ, ಶ್ರೇಷ್ಠತಾ ಕೇಂದ್ರಗಳ ಅಭಿವೃದ್ಧಿ, ಸಂಶೋಧನೆ ಮತ್ತು ಅಭಿವೃದ್ಧಿ ಸಾಮರ್ಥ್ಯ ವೃದ್ಧಿ ಹಾಗೂ ಕೌಶಲ್ಯ ಸುಧಾರಣೆಗೆ ಆದ್ಯತೆ ನೀಡಲಾಗಿದೆ. ಭವಿಷ್ಯದಲ್ಲಿ ಆಧುನಿಕ ತಂತ್ರಜ್ಞಾನದೊಂದಿಗೆ ಕೈಜೋಡಿಸಿ ಕೆಲಸ ಮಾಡುವ ಮಾನವ ಸಂಪನೂಲಗಳನ್ನು ಅಭಿವೃದ್ಧಿ ಪಡಿಸಲಾಗುವುದು ಎಂದಿದ್ದಾರೆ.

ಭಾರತದ ಸಿಲಿಕಾನ್ ವ್ಯಾಲಿ ಎಂದು ಕರೆಯಲ್ಪಡುವ ಬೆಂಗಳೂರು ನಗರ ಎಂಬುಂದಕ್ಕಿಂತ ಹೆಚ್ಚಿನದಾಗಿದೆ. ಇದು ಒಂದು ಕಲ್ಪನೆ. ಪರಿಸರ ವ್ಯವಸ್ಥೆ, ನಾವೀನ್ಯತೆಯ ಚೈತನ್ಯ, ಯುವ ತಂತ್ರಜ್ಞರ ಕನಸುಗಳು, ಜಾಗತಿಕ ಉದ್ಯಮಗಳ ದೂರದೃಷ್ಟಿ, ಸಾರ್ವಜನಿಕ ನೀತಿಯ ಸ್ಥಿತಿಸ್ಥಾಪಕತ್ವ ಹಾಗೂ ಭವಿಷ್ಯದ ನಿರ್ಮಾಣ ಒಟ್ಟಿಗೆ ಸೇರುವ ಸಂಗಮವಾಗಿದೆ ಎಂದಿದ್ದಾರೆ.

ಬೆಂಗಳೂರು ಸಾಫ್ಟ್‌ವೇರ್ ಮಾತ್ರವಲ್ಲದೆ ಕ್ವಾಂಟಮ್ ಕಂಪ್ಯೂಟಿಂಗ್, ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆಯಂತಹ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿದೆ. ಕರ್ನಾಟಕದ ಸಾಮರ್ಥ್ಯ, ವಿಶ್ವಾಸಾರ್ಹತೆ ಮತ್ತು ಶ್ರೇಷ್ಠತೆಯ ಬದ್ಧತೆಯಲ್ಲಿ ಜಾಗತಿಕ ಉದ್ಯಮದ ಆಳವಾದ ನಂಬಿಕೆ ಪ್ರತಿನಿಧಿಸುತ್ತದೆ ಎಂದಿದ್ದಾರೆ.

ಭಾರತದ ಆರ್ಥಿಕತೆಗೆ ಕರ್ನಾಟಕ ಶೇ.8ಕ್ಕಿಂತ ಹೆಚ್ಚು ಕೊಡುಗೆ ನೀಡುತ್ತಿದೆ ಮತ್ತು ರಫ್ತಿನಲ್ಲಿ ಶೇ.35 ಪಾಲನ್ನು ಹೊಂದಿದೆ. 18 ಸಾವಿರಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳು, ಶೇ. 40 ಯೂನಿಕಾರ್ನ್‌ಗಳಿಗೆ ಇಲ್ಲಿ ನೆಲೆಯಾಗಿವೆ ಎಂದು ಹೇಳಿದರು. ಶುದ್ಧ ಇಂಧನ, ಸುಸ್ಥಿರ ಚಲನಶೀಲತೆ ಮತ್ತು ಪರಿಸರ ಪ್ರಜ್ಞೆಯ ಬೆಳವಣಿಗೆಯಲ್ಲಿ ಮುನ್ನಡೆಯುತ್ತಿದ್ದೇವೆ. ಹೂಡಿಕೆಗಳು ಆರ್ಥಿಕ ಪ್ರಗತಿ ಮತ್ತು ಪರಿಸರ ಜವಾಬ್ದಾರಿಗೆ ಬೆಂಬಲವಾಗಿವೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

## ಕಾಲ್ ಗರ್ಲ್ ಆಮಿಷಕ್ಕೆ ಲಕ್ಷ ಲಕ್ಷ ಕಳೆದುಕೊಂಡ ಟೆಕ್ಕಿಗಳು

**ಬೆಂಗಳೂರು,ಆ.6–** ಐಟಿ ಸಿಟಿ ಬೆಂಗಳೂರಿನ ಇಬ್ಬರು ಸಾಫ್ಟ್‌ವೇರ್ ಇಂಜಿನಿಯರ್ ಗಳು ಸೈಬರ್ ಖದೀಮರಿಂದ ಲಕ್ಷಾಂತರ ರೂಗಳ ವಂಚನೆಗೊಳಗಾಗಿದ್ದಾರೆ,ಓರ್ವ ಕಾಲ್ ಗರ್ಲ್ ಸೇವೆಯ ಆಮಿಷಕ್ಕೆ 1.49 ಲಕ್ಷ ಕಳೆದುಕೊಂಡರೆ, ಇನ್ನೊಬ್ಬರು ಮ್ಯಾಟ್ರಿಮೋನಿಯಲ್ ಸೈಟ್‌ನಲ್ಲಿ ವಧುವಿನಂತೆ ಬಿಂಬಿಸಿದ ವಂಚಕರಿಗೆ 55.64 ಲಕ್ಷ ರೂ ಹಣವನ್ನು ಕಳೆದುಕೊಂಡಿದ್ದಾರೆ

ಇವೆರಡೂ ಪ್ರಕರಣಗಳನ್ನು ಹೈಗೌಂಡ್ಸ್ ಪೊಲೀಸರು ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

24 ವರ್ಷದ ಸಾಫ್ಟ್‌ವೇರ್ ಎಂಜಿನಿಯರ್, ಕಾಲ್ ಗರ್ಲ್ ಸೇವೆ ಬೇಕೆಂದು ಮೆಸೇಜಿಂಗ್ ಆ?ಯಪ್ ಟೆಲಿಗ್ರಾಮ್‌ನಲ್ಲಿ ಬಂದಿದ್ದ ಲಿಂಕ್ ಕ್ಲಿಕ್ ಮಾಡಿದಾಗ ಇಶಾನಿ ರೆಡ್ಡಿ ಎಂಬುವವರ ಪರಿಚಯವಾಗಿತ್ತು. ಆಕೆ ಕಾಲ್ ಗರ್ಲ್ ಮತ್ತು ಸ್ಪಾ ಸೇವೆಗಳನ್ನು ಒದಗಿಸುವುದಾಗಿ ಹೇಳಿದ್ದಳು. ಮೊದಲು 299 ರೂ. ಪಾವತಿಗೆ ಸೂಚಿಸಿದ್ದ ಆಕೆ, ನಂತರ ವಿವಿಧ ಸೇವಾ ಶುಲ್ಕಗಳ ಹೆಸರಿನಲ್ಲಿ ಹೆಚ್ಚಿನ ಹಣವನ್ನು ಪೀಕಿದ್ದಳು.

## ಪರಿಸರ ಮಂಡಳಿಗಳು ದಂಡ ವಿಧಿಸಬಹುದು : ಸುಪ್ರೀಂ ಕೋರ್ಟ್

**ನವದೆಹಲಿ :** ಪರಿಸರ ಹಾನಿಗಾಗಿ ದಂಡ ವಿಧಿಸುವ ಅಧಿಕಾರ ಮಾಲಿನ್ಯ ನಿಯಂತ್ರಣ ಮಂಡಳಿಗಳಿಗೆ ಇದೆ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಪರಿಸರ ಮಾಲಿನ್ಯ ತಡೆ ಮತ್ತು ಪರಿಹಾರಗಳು ಪರಿಸರ ಆಡಳಿತದ ಮುಖ್ಯ ಭಾಗವಾಗಿವೆ ಎಂದು ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಮನೋಜ್ ಮಿಶ್ರಾ ಅವರನ್ನು ಒಳಗೊಂಡ ಪೀಠ ತಿಳಿಸಿದೆ.

ಜಲ ಕಾಯ್ದೆ ಮತ್ತು ವಾಯು ಕಾಯ್ದೆಯ ಅನ್ವಯ, ಮಾಲಿನ್ಯ ನಿಯಂತ್ರಣ ಮಂಡಳಿಗಳು ವಾಸ್ತವಿಕವಾಗಿ ಆಗಿರುವ ಮತ್ತು ಸಂಭವನೀಯ ಪರಿಸರ ಹಾನಿಗೆ ದಂಡ ವಿಧಿಸುವ ಸಂವಿಧಾನಿಕ ಅಧಿಕಾರ ಹೊಂದಿವೆ ಎಂದು ಪೀಠ ಹೇಳಿದೆ.

ಪರಿಸರ ಮಾಲಿನ್ಯ ನಿವಾರಣೆ ಮತ್ತು ತಡೆಯ ಉದ್ದೇಶದಿಂದ, ಹಣದ ರೂಪದಲ್ಲಿ ಅಥವಾ ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ದಂಡ ವಿಧಿಸಲು ಅವಕಾಶವಿದೆ ಎಂದು ಪೀಠದ ಪರವಾಗಿ ತೀರ್ಪು ಬರೆದಿರುವ ನ್ಯಾಯಮೂರ್ತಿ ನರಸಿಂಹ ಹೇಳಿದ್ದಾರೆ. ಆದರೆ, ಈ ದಂಡಗಳು ಅಪರಾಧಿಕ ದಂಡಗಳಿಗಿಂತ ಭಿನ್ನವಾಗಿರುತ್ತವೆ. ಇವು ಸಿವಿಲ್ ಸ್ವರೂಪದವು ಮತ್ತು ಪರಿಸರ ಮಾಲಿನ್ಯ ತಡೆಯುವ ಉದ್ದೇಶ ಹೊಂದಿವೆ. ಉಲ್ಲಂಘಿಸಿದವರಿಗೆ ಶಿಕ್ಷೆ ವಿಧಿಸುವ ಸ್ವರೂಪದವು ಅಲ್ಲ ಎಂದು ಪೀಠ ಸ್ಪಷ್ಟಪಡಿಸಿದೆ.

ಪರಿಸರ ಹಾನಿ ತಡೆಯಲು ದಂಡ ವಿಧಿಸುವ ಮಾಲಿನ್ಯ ನಿಯಂತ್ರಣ ಮಂಡಳಿಗಳ ಅಧಿಕಾರವನ್ನು ಕಡಿತಗೊಳಿಸಿ 2012ರಲ್ಲಿ ದೆಹಲಿ ಹೈಕೋರ್ಟ್ ತೀರ್ಪು ನೀಡಿತ್ತು. ಈ ತೀರ್ಪನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ದಾಖಲಿಸಲಾಗಿತ್ತು.

## ಮತದಾರರ ಪಟ್ಟಿ ತಿರುಚುದ್ದ 4 ಪಶ್ಚಿಮ ಬಂಗಾಳ ಚುನಾವಣಾ ಅಧಿಕಾರಿಗಳು ಅಮಾನತು: ತನಿಖೆಗೆ ಆದೇಶ

**ನವದೆಹಲಿ:** ಮತದಾರರ ಪಟ್ಟಿಯಲ್ಲಿ ತಪ್ಪು ಹೆಸರುಗಳನ್ನು ಸೇರಿಸಿದ್ದಕ್ಕಾಗಿ ಮತ್ತು ದತ್ತಾಂಶ ಸುರಕ್ಷತೆಯಲ್ಲಿ ರಾಜಿ ಮಾಡಿಕೊಂಡಿದ್ದಕ್ಕಾಗಿ ಭಾರತೀಯ ಚುನಾವಣಾ ಆಯೋಗ ಮಂಗಳವಾರ ಪಶ್ಚಿಮ ಬಂಗಾಳದ ನಾಲ್ವರು ಸರ್ಕಾರಿ ಅಧಿಕಾರಿಗಳನ್ನು ಅಮಾನತುಗೊಳಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚುನಾವಣಾ ಕಾನೂನುಗಳ ನಿಬಂಧನೆಗಳ ಅಡಿಯಲ್ಲಿ ನಾಲ್ವರು ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಚುನಾವಣಾ ಸಮಿತಿಯು ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿಯನ್ನು ಕೇಳಿದೆ.ಬರುಯಿಪುರ್ ಪೂರ್ಬಾ ಮತ್ತು ಮೊಯ್ನಾ ಕ್ಷೇತ್ರಗಳ ಮತದಾರರ ಪಟ್ಟಿಯಲ್ಲಿ ಅನಧಿಕೃತ ಸೇರ್ಪಡೆಗಳನ್ನು ಬಹಿರಂಗಪಡಿಸಿದ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ) ವರದಿಯ ನಂತರ ಭಾರತದ ಚುನಾವಣಾ ಆಯೋಗ (ಇಸಿಐ) ನಾಲ್ವರು ಪಶ್ಚಿಮ ಬಂಗಾಳದ ಚುನಾವಣಾ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಪ್ರಾರಂಭಿಸಿದೆ. ಮುಖ್ಯ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ – ಈ ಪತ್ರಿಕೆಗೆ ಪಡೆದ ಪ್ರತಿ – ಚುನಾವಣಾ ನೋಂದಣಿ ಅಧಿಕಾರಿಗಳು (ಇಆರ್‌ಒಗಳು)




ಮತ್ತು ಸಹಾಯಕ ಇಆರ್‌ಒಗಳು ಮಾಡಿದ ಅಕ್ರಮಗಳ ಬಗ್ಗೆ ಸಿಇಒ ಅವರ ಸಂಶೋಧನೆಗಳನ್ನು ಇಸಿಐ ಉಲ್ಲೇಖಿಸಿದೆ.

ಅಧಿಕಾರಿಗಳು– ದೇಬೋಟಮ್ ದತ್ತ ಚೌಧರಿ (ಇಆರ್‌ಒ), ತಥಾಗತ ಮೊಂಡಲ್ (ಎಇಆರ್‌ಒ), ಬಿಪ್ಲಬ್ ಸರ್ಕಾರ್ (ಇಆರ್‌ಒ), ಮತ್ತು ಸುದೀಪ್ತಾ ದಾಸ್ (ಎಇಆರ್‌ಒ) ಮತದಾರರ ಪಟ್ಟಿಗಳನ್ನು ಸಿದ್ಧಪಡಿಸುವ, ಪರಿಷ್ಕರಿಸುವ ಮತ್ತು ಸರಿಪಡಿಸುವ ಜವಾಬ್ದಾರಿಯನ್ನು ಹೊಂದಿದ್ದರು. ಅವರ ವಿರುದ್ಧ "ಸೂಕ್ತ ಶಿಸ್ತು ಕ್ರಮ" ಕೈಗೊಳ್ಳುವಂತೆ ಮತ್ತು "ಕ್ರಿಮಿನಲ್ ದುರ್ನಡತೆ"ಗೆ ಸಮಾನವಾದ ಕ್ರಮಗಳಿಗಾಗಿ ಎಫ್‌ಐಆರ್‌ಗಳನ್ನು ದಾಖಲಿಸುವಂತೆ ಇಸಿಐ ನಿರ್ದೇಶಿಸಿದೆ. ಸಾಂದರ್ಭಿಕ ಡೇಟಾ ಎಂಟ್ರಿ ಆಪರೇಟರ್ ಸುರೋಜಿತ್ ಹಾಲ್ದರ್ ವಿರುದ್ಧವೂ ಎಫ್‌ಐಆರ್ ದಾಖಲಿಸಲು ಶಿಫಾರಸು ಮಾಡಲಾಗಿದೆ.

ಪಶ್ಚಿಮ ಬಂಗಾಳ ಚುನಾವಣಾ ಆಯೋಗ ಮತದಾರರ ಅರ್ಜಿ ನಮೂನೆಗಳ (ಫಾರ್ಮ್ 6) ಮಾದರಿ ಪರಿಶೀಲನೆಯ ಸಮಯದಲ್ಲಿ ಈ ವ್ಯತ್ಯಾಸಗಳು ಬೆಳಕಿಗೆ ಬಂದಿದೆ. ಅಧಿಕಾರಿಗಳು ಸೂಕ್ತ ಕಾರ್ಯವಿಧಾನವನ್ನು ಉಲ್ಲಂಘಿಸಿರುವುದನ್ನು ಇಸಿಐ ಗಮನಿಸಿದೆ, ಇದು 1950 ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 32(1) ರ ಅಡಿಯಲ್ಲಿ ದಂಡ ವಿಧಿಸಲು ಕಾರಣವಾಗಿದೆ. ಸಿಇಒ ಅವರ ಆದೇಶಗಳನ್ನು ಅನುಸರಿಸಿ, ಜಿಲ್ಲಾ ಚುನಾವಣಾ ಅಧಿಕಾರಿ (ಡಿಇಒ) ಕಳೆದ ವರ್ಷದಲ್ಲಿ ಪ್ರಕ್ರಿಯೆಗೊಳಿಸಲಾದ ಎಲ್ಲಾ ಮತದಾರರ ನಮೂನೆಗಳನ್ನು ಪರಿಶೀಲಿಸಿ ಆಗಸ್ಟ್ 14, 2025 ರೊಳಗೆ ವರದಿಯನ್ನು ಸಲ್ಲಿಸಲು ಹಿರಿಯ ಅಧಿಕಾರಿಗಳ ತಂಡವನ್ನು ರಚಿಸಬೇಕು.

ಕಟ್ಟುನಿಟ್ಟಾದ ಅನುಸರಣೆಯನ್ನು ಖಚಿತಪಡಿಸಿಕೊಳ್ಳಲು ಮತ್ತು "ಸಾಧ್ಯವಾದಷ್ಟು ಬೇಗ" ಕ್ರಮ ಕೈಗೊಂಡ ವರದಿಯನ್ನು ಸಲ್ಲಿಸಲು ಇಸಿಐ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದೆ. ರಾಜ್ಯದ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಗಾಗಿ ಇಸಿಐ ಒತ್ತಾಯಿಸುವುದಕ್ಕೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರೋಧ ವ್ಯಕ್ತಪಡಿಸಿದ ನಡುವೆ ಈ ಕ್ರಮ ಕೈಗೊಳ್ಳಲಾಗಿದೆ.

## ಭಾರತದಂತಹ ಬಲಿಷ್ಠ ಮಿತ್ರರಾಷ್ಟ್ರದೊಂದಿಗೆ ಸಂಬಂಧ ಮುರಿಯಬೇಡಿ: ಟ್ರಂಪ್ ಹುಚ್ಚಾಟಕ್ಕೆ ಸ್ವಪಕ್ಷೀಯರಿಂದಲೇ ಟೀಕೆ, ಖಂಡನೆ

ಭಾರತೀಯ ಸರಕುಗಳ ಮೇಲಿನ ಸುಂಕವನ್ನು ತೀವ್ರವಾಗಿ ಹೆಚ್ಚಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಬೆದರಿಕೆಯನ್ನು ರಿಪಬ್ಲಿಕನ್ ನಾಯಕಿ ನಿಕ್ಕಿ ಹ್ಯಾಲಿ ಟೀಕಿಸಿದ್ದಾರೆ.

ಡೊನಾಲ್ಡ್ ಟ್ರಂಪ್ ಕ್ರಮದಿಂದಾಗಿ ಪ್ರಮುಖ ಕಾರ್ಯತಂತ್ರದ ಪಾಲುದಾರಿಕೆಗೆ ಹಾನಿ ಮಾಡುವ ಅಪಾಯವಿದೆ ಎಂದು ಎಚ್ಚರಿಸಿದ್ದಾರೆ.

ಮಾಜಿ ವಿಶ್ವಸಂಸ್ಥೆಯ ರಾಯಭಾರಿ ಚೀನಾಕ್ಕೆ ಸುಂಕ ವಿನಾಯಿತಿ ನೀಡುವಾಗ ಭಾರತವನ್ನು ದೂರವಿಡದಂತೆ ಶ್ವೇತಭವನವನ್ನು ಒತ್ತಾಯಿಸಿದ್ದಾರೆ. ಚೀನಾವನ್ನು ಅವರು ಶತ್ರು ಮತ್ತು ರಷ್ಯಾ ಮತ್ತು ಇರಾನಿನ ತೈಲದ ಪ್ರಮುಖ



ಖರೀದಿದಾರ ಎಂದು ಹೇಳಿದ್ದಾರೆ.

ಭಾರತದ ಬಗ್ಗೆ ಡೊನಾಲ್ಡ್ ಟ್ರಂಪ್ ನಿಲುವು ತೀವ್ರಗೊಳ್ಳುತ್ತಿರುವುದನ್ನು ಕಠಿಣವಾಗಿ ಟೀಕಿಸಿರುವ ನಿಕ್ಕಿ ಹ್ಯಾಲಿ "ಭಾರತ ರಷ್ಯಾದಿಂದ ತೈಲವನ್ನು ಖರೀದಿಸಬಾರದು. ಆದರೆ ರಷ್ಯಾ ಮತ್ತು ಇರಾನಿನ ತೈಲದ ಪ್ರಮುಖ ಖರೀದಿದಾರ ಮತ್ತು ಎದುರಾಳಿ ಚೀನಾಕ್ಕೆ 90 ದಿನಗಳ ಸುಂಕ ವಿರಾಮ ಸಿಕ್ಕಿತು". ಎಂದು ಎಕ್ಸ್ ಪೋಸ್ಟ್ ಹಾಕಿದ್ದಾರೆ.

ಚೀನಾವನ್ನು ದ್ವೇಷಿಸುವ ಮತ್ತು ಭಾರತದ ಕಾರ್ಯತಂತ್ರದ ಏರಿಕೆಯನ್ನು ಬೆಂಬಲಿಸುವ ನಿಕ್ಕಿ ಹ್ಯಾಲಿ, "ಚೀನಾಕ್ಕೆ ಅವಕಾಶ ನೀಡಬೇಡಿ ಮತ್ತು ಭಾರತದಂತಹ ಬಲವಾದ ಮಿತ್ರರಾಷ್ಟ್ರದೊಂದಿಗೆ ಸಂಬಂಧವನ್ನು ಮುರಿಯಬೇಡಿ" ಎಂದು ಟ್ರಂಪ್ ಗೆ ಸಲಹೆ ನೀಡಿ–ದ್ದಾರೆ.24 ಗಂಟೆಗಳ ಒಳಗೆ ಭಾರತೀಯ ಸರಕುಗಳ ಮೇಲಿನ ಸುಂಕವನ್ನು "ಗಣನೀಯವಾಗಿ" ಹೆಚ್ಚಿಸಲು ಉದ್ದೇಶಿಸಿದ್ದೇನೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ ನಂತರ ನಿಕ್ಕಿ ಹ್ಯಾಲಿ ಅವರಿಂದ ಹೇಳಿಕೆಗಳು ಬಂದಿವೆ.

ಭಾರತ ರಷ್ಯಾದ ತೈಲವನ್ನು ನಿರಂತರವಾಗಿ ಖರೀದಿಸುವುದನ್ನು ಉಲ್ಲೇಖಿಸಿ. ನವದೆಹಲಿ "ನಮ್ಮೊಂದಿಗೆ ಬಹಳಷ್ಟು ವ್ಯವಹಾರ" ಮಾಡುತ್ತಿದ್ದರೆ, ಅಮೆರಿಕ "ಭಾರತದೊಂದಿಗೆ ಕಡಿಮೆ ವ್ಯವಹಾರ" ಮಾಡುತ್ತಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಇದಕ್ಕೂ ಮೊದಲು, ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧದ ಹೊರತಾಗಿಯೂ, ಭಾರತವು "ಬೃಹತ್ ಪ್ರಮಾಣದ ರಷ್ಯಾದ ತೈಲ"ವನ್ನು ಖರೀದಿಸಿ ಮುಕ್ತ ಮಾರುಕಟ್ಟೆಯಲ್ಲಿ ಲಾಭಕ್ಕಾಗಿ ಮರುಮಾರಾಟ ಮಾಡುತ್ತಿದೆ ಎಂದು ಅಮೆರಿಕ ಅಧ್ಯಕ್ಷರು ಆರೋಪಿಸಿದ್ದರು.

## ವಿದ್ಯುತ್ ಸಂಪರ್ಕಕ್ಕೆ ಹಣದ ಬೇಡಿಕೆ : ದೂರು ನೀಡಲು ಸೂಚನೆ

**ಚಿತ್ರದುರ್ಗ :** ಚಿತ್ರದುರ್ಗ, ಹೊಳಲ್ಕೆರೆ, ಹೊಸದುರ್ಗ ತಾಲ್ಲೂಕು ಭಾಗದ ರೈತರು ತಮ್ಮ ಕೃಷಿ ಪಂಪಸೆಟ್ ಸಕ್ರಮಗೊಳಿಸಲು ಶುಲ್ಕ ಪಾವತಿಸಿದ್ದಾರೆ.

ಸರ್ಕಾರದಿಂದ ವಿದ್ಯುತ್ ಪರಿವರ್ತಕ ಮತ್ತು ಎಲ್.ಟಿ.ಮಾರ್ಗಗಳನ್ನು ನಿರ್ಮಿಸಿ ಮೂಲಭೂತ ಸೌಕರ್ಯ ಕಲ್ಪಿಸಿ, ಪಂಪಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲು ಟೆಂಡರ್ ಕರೆದು ಏಜೆನ್ಸಿ ನೇಮಿಸಲಾಗಿದೆ. ಆದರೆ ಬೆಸ್ಕಾಂ ಕೆಲ ಶಾಖಾಧಿಕಾರಿ, ಲೈನ್‌ಮನ್ ಹಾಗೂ ಅಧಿಕಾರಿಗಳು ವಿದ್ಯುತ್ ಸಂಪರ್ಕ ನೀಡಲು ಹಣದ ಬೇಡಿಕೆ ಇಡುತ್ತಿದ್ದಾರೆ ಎಂಬ ದೂರುಗಳು ಕೇಳಿ ಬಂದಿವೆ. ಯಾವುದೇ ಕಾರಣಕ್ಕೂ ರೈತರು ಹಣ ನೀಡಬಾರದು. ಒಂದು ವೇಳೆ ವಿದ್ಯುತ್ ಸಂಪರ್ಕ ಕಲ್ಪಿಸಲು ವಿಳಂಬ ಮಾಡಿ ಹಣಕ್ಕೆ ಬೇಡಿಕೆ ಇಟ್ಟರೆ, ಈ ಬಗ್ಗೆ ಮೊಬೈಲ್‌ನಲ್ಲಿ ಧ್ವನಿ ಅಥವಾ ವೀಡಿಯೋ ರೆಕಾರ್ಡಿಂಗ್ ಮಾಡಿ, ಚಿತ್ರದುರ್ಗ ವಲಯದ ಮುಖ್ಯ ಇಂಜಿನಿಯರ್ ಕಚೇರಿಗೆ ನೀಡುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

## ಪತ್ನಿಯೇ ನದಿಗೆ ತಳ್ಳಿದ್ದಾಳೆಂದು ಆರೋಪಿಸಿದ್ದ ಪತಿ ವಿರುದ್ಧ ಪೋಕ್ಸೋ ಕೇಸ್

**ಬೆಂಗಳೂರು:** ರಾಯಚೂರು ಜಿಲ್ಲೆಯ ಗುರ್ಜಾಪುರ ಬ್ಯಾರೇಜ್ ಬಳಿ ಫೋಟೋ ತೆಗೆಯುವ ನೆಪದಲ್ಲಿ ಪತ್ನಿಯೇ ತನ್ನನ್ನು ನದಿಗೆ ತಳ್ಳಿದ್ದಾಳೆಂದ ಆರೋಪಿಸಿದ್ದ ವ್ಯಕ್ತಿಗೆ ಜೈಲು ಪಾಲಾಗುವ ಭೀತಿ ಎದುರಾಗಿದೆ.

ಅಪ್ರಾಪ್ತೆಯನ್ನು ವಿವಾಹವಾಗಿದ್ದ ಹಿನ್ನೆಲೆ ಬಾಲ್ಯವಿವಾಹ ನಿಷೇಧ ಕಾಯಿದೆ ಅಡಿ ಪ್ರಕರಣದಲ್ಲಿ ಸಿಲುಕಿರುವ ವ್ಯಕ್ತಿ ವಿರುದ್ಧ ಲೈಂಗಿಕ ದೌರ್ಜನ್ಯ ಹಾಗೂ 10 ಮಂದಿ ವಿರುದ್ಧ ರಾಯಚೂರು ಮಹಿಳಾ ಪೊಲೀಸ್ ಠಾಣೆಯಲ್ಲಿ ಪೋ–ಕ್ಸೋ ಕಾಯಿದೆ ಅಡಿ ಪ್ರಕರಣ ದಾಖಲಾಗಿದೆ. ಇತ್ತೀಚೆಗೆ ರಾಯಚೂರು ತಾಲ್ಲೂಕಿನ ಗುರ್ಜಾಪುರ ಬ್ರಿಡ್ಜ್ ಕಂ ಬ್ಯಾರೇಜ್ ಮೇಲಿಂದ ಪತಿ ತಾತಪ್ಪನನ್ನ ತಳ್ಳಿ ಪತ್ನಿ ಕೊಲೆಗೆ ಯತ್ನಿಸಿದ್ದಳು ಎನ್ನುವ ಆರೋಪ ಯುವತಿ ವಿರುದ್ಧ ಕೇಳಿಬಂದಿತ್ತು. ತಾತಪ್ಪನ ಪತ್ನಿ ಅಪ್ರಾಪ್ತೆ ಎನ್ನುವ ವಿಷಯ ಸಂಚಲನಕ್ಕೆ ಕಾರಣವಾಗಿತ್ತು.ಈ ಬಗ್ಗೆ ಮಕ್ಕಳ ಹಕ್ಕುಗಳ ಆಯೋಗದ ಸೂಚನೆ ಮೇರೆಗೆ ರಾಯಚೂರಿನ ಮಹಿಳಾ ಠಾಣೆಯಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ 2006ರಡಿ ಮಾತ್ರ ಕೇಸ್ ದಾಖಲಾಗಿದೆ.

## ಉತ್ತರಾಖಂಡ: ವಿನಾಶಕಾರಿ ಮೇಘಸ್ಫೋಟದಿಂದ ನಾಲ್ವರ ಸಾವು 9 ಸೇನಾ ಸಿಬ್ಬಂದಿ ಸೇರಿದಂತೆ 59ಕ್ಕೂ ಹೆಚ್ಚು ಮಂದಿ ಕಣ್ಮರೆ!

**ಉತ್ತರಕಾಶಿ:** ಉತ್ತರಕಾಶಿ ಜಿಲ್ಲೆಯ ಧರಾಲಿ ಪ್ರದೇಶದಲ್ಲಿ ಮಂಗಳವಾರ ಮಧ್ಯಾಹ್ನ ಮೂರು ಗಂಟೆಗಳ ಅವಧಿಯಲ್ಲಿ ಮೂರು ಬಾರಿ ಮೇಘಸ್ಫೋಟವಾಗಿದ್ದು, ಭಾರಿ ಪ್ರವಾಹದಿಂದಾಗಿ ನಾಲ್ವರು ಸಾವನ್ನಪ್ಪಿದ್ದಾರೆ. ಒಂಬತ್ತು ಸೇನಾ ಸಿಬ್ಬಂದಿ ಸೇರಿದಂತೆ 59 ಕ್ಕೂ ಹೆಚ್ಚು ಮಂದಿ ಕಣ್ಮರೆಯಾಗಿದ್ದಾರೆ. ಭಾರತೀಯ ಸೇನೆ ಮತ್ತು ಪರಿಹಾರ ತಂಡಗಳಿಂದ ಬೃಹತ್ ಜಂಟಿ ರಕ್ಷಣಾ ಕಾರ್ಯಾಚರಣೆ ನಡೆಸಲಾಗಿದೆ.

ಸುದ್ದಿಗಾರರಯೊಂದಿಗೆ ಮಾತನಾಡಿದ ರಕ್ಷಣಾ ಲೆಫ್ಟಿನೆಂಟ್ ಕರ್ನಲ್ ಮನೀಶ್ ಶ್ರೀವಾಸ್ತವ, ಡೆಹ್ರಾಡೂನ್ ದುರಂತದ ಪ್ರಮಾಣ ಮತ್ತು ಸೇನೆಯ ತಕ್ಷಣದ ಕಾರ್ಯಾಚರಣೆಯನ್ನು ದೃಢಪಡಿಸಿದರು.

ಖೀರ್ ಗಡ್, ಧರಾಲಿಯಲ್ಲಿ ಸಂಭವಿಸಿದ



ವಿನಾಶಕಾರಿ ಮಣ್ಣಿನ ಕುಸಿತದ ಹಿನ್ನೆಲೆಯಲ್ಲಿ, 14 ಖಂಎಖಖಈ ನ ಕಮಾಂಡಿಂಗ್ ಆಫೀಸರ್ ಕರ್ನಲ್ ಹರ್ಷವರ್ಧನ್ ಅವರು ವೈಯಕ್ತಿಕವಾಗಿ 150 ಸಿಬ್ಬಂದಿಯನ್ನು ನಿರ್ಣಾಯಕ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳಲ್ಲಿ ಮುನ್ನಡೆಸುತ್ತಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಆರಂಭದಲ್ಲಿ ಕಣ್ಮರೆಯಾಗಿದ್ದ 11 ಸೇನಾ ಸಿಬ್ಬಂದಿಗಳಲ್ಲಿ ಇಬ್ಬರು ಸುರಕ್ಷಿತವಾಗಿದ್ದು, ಈಗ ಚೇತರಿಸಿಕೊಳ್ಳುತ್ತಿದ್ದಾರೆ. ಇದುವರೆಗೆ 20 ನಾಗರಿಕರನ್ನು ಸಹ ರಕ್ಷಿಸಲಾಗಿದೆ. ಭರದಿಂದ ರಕ್ಷಣಾ ಕಾರ್ಯಾಚರಣೆ ಸಾಗಿದೆ. ಪ್ರತಿಕೂಲ ಹವಾಮಾನ ಮತ್ತು ಸಂಪರ್ಕ ಕಡಿತದ ಸವಾಲಿನ ನಡುವೆ ಸೇನೆಯ ಬದ್ಧತೆಯನ್ನು ಅವರು ಶ್ಲಾಘಿಸಿದ್ದಾರೆ.

ಮೊದಲ ಮೇಘಸ್ಫೋಟದಿಂದ ಧಾರಾಲಿ ಗ್ರಾಮದ ಕಡೆಗೆ ಮಣ್ಣು, ಗುಡ್ಡ ಕುಸಿತ, ಕೆಸರು ನೀರು ಹರಿಯುವುದರೊಂದಿಗೆ ಭಾರಿ ಆತಂಕ ಸೃಷ್ಟಿಯಾಯಿತು. ಜನರು ಭಯದಿಂದ ಕಿರುಚಾಡಿದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದರು. ಹರ್ಸಿಲ್ ಸೇನಾ ಶಿಬಿರದ ಮುಂಭಾಗದಲ್ಲಿರುವ ಹರ್ಸಿಲ್‌ನಲ್ಲಿರುವ ಸೇನಾ ಘಟಕದ ಬಳಿ ಮಂಗಳವಾರ ಸಂಜೆ ಎರಡನೇ ಮೇಘಸ್ಫೋಟ ಸಂಭವಿಸಿದೆ.

ಸುಖಿ ಟಾಪ್‌ನಲ್ಲಿ ಮೂರನೇ ಮೇಘಸ್ಫೋಟ ಸಂಭವಿಸಿದೆ. ಇದರಿಂದಾಗಿ ಸೇನಾ ಶಿಬಿರದ ಬಳಿ ತಾತ್ಕಾಲಿಕ ಸರೋವರವನ್ನೆ ಸೃಷ್ಟಿಸಿತು. ಈ ಹೊಸ ಜಲಮೂಲವು ಭಾಗೀರಥಿ ನದಿಯ ಉದ್ದಕ್ಕೂ ಇರುವ ಪಟ್ಟಣಗಳಿಗೆ ಗಮನಾರ್ಹ ಅಪಾಯವನ್ನುಂಟುಮಾಡಿದೆ. ಸುಖಿ ಟಾಪ್ ಘಟನೆಯು ಹರ್ಸಿಲ್‌ಗೆ ಹೋಗುವ ರಸ್ತೆಯನ್ನು ಬಂದ್ ಮಾಡಿದೆ.

# ನಾಡಪ್ರಭು ಕೆಂಪೇಗೌಡ ಜಯಂತಿ ಅಂಗವಾಗಿ ತಾಲ್ಲೂಕು ಮಟ್ಟದಲ್ಲಿ ವಿವಿಧ ಸ್ಪರ್ಧೆಗಳು

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಕಸ್ತೂರಬಾ ಬಾಲಿಕಾ ಪದವಿಪೂರ್ವ ಕಾಲೇಜು(ಪ್ರೌಢಶಾಲಾ ವಿಭಾಗ) ಇವರ ಸಂಯುಕ್ತಾಶ್ರಯದಲ್ಲಿ ಆ.16 ರ ಬೆಳಿಗ್ಗೆ 10 ಗಂಟೆಗೆ ನಗರದ ಕಸ್ತೂರಬಾ ಬಾಲಿಕಾ ಪದವಿಪೂರ್ವ ಕಾಲೇಜು(ಪ್ರೌಢಶಾಲಾ ವಿಭಾಗ)ನಲ್ಲಿ ಪ್ರೌಢಶಾಲೆ, ಪದವಿಪೂರ್ವ ಕಾಲೇಜು ಮತ್ತು ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ತಾಲ್ಲೂಕು ಮಟ್ಟದ ರಸಪ್ರಶ್ನೆ, ಪ್ರಬಂಧ, ಕವನ ವಾಚನ ಮತ್ತು ಚಿತ್ರಕಲಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸುವರು. ಶಾಸಕರಾದ ಎಸ್.ಎನ್. ಚನ್ನಬಸಪ್ಪ ಅಧ್ಯಕ್ಷತೆ ವಹಿಸಲಿದ್ದು, ಭದ್ರಾವತಿ ಶಾಸಕರು ಹಾಗೂ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ.ಕೆ.ಸಂಗಮೇಶ್, ಸಾಗರ ಶಾಸಕರು ಹಾಗೂ ಕರ್ನಾಟಕ ಅರಣ್ಯ ಕೈಗಾರಿಕಾ ನಿಗಮ ನಿಯಮಿತ ಅಧ್ಯಕ್ಷರಾದ ಗೋಪಾಲಕೃಷ್ಣ ಬೇಳೂರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಮುಖ್ಯ ಅತಿಥಿಗಳಾಗಿ ಸಂಸದರು, ವಿಧಾನಸಭೆ ಮತ್ತು ವಿಧಾನ ಪರಿಷತ್ ಶಾಸಕರುಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರದ ಅಧ್ಯಕ್ಷರುಗಳು, ಜಿಲ್ಲಾ ಮತ್ತು ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷರು, ರಾಷ್ಟ್ರೀಯ ಶಿಕ್ಷಣ ಕಾರ್ಯದರ್ಶಿ, ತಹಸೀಲ್ದಾರ್, ಶಿವಮೊಗ್ಗ ತಾಲ್ಲೂಕು ಇಓ, ಕ್ಷೇತ್ರ ಶಿಕ್ಷಣಾಧಿಕಾರಿ, ಕ್ಷೇತ್ರ ಸಮನ್ವಯಧಿಕಾರಿ, ಕಸ್ತೂರಿ ಬಾಲಿಕ ಪದವಿಪೂರ್ವ ಕಾಲೇಜು ಹಾಗೂ ಪ್ರೌಢಶಾಲೆಯ ಪ್ರಾಂಶುಪಾಲರು, ಅಧಿಕಾರಿಗಳು, ತಾಲ್ಲೂಕಿನ ಎಲ್ಲ ಸಂಘ ಸಂಸ್ಥೆಗಳ ಅಧ್ಯಕ್ಷರು ಪಾಲ್ಗೊಳ್ಳುವರು.

# ಮಾಜಿ ಸೈನಿಕರುಗಳಿಂದ ವಿವಿಧ ಕೋರ್ಸ‌ಗಳಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಡೈರೆಕ್ಟೊರೇಟ್ ಜನರಲ್ ರಿಸೆಟ್ಲ್ಮೆಂಟ್ ಇವರಿಂದ ಸೇನಾ ಪಡೆಯ ನಿವೃತ್ತ ಅಧಿಕಾರಿಗಳು ಮತ್ತು ಮಾಜಿ ಸೈನಿಕರುಗಳಿಗೆ(ಜೆಸಿಒ/ಇತರೆ ರ್‍ಯಾಂಕ್) ವಿವಿಧ ಸರ್ಟಿಫಿಕೇಟ್ ಕೋರ್ಸ್ಗಳಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿದಾರರು 60 ವರ್ಷ ಒಳಗಿನವರಾಗಿರಬೇಕು. ನಿವೃತ್ತಿಯಾಗಿ ಮೂರು ವರ್ಷ ಮೀರಿರದ ನಿವೃತ್ತ ಅಧಿಕಾರಿಗಳು ಹಾಗೂ ಐದು ವರ್ಷ ಮೀರಿರದ ಮಾಜಿ ಸೈನಿಕರುಗಳಿಗೆ ಸರ್ಟಿಫಿಕೇಟ್ ಕೋರ್ಸಗಳಿಗೆ ಸೇರಲು ಅವಕಾಶವಿರುತ್ತದೆ. ನಿವೃತ್ತ ಅಧಿಕಾರಿಗಳಿಗೆ ಶೇಕಡ 60 ರಷ್ಟು ಶುಲ್ಕ ವಿನಾಯಿತಿಯಿದೆ. ಹಾಗೂ ಮಾಜಿ ಸೈನಿಕರುಗಳಿಗೆ(ಜೆಸಿಒ/ಇತರೆ ರ್‍ಯಾಂಕ್) ಯಾವುದೇ ಶುಲ್ಕವಿರುವುದಿಲ್ಲ.

ಈ ಅರ್ಹತೆಯನ್ನು ಹೊಂದಿರುವ ಮಾಜಿ ಸೇನಾ ಪಡೆಯ ಅಧಿಕಾರಿಗಳು ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಶಿವಮೊಗ್ಗ ಇಲ್ಲಿ ನೋಂದಣಿಯನ್ನು ಮಾಡಿಕೊಳ್ಳಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕ(ಪ್ರ) ಡಾ.ಸಿ.ಎ. ಹಿರೇಮಠ ತಿಳಿಸಿದ್ದಾರೆ.

# ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ "ಸಂವಿಧಾನ ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ" ಕಾರ್ಯಕ್ರಮ ಆಗಸ್ಟ್ 15ರಂದು

**ಗದಗ:** ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ರಾಷ್ಟ್ರಧ್ವಜಾರೋಹಣ ಹಾಗೂ "ಸಂವಿಧಾನ ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ" ಕಾರ್ಯಕ್ರಮ ಆ. 15ರಂದು ಬೆಳಿಗ್ಗೆ 9ಕ್ಕೆ ಜರುಗಲಿದೆ.

ಅಂದು ಕಾಂಗ್ರೆಸ್‌ನ ಎಲ್ಲ ಮುಖಂಡರು ರಾಷ್ಟ್ರ ಧ್ವಜಗಳನ್ನು ಹಿಡಿದು ಸ್ವಾತಂತ್ರ ಸ್ಮಾರಕಗಳವರೆಗೆ "ಸಂವಿಧಾನ ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ" ಎಂಬ ಘೋಷವಾಕ್ಯಗಳೊಂದಿಗೆ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಿಂದ ಮಹಾತ್ಮ ಗಾಂಧಿ ವೃತ್ತದವರೆಗೆ ಪಥಸಂಚಲನ ನಡೆಸಲಾಗುವುದು. ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ

ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು. ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ, ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಪಾಲ್ಗೊಳ್ಳುವರು.

ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವಿಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐ.ಟಿ, ಮತ್ತು ಡಾಟಾ ವಿಭಾಗ ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗ, ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಕೃಷ್ಣಗೌಡ ಎಚ್. ಪಾಟೀಲ ವಿನಂತಿಸಿದ್ದಾರೆ.

# ವಿವಿಧ ನಿಗಮಗಳ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಹಾಸನ :** ಡಾ.ಬಿ.ಆರ್.ಅಂಬೇಡ್ಕರ್‌ಅಭಿವೃದ್ಧಿ ನಿಗಮ, ಕರ್ನಾಟಕಆಧಿಜಾಂಬವ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ಸಫಾಯಿಕರ್ಮಚಾರಿಅಭಿವೃದ್ಧಿ ನಿಗಮ, ಕರ್ನಾಟಕತಾಂಡಅಭಿವೃದ್ಧಿ ನಿಗಮದ ಪರಿಶಿಷ್ಟ ಜಾತಿಯಜನರಆರ್ಥಿಕಅಭಿವೃದ್ಧಿಗಾಗಿ2025–26 ನೇ ಸಾಲಿಗೆ ಸ್ವಯಂಉದ್ಯೋಗ ನೇರಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ದಿಯೋಜನೆಯಡಿ ವ್ಯಾಪಾರ ಮತ್ತುಇತರೆ ಉದ್ಯಮಗಳಿಗೆ ಹಾಗೂ ಸ್ವಾವಲಂಬಿ ಸಾರಥಿಯೋಜನೆಯಡಿ ಸರಕು ಸಾಕಾಣಿಕೆ / ಟ್ಯಾಕ್ಸಿ (ಹಳದಿ ಬೋರ್ಡ್) ವಾಹನ ಖರೀದಿಸಲು ಹಾಗೂ ಮೈಕ್ರೋಕ್ರೆಡಿಟ್(ಪ್ರೇರಣಾ) ಯೋಜನೆ (ಮಹಿಳಾ ಸ್ವಸಹಾಯ ಗುಂಪುಗಳಿಗೆ) ಗಂಗಾಕಲ್ಯಾಣ ಯೋಜನೆಯಡಿ – ಕೊಳವೆಬಾವಿಗಾಗಿ ಹಾಗೂ ಭೂಒಡೆತನಯೋಜನೆಯಡಿ– ಜಮೀನುಖರೀದಿಸಲು ಮೇಲ್ಕಂಡ ನಿಗಮಗಳ ವತಿಯಿಂದ ಸಾಲದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಿದೆ.

# ರಸ್ತೆಗುಂಡಿ ಮುಚ್ಚಲು ಆಗ್ರಹಿಸಿ ಬಿಜೆಪಿ–ಜೆಡಿಎಸ್‌ಜೋಳದಾಳ್‌ನಲ್ಲಿ ಪ್ರತಿಭಟನೆ




**ಚಿಕ್ಕಮಗಳೂರು:** ಕಾಫಿನಾಡು ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗದಲ್ಲಿಅತಿ ಹೆಚ್ಚು ಮಳೆ ಬಿದ್ದ ಪರಿಣಾಮ ರಸ್ತೆಗಳು ಗುಂಡಿಗಳಿಂದ ಕೂಡಿದ್ದು, ಕೂಡಲೇ ರಸ್ತೆಗಳನ್ನು ದುರಸ್ಥಿಪಡಿಸಬೇಕೆಂದು ಆಗ್ರಹಿಸಿ ಇಂದು ಬಿಜೆಪಿ ಮತ್ತುಜೆಡಿಎಸ್ ಪಕ್ಷದಕಾರ್ಯಕರ್ತರು ಜೋಳದಾಳ್ ವೃತ್ತದಲ್ಲಿ ಬಾಳೆಗಿಡ ನೆಟ್ಟುರಸ್ತೆತಡೆ ನಡೆಸಿ ವಿನೂತನ ಪ್ರತಿಭಟನೆ ನಡೆಸಿದರು.

ಬಿಜೆಪಿ ಆಲ್ದೂರು ಮಂಡಲ ಹಾಗೂ ಜೆಡಿಎಸ್ ಪಕ್ಷದ ವ ತಿ ಯಿಂ ದ ಇಂ ದು ರ ಸ್ತೆ ಗುಂ ಡಿ ಮುಚ್ಚುವಂತೆ ಆಗ್ರಹಿಸಿ ಸರ್ಕಾರದ ಗಮನ ಸೆಳೆಯಲು ಆಯೋಜಿಸಲಾಗಿದ್ದರಸ್ತೆತಡೆ ಪ್ರತಿಭಟನೆಯಲ್ಲಿ ನೂರಾರುಗ್ರಾಮಸ್ಥರು ಹಾಗೂ ಕಾರ್ಯಕರ್ತರು ಭಾಗವಹಿಸಿ ಸರ್ಕಾರದ ವಿರುದ್ಧಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರ ತಿ ಭ ಟ ನಾ ಕಾ ರ ರ ನ್ನು ದ್ದೇ ಶಿ ಸಿ ಮಾತನಾಡಿದಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಹಾಗೂ ಪರಾಜಿತಅಭ್ಯರ್ಥಿ ದೀಪಕ್‌ದೊಡ್ಡಯ್ಯ ಸರ್ಕಾರ ಬಂದುಎರಡೂವರೆ ವರ್ಷಗಳಾದರೂ ರಸ್ತೆಗಳ ಗುಂಡಿ ಮುಚ್ಚಿಲ್ಲ. ಶೀಘ್ರವೇ ರಸ್ತೆಗಳ ಗುಂಡಿಯನ್ನು ಮುಂಚಿ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಒತ್ತಾಯಿಸಿದ ಅವರು, ಅಭಿವೃದ್ಧಿಯಲ್ಲಿ ಶೂನ್ಯ ಸಾಧನೆಎಂದು ಆರೋಪಿಸಿದರು.

ಶಾಸಕರು ಮತ್ತುಜಿಲ್ಲಾ ಸಚಿವರುಕ್ಷೇತ್ರ ಪ್ರವಾಸಕ್ಕೆಗೊಂಡುಜನ ಸಾಮಾನ್ಯರು ಪ್ರಸ್ತುತಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಬೇಕು. ಇನ್ನು 15 ದಿನಗಳೊಳಗೆ ರಸ್ತೆಗಳನ್ನು ಅಭಿವೃದ್ಧಿಪಡಿಸದಿದ್ದರೆಇಡೀಕ್ಷೇತ್ರ ಬಂದ್ ಮಾಡಿಉಗ್ರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಪಂಚ ಗ್ಯಾರಂಟಿ ಹೆಸರಿನಲ್ಲಿಅಧಿಕಾರಕ್ಕೆ ಬಂದಕಾಂಗ್ರೆಸ್ ಸರ್ಕಾರಜನಪರ ಆಡಳಿತ ನೀಡುವಲ್ಲಿ ವಿಫಲವಾಗಿ ಮತದಾರರಿಗೆ ಮೋಸ ಮಾಡುತ್ತಿದೆ. ಈ ಭಾಗದಲ್ಲಿ ಕಾಡಾನೆಗಳ ಹಾವಳಿ ಜೊತೆಗೆ ಕಾಡುಪ್ರಾಣಿಗಳ ದಾಳಿಯಿಂದ ಜನಸಾಮಾನ್ಯರು ತತ್ತರಿಸಿದ್ದು, ಜೀವ ಭಯದಲ್ಲಿದ್ದಾರೆಂದರು.

ಪರಿಶಿಷ್ಟ ಜಾತಿ, ಪಂಗಡದ ಪರವಾಗಿಇದೆಎಂದು ಹೇಳುವ ಸರ್ಕಾರ ಎಸ್‌ಸಿ, ಟಿಎಸ್‌ಪಿ 39 ಸಾವಿರಕೋಟಿ ರೂಗಳನ್ನು ಅನ್ಯಉದ್ದೇಶಕ್ಕೆ ಬಳಸಲಾಗಿದೆ. ಇದುಸಂವಿಧಾನ ಶಿಲ್ಪಿ ಡಾ. ಬಿ.ಆರ್‌ಅಂಬೇಡ್ಕರ್‌ಗೆ ಮಾಡಿದಅವಮಾನ. ದಲಿತರು ಮತ್ತು ಹಿಂದುಳಿದವರಿಗೆ ಮಾಡಿದಅಪಮಾನಎಂದು ಆರೋಪಿಸಿದರು.

ಜೆಡಿಎಸ್–ಬಿಜೆಪಿ ಒಗ್ಗೂಡಿದರೆರಾಜ್ಯದಲ್ಲಿಯಾವ ಶಕ್ತಿಯೂತಡೆಯಲು ಸಾಧ್ಯವಿಲ್ಲ. ಪ್ರಧಾನಿ ನರೇಂದ್ರ ಮೋದಿ, ಮಾಜಿ ಮುಖ್ಯಮಂತ್ರಿ ಬಿ.ಎಸ್‌ಯಡಿಯೂರಪ್ಪ, ಸಿ.ಟಿ. ರವಿ, ಎಂ.ಕೆ. ಪ್ರಾಣೇಶ್‌ಉತ್ತಮ ಆಡಳಿತ ನಡೆಸಿದ್ದಾರೆ ಎಂದು ಶ್ಲಾಘಿಸಿದರು.

ಜೆಡಿಎಸ್‌ಕ್ಷೇತ್ರ ಸಮಿತಿಅಧ್ಯಕ್ಷಡಿ. ಜೆ ಸುರೇಶ್ ಮಾತನಾಡಿ, ರಸ್ತೆಗಳು ಗುಂಡಿಬಿದ್ದುಅಪಘಾತ ಸೃಷ್ಟಿಸುವತ್ತ ಪರಿವರ್ತನೆಯಾಗಿರುವುದರಿಂದಜನಜೀವನಅಸ್ತವ್ಯಸ್ತವಾಗಿದೆ. ಸರ್ಕಾರ ಪರ್ಸಂಟೇಜ್ ನಲ್ಲಿತೊಡಗಿರುವುದರಿಂದಅಭಿವೃದ್ಧಿಯಲ್ಲಿ ಶೂನ್ಯವಾಗಿದೆಎಂದುದೂರಿದರು.

ಸರ್ಕಾರ ಮತ್ತುಅರಣ್ಯ ಇಲಾಖೆ ಕಾಡುಪ್ರಾಣಿಗಳ ಹಾವಳಿ ತಡೆಯುವಲ್ಲಿ ವಿಫಲವಾಗಿವೆ ಎಂದು ಆರೋಪಿಸಿದರು.

ಬಿಜೆಪಿ ಮಂಡಲ ಅಧ್ಯಕ್ಷರವಿಬಸರವಳ್ಳಿ ಮಾತನಾಡಿ, ಗುಂಡಿಯಲ್ಲಿರಸ್ತೆ ಹುಡುಕುವ ಕೆಲಸ ನಡೆಯುತ್ತಿದ್ದು, ಇದರಿಂದಕೂಡಲೇ ಮುಕ್ತಿನೀಡಿಜನಸಾಮಾನ್ಯರ ಸಂಚಾರಕ್ಕೆ ಅನುಕೂಲ ಮಾಡಬೇಕೆಂದು ಆಗ್ರಹಿಸಿದರು.

ಜಿಲ್ಲಾಉಸ್ತುವಾರಿ ಸಚಿವ ರ ೦ ಎ ಲಿ ಕ್ಯಾ ಪ್ಟ ರ್ ನ ಲ್ಲಿ ಓ ಡಾ ಡ ು ತ್ತಿ ರುವುದರಿಂದ ರಸ್ತೆಗಳ ದುಸ್ಥಿತಿ ಅವರಿಗೆಅರ್ಥವಾಗುತ್ತಿಲ್ಲ. ರಸ್ತೆಗಳಲ್ಲಿ ಓಡಾಡಿದರೆ ಮಾತ್ರಅದರಅರಿವಾಗುತ್ತದೆ. ದುರಸ್ಥಿ ವಿಳಂಭವಾದರೆ ಉಗ್ರ ಪ್ರತಿಭಟನೆ ಮಾಡುವುದಾಗಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಆವುತಿ ಹೋಬಳಿ ಅಧ್ಯಕ್ಷಕೆರಮಕ್ಕಿ ಮಹೇಶ್,ಗ್ಯಾರಂಟಿಯೋಜನೆ

ಹೆಸರನ್ನು ಹೇಳಿಕೊಂಡು ಅಧಿಕಾರಕ್ಕೆ ಬಂದಿರುವಕಾಂಗ್ರೆಸ್ ಸರ್ಕಾರ ಮೂರು ವರ್ಷಗಳು ಕಳೆದರು ಅಧಿಕಾರಕ್ಕೆ ಬಂದಿರುವ ಸಂಭ್ರಮಾಚರಣೆಯಲ್ಲಿಯೇತ 'ಒಡಗಿದ್ದು, ಇದುವರೆಗೂಯಾವುದೇರೀತಿಯಅಭಿವೃದ್ಧಿಯನ್ನು ಮಾಡಿಲ್ಲಎಂದರು.

ಭಾರತೀಯಜನತಾ ಪಕ್ಷ ಹಾಗೂ ಜೆಡಿಎಸ್ ಪಕ್ಷರಾಜ್ಯದಲ್ಲಿಒಗ್ಗಟ್ಟಿನಿಂದ ಕೆಲಸವನ್ನು ಮಾಡುತ್ತಿದೆ, ನಮ್ಮ ಹೋರಾಟಆರಂಭವಾಗಿದ್ದು ಮುಂದಿನ ದಿನಗಳಲ್ಲಿ ಆಲ್ದೂರು–ಬಾಳೆಹೊನ್ನೂರು ರಸ್ತೆಯಲ್ಲಿರುವ ಪ್ರತಿಯೊಂದು ಗುಂಡಿಗಳಿಗೂ ಒಂದೊಂದು ಹೆಸರುಗಳನ್ನಿಟ್ಟು ಸರಣಿ ಪ್ರತಿಭಟನೆ ನಡೆಸಲಾಗುವುದುಎಂದು ತಿಳಿಸಿದರು.

ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆಗಳಿಗೆ ಅನುದಾನ ನೀಡುತ್ತಿಲ್ಲ, ಗ್ರಾಮ ಪಂಚಾಯಿತಿಗಳು ನಿಷ್ಕ್ರಿಯಗೊಂಡಿವೆ, ಇದೇರೀತಿಯಇನ್ನೂ ಅನೇಕ ಸಮಸ್ಯೆಗಳಿಗೆ ಕಾಂಗ್ರೆಸ್ ಸರ್ಕಾರ ಸ್ಪಂದಿಸುತ್ತಿಲ್ಲ, ಗ್ಯಾರಂಟಿಯೋಜನೆಯ ಮೂಲಕ ಅಧಿಕಾರಕ್ಕೆ ಬಂದಿರುವಅವರುಗ್ಯಾರಂಟಿ ಯೋಜನೆಗಳ ಜೊತೆಯಲ್ಲಿ, ಮೂಲಭೂತ ಸೌಕರ್ಯಗಳನ್ನು ನೀಡುವಂತೆ ಈ ಮೂಲಕ ಸರ್ಕಾರಕ್ಕೆ ತಿಳಿಸಿದರು. ಬಿಜೆಪಿ ಮುಖಂಡರುಗಳಾದ ಪ್ರಸನ್ನ, ಬೂತನಕಾಡು ನಾಗೇಶ್, ಎನ್.ಎಂ.ಮಂಜುನಾಥ್, ಬೈಗೂರು ನಾಗೇಶ್, ಮೈಲಿಮನೆ ಕೃಷ್ಣಮೂರ್ತಿ, ಕುರುವಂಗಿ ವೆಂಕಟೇಶ್, ರವೀಂದ್ರ, ಅರವಿಂದ, ಸುಮಂತ್, ಭವ್ಯ ನಟೇಶ್, ಜ್ಯೋತಿ ಸುರೇಶ್, ಜೆಡಿಎಸ್‌ನ ಹೆಚ್.ಎನ್‌ಕೃಷ್ಣೇಗೌಡ, ಸತೀಶ್, ರುದ್ರೇಗೌಡ, ನಂದನ್, ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

# ಜ್ಞಾನದಾಹ ನೀಗಿಸುವಲ್ಲಿ ಗ್ರಂಥಾಲಯಗಳ ಪಾತ್ರ ಮಹತ್ವದ್ದು



**ಶಿರಹಟ್ಟಿ :** ಗ್ರಾಮೀಣ ಗ್ರಂಥಾಲಯಗಳು ಸಾರ್ವಜನಿಕರ ಜ್ಞಾನದಾಹವನ್ನು ನೀಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಈ ನಿಟ್ಟಿನಲ್ಲಿ ಓದುಗರಿಗೆ ಸಹಾಯಕವಾಗುವಂತೆ ಪುಸ್ತಕಗಳೊಂದಿಗೆ, ಡಿಜಿಟಲಿಕರಣಗೊಂಡ ಸಂಪನ್ಮೂಲಗಳನ್ನು ಹಾಗೂ ಉದ್ಯೋಗ ಕುರಿತು ಮಾಹಿತಿಯನ್ನು ಒದಗಿಸುವ ನಿಟ್ಟಿನಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸಬೇಕು ಎಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ಹೇಳಿದರು.

ಅವರು ಇಂದು ಮಾಚೇನಹಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯ ಭಾವನೂರ ಗ್ರಾಮದಲ್ಲಿ ನೂತನ ಗ್ರಂಥಾಲಯ ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಯಶೋದಾ ಗೋವಿಂದಗೌಡ ಪಾಟೀಲ, ಉಪಸ್ಥಿತರಿದ್ದು ಶುಭಹಾರೈಸಿ ವಿದ್ಯಾವಂತ ಯುವಕರು ಗ್ರಂಥಾಲಯಗಳಲ್ಲಿ ದಿನಪತ್ರಿಕೆ, ಕಾದಂಬರಿ, ಪುಸ್ತಕ, ಸ್ಪರ್ಧಾತ್ಮಕ ಪುಸ್ತಕಗಳನ್ನು ಓದುವ ಮೂಲಕ ತಮ್ಮ ಜ್ಞಾನವನ್ನು ಬೆಳಸಿಕೊಳ್ಳುತ್ತಿದ್ದರು. ಈಗ ಕಾಲ ಬದಲಾದಂತೆ ಆನ್‌ಲೈನ್ ಮೂಲಕ ವ್ಯಾಸಂಗ ಪುಸ್ತಕಗಳನ್ನು ಕಂಪ್ಯೂಟರ್‌ನಲ್ಲಿ ನೋಡಿ ಕಲಿತುಕೊಳ್ಳುವಂತಾಗಿದೆ. ವಿದ್ಯಾರ್ಥಿಗಳ ಜತೆಗೆ ಇತರರು ಇದನ್ನು ಬಳಸಿಕೊಳ್ಳುವ ಮೂಲಕ ತಮ್ಮ ಜಾನ ಹೆಚ್ಚಿಸಿಕೊಳ್ಳಬೇಕು ಎಂದು ನುಡಿದರು.ನಗರಗಳಲ್ಲಿ ವಿದ್ಯಾರ್ಥಿಗಳು ಖಾಸಗಿ ಸೈಬರ್‌ನಲ್ಲಿ ಹೋಗಿ ಕಲಿಯುತ್ತಿದ್ದಾರೆ ಹಾಗೂ ಅವರಿಗೆ ಬೇಕಾಗಿರುವ ಅರ್ಜಿಗಳನ್ನು ಅಲ್ಲಿ ಸಲ್ಲಿಸುತ್ತಾರೆ. ನಗರದವರಂತೆ ಗ್ರಾಮೀಣ ಭಾಗದವರೂ ಪ್ರಸ್ತುತ ಸ್ಪರ್ಧಾತ್ಮಕ ಪ್ರಪಂಚದಲ್ಲಿ ಹಿಂದುಳಿದಿದ್ದಾರೆ. ಗ್ರಾಮೀಣ ಭಾಗದವರ ಪ್ರತಿಭೆ ಹೊರತರಲು ಈ ಡಿಜಿಟಲ್ ಗ್ರಂಥಾಲಯ ಬಹಳ ಉಪಯುಕ್ತವಾಗಿದೆ ಎಂದರು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುರೇಶ ಕಲ್ಲೋಡರ ಮಾತನಾಡಿ, ಸರ್ಕಾರ ನೀಡಿರುವ ಡಿಜಿಟಲ್ ಗ್ರಂಥಾಲಯವನ್ನು ಪ್ರತಿಯೊಬ್ಬರೂ ಉಪಯೋಗಿಸಿಕೊಳ್ಳುವ ಮೂಲಕ ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಿರಿ. ಕಂಪ್ಯೂಟರ್ ಮೂಲಕ ಎಲ್ಲಾ ರೀತಿಯ ಮಾಹಿತಿಗಳನ್ನು ಪಡೆಯಬಹುದು ಎಂದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷರು. ಗ್ರಾಮ ಪಂಚಾಯತ ಸರ್ವ ಸದಸ್ಯರು, ಪಂಚಾಯತ ಸಿಬ್ಬಂದಿಗಳು, ಗ್ರಾಮಸ್ಥರು ಹಾಜರಿದ್ದರು.

# ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರಾಗಿ ಡಾ.ಸಿದ್ರಾಮ ವಾಘಮಾರೆ

**ಬಳ್ಳಾರಿ:** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರಾಗಿ ಬೀದರ್ ಜಿಲ್ಲೆಯ ಹುಮನಾಬಾದ್ ತಾಲೂಕು ಮಾಣಿಕನಗರ ಜಲಸಂಗಿಯ ಡಾ.ಸಿದ್ರಾಮ ದಾದಾರಾವ್ ವಾಘಮಾರೆ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ.

ಬೆಂಗಳೂರು ರೇಸ್ ಕೋರ್ಸ್ ರಸ್ತೆಯ ಕಾಂಗ್ರೆಸ್ ಭವನದಲ್ಲಿರುವ ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯಾಧ್ಯಕ್ಷ ಎಸ್.ಮಧು ಬಂಗಾರಪ್ಪ ಅವರು ಈ ಕುರಿತು ಆದೇಶ ಹೊರಡಿಸಿ ಶುಭ ಹಾರೈಸಿದ್ದಾರೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ರಾಜ್ಯಾಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಇವರ ಅನುಮೋದನೆ ಮೇರೆಗೆ ಡಾ.ಸಿದ್ರಾಮ ದಾದಾರಾವ್ ವಾಘಮಾರೆ

ಇವರು ರಾಜ್ಯ ಉಪಾಧ್ಯಕ್ಷರಾಗಿದ್ದು ಪಕ್ಷದ ರಾಜ್ಯ, ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಾರ್ಗದರ್ಶನದಲ್ಲಿ ಮತ್ತು ಸ್ಥಳೀಯ ನಾಯಕರ ಸಹಯೋಗದಲ್ಲಿ ಹಿಂದುಳಿದ ವರ್ಗಗಳ ವಿಭಾಗದ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ಕಾರ್ಯೋನ್ಮುಖರಾಗುವಂತೆ ಮಧು ಬಂಗಾರಪ್ಪ ಸೂಚಿಸಿದ್ದಾರೆ.

# ಯುವ ನಿಧಿ ಯೋಜನೆ: ಮಾಹಿತಿ ನೀಡಲು ಸೂಚನೆ

**ಹಾಸನ :** ಪದವಿ ಮತ್ತುಡಿಪ್ಲೊಮಾ ಪರೀಕ್ಷೆ ಮುಗಿದತಕ್ಷಣ ವ್ಯಾಸಂಗ ಮುಂದುವರೆಸಿದರೆ ಅಥವಾ ಕೆಲಸಕ್ಕೆ ಸೇರದಿದ್ದಲ್ಲಿಅಂತಹ ವಿದ್ಯಾರ್ಥಿಗಳು ಯುವನಿಧಿ ಯೋಜನೆಯಡಿಅರ್ಜಿ ಸಲ್ಲಿಸಲು ಮಾಹಿತಿ ನೀಡಲುಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿಕಚೇರಿ ಸಭಾಂಗಣದಲ್ಲಿಇಂದುಯುವ ನಿಧಿ ಯೋಜನೆಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದಅವರುಯುವನಿಧಿ ನೋಂದಣಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾಲೇಜುಗಳ ಹಾಗೂ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರುಗಳು ಸಭೆ ನಡೆಸಿ ನೋಂದಣಿಕಾರ್ಯವನ್ನು ಪ್ರಾರಂಭಿಸಿ ಹಾಸನ ಜಿಲ್ಲೆಯಲ್ಲಿ ಹೆಚ್ಚು ನೋಂದಣಿ ಮಾಡಬೇಕೆಂದು ಹಾಗೂ ನೋಂದಣಿಗೆತಾಂತ್ರಿಕ ಶಿಕ್ಷಣ ಇಲಾಖೆಯಿಂದಉತ್ತೀರ್ಣರಾದ ಅಭ್ಯರ್ಥಿಗಳ ಪಟ್ಟಿ ಪಡೆದು, ನೋಂದಣಿ ಅಧಿಕಗೊಳಿಸಬೇಕೆಂದು ತಿಳಿಸಿದರು.

ಕರ್ನಾಟಕದಲ್ಲಿ 6 ವರ್ಷಗಳೊಂದಿಗೆ ವಾಸಿಸುತ್ತಿರುವ ಅಭ್ಯರ್ಥಿಗಳ ಶೈಕ್ಷಣಿಕಅರ್ಹತೆಯಎಲ್ಲಾ ಮೂಲದಾಖಲಾತಿಗಳನ್ನು ಪಡೆದು ಪರಿಶೀಲಿಸಿ, ಅನುಮೋದನೆ ನೀಡಿ,

ವೆಬ್‌ಸೈಟ್‌ಗೆ ರವಾನಿಸಿದ ನಂತರ ನೇರ ನಗದು ವರ್ಗಾವಣೆಗೆ ಪರಿಶೀಲಿಸಲಾಗುವುದು. ನಂತರಎಲ್ಲಾಕಾಲೇಜು ಪ್ರಾಂಶುಪಾಲರುಒಂಆ(National Advisory Deposit)ನಲ್ಲಿ ಫಲಿತಾಂಶ ಬಂದತಕ್ಷಣ ವಿದ್ಯಾರ್ಥಿಗಳ ಮಾಹಿತಿಯನ್ನುಅತೀತುರ್ತಾಗಿ ಅಳವಡಿಸಿ ಯುವನಿಧಿ ನೋದಂಣಿಗೆ ಅನುಕೂಲ ಮಾಡಿಕೊಡಲು ಸೂಚಿಸಿದರು.

# ಪತಂಜಲಿ ಯೋಗ ಕಕ್ಷೆಯಲ್ಲಿ ಈಶ್ವರೀಯ ವಿಶ್ವವಿದ್ಯಾಲಯದ ಅಕ್ಕನವರಿಂದ ವಿಶೇಷ ರಕ್ಷಾಬಂಧನ



**ಗದಗ :** ನಗರದ ಮುನಸಿಪಲ್ ಮೈದಾನದಲ್ಲಿ ನಡೆಯುವ ನಿರಂತರ ಉಚಿತ ಯೋಗ ಕಕ್ಷೆಯಲ್ಲಿ ಇಂದು ಬೆಳಿಗ್ಗೆ ಏರ್ಪಡಸಿದ ವಿಶೇಷ ರಕ್ಷಾಬಂಧನ ಕಾರ್ಯಕ್ರಮದಲ್ಲಿ ಈಶ್ವರೀಯ ವಿಶ್ವವಿದ್ಯಾಲಯದ ಅಕ್ಕನವರಾದ ಬ್ರಹ್ಮಕುಮಾರಿ ರೇಖಾ ಅಕ್ಕನವರು ಮಾತನಾಡಿ ಈ ಜಗತ್ತಿಗೆ ಮುಖ್ಯವಾಗಿ ಬೇಕಾಗಿದ್ದು ಶಾಂತಿ. ಅದನ್ನು ನಾವು ಹುಡುಕುವ ಪ್ರಯತ್ನ ಮಾಡದೇ ನಮ್ಮನ್ನು ನಾವು ಬದಲಾವಣೆ ಮಾಡಿಕೊಳ್ಳಬೇಕು.

ಅಂದರೆ ನಮ್ಮಲ್ಲಿರುವ ಕಾಮ, ಕ್ರೋದ, ಮದ, ಮತ್ಸರ, ಅಹಂಕಾರ, ನಕಾರಾತ್ಮಕ ಚಿಂತನೆಯಂತ ಕೆಟ್ಟ ಗುಣಗಳನ್ನು ಬಿಟ್ಟು, ಸ್ನೇಹ, ಪ್ರೀತಿ, ಸಕಾರಾತ್ಮಕ ಚಿಂತನೆ ಇವುಗಳನ್ನು ಬೆಳೆಸಿಕೊಂಡು, ಪ್ರತಿದಿನ ಈಶ್ವರಿಯ ಜ್ಞಾನವನ್ನು ಪಡೆದುಕೊಳ್ಳಬೇಕು. ಪರಮಾತ್ಮನ ,ಮಕ್ಕಳಾದ ನಾವು ನೀವೆಲ್ಲರೂ ಸಹೋದರ ಸಹೋದರಿಯರು. ಹೆಣ್ಣು ಮಕ್ಕಳಿಗೆ ಸಹೋದರರಿಂದ ರಕ್ಷಣೆ ಅವಶ್ಯಕತೆ ಹೇಗೆ ಇದೆಯೋ, ಅದೇ ರೀತಿ ಸಹೋದರರಿಗೂ ಸಹೋದರಿಯರಿಂದ ರಕ್ಷಣ ಅವಶ್ಯವಿದೆ. ಪರಮಪಿತ ಪರಮಾತ್ಮ ರಕ್ಷಾಬಂಧನ ಕಾರ್ಯಕ್ರಮದಲ್ಲಿ ತಮ್ಮನ್ನು ಆಯ್ಕೆ ಮಾಡಿಕೊಂಡದ್ದು ತಾವುಗಳೇ ಧನ್ಯರು ಎಂದು ಶುಭ ಹಾರೈಸಿ ಯೋಗ ಕಕ್ಷೆಯಲ್ಲಿ ಎಲ್ಲ ಸಾಧಕರಿಗೂ ರಾಖಿ ಕಟ್ಟಿ ಸಿಹಿ ವಿತರಿಸಿದರು.

ಪ್ರಾರಂಭದಲ್ಲಿ ಪತಂಜಲಿ ಯೋಗ ಸಮಿತಿಯ ಜಿಲ್ಲಾ ಪ್ರಭಾರಿಗಳಾದ ಗಿರಿಯಪ್ಪ ಮಡಿವಾಳರ ಸರ್ವರನ್ನು ಸ್ವಾಗತಿಸಿದರು, ಕೊನೆಯಲ್ಲಿ ಪತಂಜಲಿ ಯೋಗ ಸಮಿತಿಯ ಕಾರ್ಯದರ್ಶಿ ನಾಗರತ್ನಾ ಬಡಿಗಣ್ಣವರ ವಂದಿಸಿದರು. ವೇದಿಕೆಯ ಮೇಲೆ ಜಿಲ್ಲಾ ಖಜಾಂಚಿಗಳಾದ ಕೆ.ಎಸ್.ಗುಗ್ಗರಿ, ಹಿರಿಯ ಯೋಗ ಶಿಕ್ಷಕರಾದ ವೆಂಕಟೇಶ ಮೆರವಾಡೆ, ರಾಷ್ಟ್ರ ಪ್ರಶಸ್ತಿ ವಿಜೇತ ಶಿಕ್ಷಕರಾದ ಎಸ್. ಎನ್.ಬಳ್ಳಾರಿ, ಹಿರಿಯ ಯೋಗ ಶಿಕ್ಷಕಿ ಬಸಮ್ಮ ಡಗಲಿ, ಹಿರಿಯ ಯೋಗ ಶಿಕ್ಷಕಿ ಶೋಭಾ ಬೆಂಗಳೂರು ಉಪಸ್ಥಿತರಿದ್ದರು. ಭಾರತ ಸ್ವಾಭಿಮಾನ ಟ್ರಸ್ಟ ಸಹಪ್ರಭಾರಿ ಬಸವರಾಜ ಹಿರೇಮಠ, ಕಿಸಾನ ಪಂಚಾಯತ ಜಿಲ್ಲಾ ಪ್ರಭಾರಿ ಪ್ರಮೋದ ಬೇಲಿ, ಮಹಿಳಾ ಸಂಘಟನಾ ಪ್ರಭಾರಿ ಲಕ್ಷ್ಮಿ ಗುರಿಕಾರ, ಬೇರೆ ಬೇರೆ ಕಕ್ಷೆಯಿಂದ ಸಮಸ್ತ ಯೋಗ ಸಾಧಕರು ಉಪಸ್ಥಿರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಅಂತರಾಷ್ಟ್ರೀಯ ಯುವದಿನ ಹಾಗೂ ತೀವ್ರತರದ ಹೆಚ್.ಐ.ವಿ. ಏಡ್ಸ್ ಅರಿವಿನ ಮಾಸಾಚರಣೆ ಉದ್ಘಾಟನಾ ಕಾರ್ಯಕ್ರಮ



**ಗದಗ :** ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಜಿಲ್ಲೆಯ ರೆಡ್ ರಿಬ್ಬನ್ ಕಾಲೇಜುಗಳು ಮತ್ತು ಜಿಲ್ಲೆಯ ಎಲ್ಲ ಶಿಕ್ಷಣ ಮಹಾವಿದ್ಯಾಲಯಗಳು ಹಾಗೂ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಾಹಾವಿದಾಲಯ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ಜಿಲ್ಲಾ ಮಟ್ಟದ ಅಂತರಾಷ್ಟ್ರೀಯ ಯುವ ದಿನ ಹಾಗೂ ತೀವ್ರತರ ಹೆಚ್.ಐ.ವಿ. ಅರಿವಿನ ಮಾಸಾಚರಣೆ ಉದ್ಘಾಟನಾ ಕಾರ್ಯಕ್ರಮ ಜರುಗಿತು.

ಸಮಾರಂಭ ಉದ್ಘಾಟಿಸಿದ ಡ್ಯಾಪ್ಕೂ ಅಧಿಕಾರಿಗಳಾದ ಡಾ. ಅರುಂಧತಿ ಕೆ. ಅವರು ಮಾತನಾಡಿ ಯೌವನವನ್ನು ಸದುಪಯೋಗಪಡಿಸಿಕೊಳ್ಳಲು ಮಾನಸಿಕ ದೈಹಿಕ ಸಾಮಾಜಿಕ ಆರೋಗ್ಯದ ಹಿತಕ್ಕಾಗಿ ಸಮಾಜದಲ್ಲಿ ಒಳ್ಳೆಯ ಸಂಪನ್ಮೂಲ ವ್ಯಕ್ತಿಗಳಾಗಿ ಬೆಳೆಯಬೇಕು ಹಾಗೂ ಹೆಚ್.ಐ.ವಿ. ಏಡ್ಸ್ ಅರಿವಿನ ಮಾಸಾಚರಣೆಯಲ್ಲಿ ರೋಗದ ಬಗ್ಗೆ ಮಾಹಿತಿ ತಿಳಿಯಲು ಕರೆ ನೀಡಿದರು. "ಸುಸ್ಥಿರ ಅಭಿವೃದ್ಧಿಗಾಗಿ ಸ್ಥಳೀಯ ಯುವ ಜನರ ಪಾತ್ರ ಹಾಗೂ ಗುರಿಗಳು" ಈ ವರ್ಷದ ಘೋಷಣೆಯಂತೆ ಎನ್ನುವಂತೆ ಇಂದಿನ ಯುವಕರು ಸಧೃಢ ಆರೋಗ್ಯವನ್ನು ಹೊಂದಿ, ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಬೇಕೆಂದು ತಿಳಿ ಹೇಳಿದರು.

ಇಂದಿನ ಯುವ ಜನಾಂಗದಲ್ಲಿ ಸಾಮಾಜಿಕ ಮೌಲ್ಯಗಳು ಕಡಿಮೆಯಾಗಿದ್ದು, ಗುರು ಹಿರಿಯರು, ತಂದೆ ತಾಯಿ ಎನ್ನುವ ಗೌರವವಿಲ್ಲದೆ ಆಧುನಿಕ ಮಾಧ್ಯಮದ ತಂತ್ರಜ್ಞಾನಕ್ಕೆ ಮಾರು ಹೋಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ನಮ್ಮ ದೇಶದಲ್ಲಿ 40% ಇರುವ ಯುವಜನರು ತಮ್ಮ ಜವಾಬ್ದಾರಿಯನ್ನು ಅರಿತು ದೇಶದ ಒಳಿತಿಗೆ ಪೂರಕವಾದ ತೀರ್ಮಾಣವನ್ನು ಕೈಗೊಂಡು ಸದೃಡವಾದ ದೇಶ ಕಟ್ಟುವಲ್ಲಿ ಕೈ ಜೋಡಿಸಬೇಕೆಂದು ತಿಳಿಸಿದರು. ಹಾಗೂ ರಕ್ತದಾನ ಮಾಡಲು ಯುವ ಸಮುದಾಯ ಮುಂದಾಗಬೇಕು, ರಕ್ತದಾನ ಮಾಡಲು ಹೆಚ್.ಬಿ. ಪ್ರಮಾಣ 12.5 ಗ್ರಾಂ ಇರಬೇಕು, ತೂಕ 45 ಕೆ.ಜಿ. ಗಿಂತ ಹೆಚ್ಚಿಗೆ ಇರಬೇಕು, 18 ರಿಂದ 60 ವಯೋಮಾನದ ಪುರುಷ ಮಹಿಳೆ ಎಂಬ ಬೇಧವಿಲ್ಲದೆ ಯಾರು ಬೇಕಾದರೂ ರಕ್ತದಾನ ಮಾಡಬಹುದು ಎಂದು ತಿಳಿಸಿದರು. ಹಾಗೂ ವಿದ್ಯಾರ್ಥಿಗಳಿಗೆ ಸದೃಢ ಆರೋಗ್ಯ ಮತ್ತು ಸನ್ನಡತೆಗೆ ಪ್ರಮಾಣ ವಚನ ಬೋಧಿಸಿದರು.

ಬಿ.ಬಿ.ಲಾಳಗಟ್ಟಿ ಜಿಲ್ಲಾ ಐಸಿಟಿಸಿ ಮೇಲ್ವಿಚಾರಕರು ಪ್ರಾಸ್ತಾವಿಕವಾಗಿ ಮಾತನಾಡಿ ಅಂತರಾಷ್ಟ್ರೀಯ ಯುವ ದಿನಾಚರಣೆಯ ಮಹತ್ವವನ್ನು ತಿಳಿಸುತ್ತಾ ಇಂದಿನ ಯುಗದಲ್ಲಿ ಯುವಕರು ಆರೋಗ್ಯ ಅರಿವವನ್ನು ಮೂಡಿಸಿ, ಶಿಕ್ಷಣವನ್ನು ಪರಿವರ್ತಿಸುವುದು. ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸಲು ಶಿಕ್ಷಣವನ್ನು ಹೆಚ್ಚು ಪ್ರಸ್ಥುತ ನ್ಯಾಯ ಸಮ್ಮತವಾಗಿಸುವ ನಿಟ್ಟಿನಲ್ಲಿ ಯುವಜನರ ಪಾತ್ರ ಮುಖ್ಯವಾಗಿರುವುದೆಂದು ತಿಳಿಸಿದರು. ರಕ್ತದಾನ ಮಾಡಲು ಹಾಗೂ ರೋಗಿಯ ಜೀವ ಉಳಿಸಲು ವೈದ್ಯರಾಗಬೇಕಿಲ್ಲ, ರಕ್ತದಾನ ಮಾಡಿದರೆ ಸಾಕು ಎಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯರಾದ ಶ್ರೀಮತಿ ಗಂಗೂಬಾಯಿ ಪವಾರರವರು ಅಧ್ಯಕ್ಷೀಯ ನುಡಿಗಳಲ್ಲಿ ಮಾತನಾಡಿ ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಯವ್ವನವನ್ನು ಜೋಪಾನ ಮಾಡಿಕೊಳ್ಳಬೇಕು ಹಾಗೂ ಇಲಾಖೆಯ ವಿವಿಧ ಸಾಮಾಜಿಕ ಕಾರ್ಯಗಳಲ್ಲಿ ಪಾಲ್ಗೊಂಡು ಸಾಮಾಜಿಕ ಸೇವೆಗೆ ಮುಂದಾಗಬೇಕೆಂದು ಹೇಳಿದರು.


ಸಮಾರಂಭದಲ್ಲಿ ಪ್ರೊ. ವಿ.ಪಿ ಪಾಟೀಲ, ಪ್ರೊ. ಎನ್. ಜಿ. ಚನ್ನಪ್ಪಗೌಡರ, ಪ್ರೋ. ವಿ.ಬಿ. ತಾಳಿ, ಪ್ರೋ. ಎಸ್ ವಾಯ್ ಕಠಾರೆ, ಪ್ರೋ. ಎಲ್.ಎಸ್. ಹೊಸಳ್ಳಿ, ಸಂತೋಷ ಬಡಿಗೇರ, ಕಾಲೇಜ ಹಾಗೂ ಆರೋಗ್ಯ ಸಿಬ್ಬಂದಿ ವರ್ಗ ಹಾಜರಿದ್ದರು.

# ಶ್ರೀ ಜಯವಿಭವ ಮುರುಘರಾಜೇಂದ್ರ ಸ್ವಾಮಿಗಳ ಸ್ಮರಣೆ

**ಚಿತ್ರದುರ್ಗ, ಆ.14 :** ಜಯದೇವ ಜಗದ್ಗುರುಗಳು ಲಿಂಗೈಕ್ಯ ಎಸ್.ನಿಜಲಿಂಗಪ್ಪನವರು ಶಿಕ್ಷಣವನ್ನು ಪಡೆಯಲು ನೆರವನ್ನು ನೀಡುತ್ತಾರೆ. ಮುಂದೆ ಅವರು ಓದಿ ವಕೀಲ ವೃತ್ತಿ ಮಾಡುತ್ತ ರಾಜಕೀಯ ಪ್ರವೇಶ ಮಾಡಿ ಈ ರಾಜ್ಯದ ಮುಖ್ಯಮಂತ್ರಿಯೂ ಆಗುತ್ತಾರೆ. ನಮ್ಮ ನಂತರ ಮುಂದಿನ ಜಗದ್ಗುರುಗಳನ್ನಾಗಿ ಯಾರನ್ನು ಮಾಡಬೇಕೆಂದು ಗುರುಗಳು ನಿಜಲಿಂಗಪ್ಪನವರಿಗೆ ವಹಿಸುತ್ತಾರೆ. ಎಂತಹ ಘಟನೆ ಇದು. ಎಲ್ಲಾದರೂ ನಡೆಯಲಿಕ್ಕೆ ಸಾಧ್ಯವಾ. ಅಂದು ಜಯವದೇವರು ಜಯವಿಭವರನ್ನು ಆಯ್ಕೆ ಮಾಡಿದ ಪ್ರಸಂಗದ ನೆನಪನ್ನು ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ. ವಿದ್ಯಾಪೀಠ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಸ್ವಾಮೀಜಿ ಹೇಳಿದರು.

ಅವರು ಇಲ್ಲಿನ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಶ್ರಾವಣಮಾಸದ ಅಂಗವಾಗಿ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಕರ್ತೃವಿನ ಸನ್ನಿಧಾನದಲ್ಲಿ ವಚನಾಭಿಷೇಕ, ವಚನ ಪಠಣ ಹಾಗೂ ಮುರಿಗಾ ಗುರು ಪರಂಪರೆಯ ಮಹಾಸ್ವಾಮಿಗಳವರ ಜೀವನ ಸಾಧನೆಯ ವ್ಯಕ್ತಿತ್ವ ಪಥದರ್ಶನದ 21ನೇ ದಿನದ ಕಾರ್ಯಕ್ರಮದಲ್ಲಿ ಪೀಠ ಪರಂಪರೆಯ 18ನೇ ಗುರುಗಳಾದ ಜಯವಿಭವ ಮುರುಘರಾಜೇಂದ್ರ ಮಹಾಸ್ವಾಮಿಗಳವರ ವ್ಯಕ್ತಿತ್ವದ ದರ್ಶನ ಮಾಡಿಸುತ್ತ ಸಾಗಿದ ಶ್ರೀಗಳು, ಚಿತ್ರದುರ್ಗ ಬೃಹನ್ಮಠಕ್ಕೆ ನೇಮಕ ಮಾಡುವ ನಿಟ್ಟಿನಲ್ಲಿ ಮೂವರ ಪಟ್ಟಿ ಇರುತ್ತದೆ. ಅದರಲ್ಲಿ ಜಯವಿಭವರನ್ನು ಪೀಠಾಧ್ಯಕ್ಷರನ್ನಾಗಿಸುವ ತೀರ್ಮಾನವಾಗುತ್ತದೆ. ಆಗಿನ ಕಾಲಕ್ಕೆ ಅರ್ಧ ಕೋಟಿಯಷ್ಟು ಹಣವನ್ನು ಶಿಕ್ಷಣಕ್ಕೆ ವ್ಯಯ ಮಾಡಿದ ಕೀರ್ತಿ ಜಯದೇವರಿಗೆ ಸಲ್ಲುತ್ತದೆ. ಅಂತಹುದೇ ಸಾಮಾಜಿಕ ಹೊಣೆಗಾರಿಕೆಯನ್ನು ಜಯವಿಭವ ಸ್ವಾಮಿಗಳು ವಹಿಸಿಕೊಂಡು ಮುನ್ನಡೆಯುತ್ತಾರೆ. ಜಯದೇವ ಜಗದ್ಗುರುಗಳು ಸೂರ್ಯನಂತೆ ಪ್ರಕಾಶಿಸಿದರು. ಜಯವಿಭರು ಚಂದ್ರನಂತೆ ಇಡೀ ಸಮಾಜವನ್ನು ಅತ್ಯಂತ ಪ್ರೀತಿಯಿಂದ ಕಂಡರು. ಸಿಟ್ಟಿನ ಕಾರಣದಿಂದ ಅಂದು ಮಲ್ಲಿಕಾರ್ಜುನ ಶ್ರೀಗಳ ಬದಲಿಗೆ ಜಯವಿಭವರನ್ನು ನೇಮಕ ಮಾಡುತ್ತಾರೆ. ಜಯವಿಭವ ಶ್ರೀಗಳು ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ ಹಾಗೆಯೇ ಅವರು ಕೃಷಿ ತೋಟಗಾರಿಕೆಗೆ ಹೆಚ್ಚಿನ ಒಲವನ್ನು ತೋರಿದ್ದರು. ಯುದ್ಧಕಾಲದಲ್ಲಿ ದೇಶಪ್ರೇಮದಿಂದ ಧನಸಹಾಯವನ್ನು ಶ್ರೀಮಠದಿಂದ ದೇಶಕ್ಕೆ ಸಮರ್ಪಣೆ ಮಾಡಿದ್ದೂ ಇದೆ. ಅನೇಕ ಸಮಾಜೋಧಾರ್ಮಿಕ ಕಾರ್ಯಗಳನ್ನು ಮಾಡಿದ ಶ್ರೀಗಳು 1964ರಲ್ಲಿ ಬಯಲಾಗುತ್ತಾರೆ. ಅವರ ಲಿಂಗೈಕ್ಯ ಸಮಾಧಿ ಬೃಹನ್ಮಠದ ಆವರಣದಲ್ಲಿದೆ ಎಂದು ಇತಿಹಾಸವನ್ನು ಸ್ಮರಿಸಿದರು.

ಸಮ್ಮುಖ ವಹಿಸಿದ್ದ ಮುರುಘಾಮಠದ ಸಾಧಕ ಶ್ರೀಗಳಾದ ಬಸವಮುರುಘೇಂದ್ರ ಸ್ವಾಮೀಜಿ ಮಾತನಾಡಿ, ಜಯವಿಭವ ಶ್ರೀಗಳು ಎಂದರೆ ಸದುವಿನಯತೆ, ಗಂಭೀರತೆ, ಸದಾಚಾರದಂಥ ಮಹಾಮೇರು ವ್ಯಕ್ತಿತ್ವದವರಾಗಿದ್ದು, ತುಂಬಿದ ಕೊಡದಂತಹ ಸ್ವಭಾವ. ಕಾಶಿಯಲ್ಲಿ ಅಧ್ಯಯನ ಮಾಡಿ ಬಂದ ಅವರಿಗೆ ಬೃಹನ್ಮಠದ ಪೀಠಾಧ್ಯಕ್ಷರಾಗಿ ಜಯದೇವರ ಪಥದಲ್ಲಿ



ಹೆಜ್ಜೆ ಇಡುತ್ತ ಮಠದ ಖಾಲಿ ಜಮೀನುಗಳನ್ನು ಹಸನುಗೊಳಿಸಿ ಅಲ್ಲಿ ಕೃಷಿ, ತೋಟಗಾರಿಕೆ ಹಾಗೂ ಹೈನು ಇತ್ಯಾದಿ ಚಟುವಟಿಕೆಗಳಿಗೆ ಆದ್ಯತೆ ನೀಡಿ ಶ್ರೀಮಠದ ದಾಸೋಹಕ್ಕೆ ಒತ್ತು ನೀಡುತ್ತಾರೆ. ಭಕ್ತರನ್ನು ಮಾತೃವಾತ್ಸಲ್ಯದಿಂದ ಕಾಣುತ್ತಿದ್ದರು. ಮಠಕ್ಕೂ ಭಕ್ತರಿಗೂ ಉತ್ತಮ ಬಾಂಧವ್ಯ ಕಲ್ಪಿಸಿ ಜನಾನುರಾಗಿಯಾಗಿದ್ದಾರೆಂದು ಸ್ಮರಿಸಿದರು.

ವಿಷಯಾವಲೋಕನ ಮಾಡಿದ ಎಸ್.ಜೆ.ಎಂ. ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಡಾ|| ಸವಿತಾ ಅವರು ಮಾತನಾಡಿ, ಜಯದೇವರು ಲಿಂಗೈಕ್ಯರಾದ ನಂತರ ಜಯವಿಭವ ಶ್ರೀಗಳು ಅಹಂಕಾರ ತೋರದೆ ಸ್ವತಂತ್ರವಾದೆವಲ್ಲ ಎಂಬ ಹಮ್ಮುತೋರದೆ ಗುರುಗಳು ಹೋದ ನಂತರ ನಾನು ಏಕಾಂಗಿಯಾದೆನಲ್ಲ ಎಂದು ಚಿಂತಿಸುತ್ತ ಅವರು ಬಿಟ್ಟುಹೋದ ಕೆಲ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಮುಂದಾದರು. ಜಯವಿಭವ ಶ್ರೀಗಳು ವೈರಾಗ್ಯದ ಪ್ರತಿಮೂರ್ತಿ, ವಿಷಯ ತ್ಯಾಗಿ, ನಿರಾಡಂಬರ ಹಾಗೂ ಸರಳ ಸಹೃದಯ ವ್ಯಕ್ತಿತ್ವವುಳ್ಳವರಾಗಿದ್ದರು. ದೀನ ದಲಿತರ ಪರವಾಗಿ ಕೆಲಸ ಮಾಡಿದರು. 1962ರಲ್ಲಿ ಚೀನಾ ಭಾರತದ ಮೇಲೆ ಯುದ್ಧ ಸಾರಿದಾಗ ಸ್ವಾಮಿಗಳು ತಮ್ಮ ಮಠದ ಚಿನ್ನದಕಿರೀಟ ಸೇರಿದಂತೆ ಇತರೆ ಆಭರಣಗಳನ್ನು ದೇಶ ಉಳಿದರೆ ನಾವು ಉಳಿದೇವು ಎನ್ನುವ ಧ್ಯೇಯವನ್ನು ಹೊಂದಿ ದೇಶಕ್ಕೆ ಸಮರ್ಪಿಸಿ ದೇಶಾಭಿಮಾನ ಮೆರೆದದ್ದು ಸ್ಮರಣೀಯ ಘಟನೆಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೊಸದುರ್ಗ ಒಪ್ಪತ್ತಿನಸ್ವಾಮಿ ಮಠದ ಸದಸ್ಯರುಗಳಾದ ಷಡಾಕ್ಷರಯ್ಯ, ಸಿದ್ಧರಾಮಣ್ಣ, ರೇಣುಕುಮಾರ್, ನಿವೃತ್ತ ಪ್ರಾಚಾರ್ಯ ಕೆ.ಸಿ. ರಮೇಶ್, ವರ್ತಕ ಅಶೋಕ ಚಕ್ರವರ್ತಿ ಮುಂತಾದವರು ಇಂದಿನ ಸೇವಾಕರ್ತರಾಗಿ ಭಾಗವಹಿಸಿದ್ದರು. ಎಸ್.ಜೆ.ಎಂ. ನರ್ಸಿಂಗ್ ಕಾಲೇಜಿನ ಸಿಬ್ಬಂದಿಯವರು ಕಾರ್ಯಕ್ರಮದ ನಿರ್ವಹಣೆಯನ್ನು ವಹಿಸಿಕೊಂಡಿದ್ದರು.

ಜಮುರಾ ಕಲಾವಿದ ಉಮೇಶ್ ಸಂಗಪ್ಪ ಪತ್ತಾರ್ ವಚನ ಹಾಗೂ ಜಯದೇವರು ಜಯವಿಭವ ಶ್ರೀಗಳ ಕುರಿತಾದ ಗೀತೆಗಳನ್ನು ಹಾಡಿದರು. ಬಸವರಾಜ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

**ಮುಂದಿನ ಕಾರ್ಯಕ್ರಮ :** ಮುರುಘಾ ಪರಂಪರೆಯಲ್ಲಿ ಆಗಿಹೋದ ಪೀಠಾಧಿಪತಿಗಳ ಸಾಧನೆಯ ವ್ಯಕ್ತಿತ್ವ ಪಥದರ್ಶನ ಇಂದಿಗೆ ಮುಗಿದು ದಿ. 16-08-2025 ರಿಂದ 22-08-2025ರವರೆಗೆ 12ನೇ ಶತಮಾನದ ಕಾಯಕ ಚಳವಳಿಯ ವಚನಕಾರ್ತಿಯರ ಪಥದರ್ಶನ ನಡೆಯಲಿದೆ. 16ರಂದು ಶರಣೆ ಅಮುಗೆ ರಾಯಮ್ಮ ಹಾಗೂ ಶರಣೆ ಮುಕ್ತಾಯಕ್ಕ ಅವರ ಬಗೆಗೆ ವಿಷಯಾವಲೋಕನ ನಡೆಯಲಿದ್ದು, 23-8-2025ರ ಶನಿವಾರ ಶ್ರೀ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಪಥದರ್ಶನ ಕಾರ್ಯಕ್ರಮದ ಮೂಲಕ ಸಮಾರೋಪಗೊಳ್ಳಲಿದೆ.

# ಅಣಬೆ ಬೇಸಾಯದಿಂದ ಸ್ವಾವಲಂಬಿ ಬದುಕು: ಡಾ.ಎ.ಟಿ.ಕೃಷ್ಣಮೂರ್ತಿ

**ಚಿಕ್ಕಮಗಳೂರು, ಆ.14:** ಅಣಬೆ ಬೇಸಾಯದಿಂದ ಆರ್ಥಿಕ ಮಟ್ಟ ಹೆಚ್ಚಿಸಿಕೊಳ್ಳುವುದರ ಜೊತೆಗೆ ಸ್ವಾವಲಂಬಿಗಳಾಗಬಹುದು. ಹೆಚ್ಚಾಗಿ ಗೃಹಿಣಿಯರು ತಮ್ಮ ಬಿಡುವಿನ ಸಮಯವನ್ನು ಸದುಪಯೋಗಪಡಿಸಿಕೊಂಡು ಉದ್ಯಮವಾಗಿ ರೂಪಿಸಿಕೊಳ್ಳಬಹುದು ಎಂದು ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥ ಡಾ.ಎ.ಟಿ.ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಮೂಡಿಗೆರೆಯ ಐ.ಸಿ.ಎ.ಆರ್. ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಆಗಸ್ಟ್ 12ರಂದು ಹಮ್ಮಿಕೊಳ್ಳಲಾಗಿದ್ದ ಅಣಬೆ ಬೇಸಾಯ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಮೂಡಿಗೆರೆ ತೋಟಗಾರಿಕೆ ಮಾಹಾ ವಿದ್ಯಾಲಯದ ಸಹ ವಿಸ್ತರಣಾಧಿಕಾರಿ ಡಾ.ಎಂ.ಶಿವಪ್ರಸಾದ್ ಅವರು ಮಾತನಾಡಿ ಅಣಬೆಯಲ್ಲಿ ಯಾವುದೇ ಸಕ್ಕರೆ, ಕಾರ್ಬೋಹೈಡ್ರೇಟ್ ಅಂಶವಿಲ್ಲದಿರುವುದರಿಂದ ಮದುಮೇಹಿಗಳು ಅಣಬೆಯನ್ನು ಸೇವಿಸಬಹುದು. ಕ್ಯಾಲೋರಿ ಹಾಗೂ ಕೊಬ್ಬಿನ ಅಂಶ ಕಡಿಮೆ ಇರುವುದರಿಂದ ಹೃದ್ರೋಗಿಗಳು ಮತ್ತು ಸ್ಥೂಲಕಾಯವುಳ್ಳವರು ಸೇವಿಸಬಹುದು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಮೂಡಿಗೆರೆ ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷ ಡಿ.ಎಲ್.ಅಶೋಕ್ ಕುಮಾರ್ ಅವರು ಮಾತನಾಡಿ, ಜಿಲ್ಲೆ ಅಣಬೆ ಬೇಸಾಯಕ್ಕೆ ಸೂಕ್ತವಾದ ವಾತಾವರಣವನ್ನು ಹೊಂದಿದ್ದು, ಜಿಲ್ಲೆಯ ಯುವ ಪೀಳಿಗೆಯು ಈ ತರಬೇತಿಯಿಂದ ಹೆಚ್ಚು ಹೆಚ್ಚು ಅಣಬೆ ಉತ್ಪಾದನೆ ಮಾಡಿ ಆರ್ಥಿಕ ಲಾಭವನ್ನು ಪಡೆಯಬೇಕೆಂದು ಕಿವಿಮಾತು ಹೇಳಿದರು.

ಮೂಡಿಗೆರೆ ರೈತ ಉತ್ಪಾದಕರ ಸಂಘದ ಅಧ್ಯಕ್ಷ ಹೆಚ್.ಕೆ.ಪೂರ್ಣೇಶ್ ಅವರು ಮಾತನಾಡಿ, ಅಣಬೆ ಬೇಸಾಯ ಮಾಡುತ್ತಿರುವವರ ಕುರಿತು ಮಾತನಾಡಿ ಉತ್ತಮ ಉದಾಹರಣೆ ನೀಡುವುದರ ಜೊತೆಗೆ ತರಬೇತಿದಾರರನ್ನು ಅಣಬೆ ಬೇಸಾಯ ಮಾಡಲು ಹುರಿದುಂಬಿಸಿದರು.

ವಿಜ್ಞಾನಿ (ಗೃಹ ವಿಜ್ಞಾನ) ಡಾ. ಸ್ನೇಹಾ ಶೀಗಿಹಳ್ಳಿ ಅವರು ಮಾತನಾಡಿ ಅಣಬೆ ಬೇಸಾಯ ಮಾಡುವುದರ ಜೊತೆಗೆ ಅಣಬೆಯಿಂದ ವಿವಿಧ ಮೌಲ್ಯವರ್ಧಿತ ಪದಾರ್ಥಗಳನ್ನು (ಅಣಬೆ ಸ್ಯಾಂಡ್‌ವಿಚ್, ಅಣಬೆ ಫ್ರೈ, ಅಣಬೆ ಕಟ್ಲೆಟ್, ಅಣಬೆ ಮಂಚೂರಿ, ಅಣಬೆ ಸೂಪ್, ಅಣಬೆ ನೂಡಲ್ಸ್, ಅಣಬೆ ಉಪ್ಪಿನಕಾಯಿ, ಅಣಬೆ ಬಿರಿಯಾನಿ ಇತ್ಯಾದಿ.) ತಯಾರಿಸಬಹುದು ಹಾಗೂ ಅಣಬೆಯನ್ನು ಪ್ರತಿನಿತ್ಯ ಅಡುಗೆಯಲ್ಲಿ ಬಳಸುವುದರಿಂದ ಆರೋಗ್ಯ ಸಮಸ್ಯೆಯಿಂದ ಹೊರ ಬರಬಹುದು. ಗುಣಮಟ್ಟದ ಪ್ರೊಟೀನ್ ಹೊಂದಿರುವುದರಿಂದ ಮಕ್ಕಳು ಮತ್ತು ಗರ್ಭಿಣಿ ಮಹಿಳೆಯರು ಉಪಯೋಗಿಸುವುದು ಸೂಕ್ತ ಹಾಗೂ ಹೆಚ್ಚು ಫೈಬರ್, ನಾರಿನ ಅಂಶ ಇರುವುದರಿಂದ ಮಲಬದ್ಧತೆ, ಕ್ಯಾನ್ಸರ್ ರೋಗಿಗಳು ಇದನ್ನು ಉಪಯೋಗಿಸಬಹುದು ಎಂದು ಮನವರಿಕೆ ಮಾಡಿದರು.

ಇದೇ ವೇಳೆ ಅಣಬೆಯ ಬಗ್ಗೆ ವೈಜ್ಞಾನಿಕವಾಗಿ ಮಾಹಿತಿ ನೀಡಿದ ಅವರು, ಶಿಬಿರಾರ್ಥಿಗಳಿಗೆ ಪ್ರಾತ್ಯಕ್ಷಿಕೆ ಮೂಲಕ ಅಣಬೆ ಬೇಸಾಯ ಕ್ರಮಗಳನ್ನು ವಿಸ್ತೃತವಾಗಿ ತಿಳಿಸಿದರು.

ಬಣಕಲ್ ಬಸ್ನಿಯ ಅಣಬೆ ಉದ್ಯಮಿ ಬಿ.ಎಸ್.ಶಿಶಿರ್ ಅವರು ಮಾತನಾಡಿ, ವಾಣಿಜ್ಯ ಮಟ್ಟದಲ್ಲಿ ಅಣಬೆ ಬೇಸಾಯದ ಕುರಿತು ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ

# ಜಿಲ್ಲೆಯಲ್ಲಿ ಉಸ್ತುವಾರಿ ಸಚಿವರ ಪ್ರವಾಸ

**ಚಿಕ್ಕಮಗಳೂರು, ಆ.14:** ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಆಗಸ್ಟ್ 15 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಆಗಸ್ಟ್ 15 ರಂದು ಬೆಳಿಗ್ಗೆ 8.30ಕ್ಕೆ ಚಿಕ್ಕಮಗಳೂರು ನಗರಕ್ಕೆ ಆಗಮಿಸಲಿರುವ ಸಚಿವರು, ಬೆಳಿಗ್ಗೆ 9 ಗಂಟೆಗೆ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ನಗರದ ನೇತಾಜಿ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬೆಳಿಗ್ಗೆ 10.40ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳ ಹಾಗೂ ಸಹಾಯಕ ಆಯುಕ್ತರ ಕಚೇರಿಯ ಕಂದಾಯ ದಾಖಲೆಗಳ ಡಿಜಿಟಲೀಕರಣ ಕಾರ್ಯದ ಉದ್ಘಾಟನೆ ನೆರವೇರಿಸುವರು. ಬೆಳಿಗ್ಗೆ 11 ಗಂಟೆಗೆ ಟೌನ್ ಕೋ-ಆಪರೇಟಿವ್ ಸೊಸೈಟಿಯ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸುವರು.

ಮಧ್ಯಾಹ್ನ 12 ಗಂಟೆಗೆ ಬೆಳವಾಡಿ ಕೆರೆಗೆ ಬಾಗಿನ ಅರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಚಿವರು, ಮಧ್ಯಾಹ್ನ 12.15ಕ್ಕೆ ಎತ್ತಿನಹೊಳೆ ಯೋಜನೆಯಿಂದ ಬೆಳವಾಡಿ ಮತ್ತು ದೇವನೂರು ಕೆರೆ ತುಂಬಿಸಿದ ಅಂಗವಾಗಿ ಆಯೋಜಿಸಲಾಗಿರುವ ಕೃತಜ್ಞತಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.




Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**